

ವೇಣು ಸಾರಥ್ಯದಲ್ಲಿ...

# ಸಂಜೆ ಮುಗಿಲು

ಸಂಪುಟ: 21, ಸಂಚಿಕೆ: 236, ಪುಟಗಳು: 8, ಮಂಗಳವಾರ, 4 ಜೂನ್ 2024 **RNI NO. KARKAN/2002/08054**
epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ


**ಸುಭಾಷಿತ**

ನಮಗೆ ಅಗತ್ಯ ಇದ್ದಷ್ಟನ್ನು ಮಾತ್ರ ತಿಳಿದುಕೊಂಡು, ಮಿಕ್ಕಿದ್ದನ್ನು ನೋಡಿ ಅಚ್ಚರಿಪಡುತ್ತಾ ಇದ್ದುಬಿಡುವುದು ಒಳ್ಳೆಯದು.

। ಪೂರ್ಣಚಂದ್ರ ತೇಜಸ್ವಿ

**ಪಂಚಾಂಗ**

(ಮಂಗಳವಾರ 4, ಜೂನ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಕೃಷ್ಣ ಪಕ್ಷ,
- ತಿಥಿ: ತೃತೀಯ
- ನಕ್ಷತ್ರ: ಅಶ್ವಿನಿ
- ರಾಹುಕಾಲ: 03 : 30 PM -04 : 59 PM
- ಗುಳಿಕಕಾಲ: 12 : 32 PM - 02 : 01 PM
- ಯಮಗಂಡಕಾಲ: 09 : 34 AM - 11 : 03 AM

## ಸಂಕ್ಷಿಪ್ತ ಸುದ್ದಿ

### ಲವ್ ಜಿಹಾದ್ ಷಡ್ಯಂತ್ರ ಆರೋಪ!



**ವಿಜಯಪುರ:** ಜಿಲ್ಲೆಯ ಕೊಲ್ಹಾರ ಪಟ್ಟಣದ ವಿವಾಹಿತ ದಲಿತ ಮಹಿಳೆ ಚಂದ್ರಭಾಗ ಹುಗ್ಗೆನವರ ಹಾಗೂ ಅವಳ ಮೂವರು ಮಕ್ಕಳನ್ನು ಮುಸ್ಲಿಂ ಸಮಾಜದ ಅಬ್ದುಲಗಫಾರ ಕಲಾದಗಿ ಎಂಬ ಯುವಕನೂರ್ವ ಅಪಹರಿಸಿರುವುದರ ಹಿಂದೆ ಲವ್ ಜಿಹಾದ್ ಷಡ್ಯಂತ್ರ ಎದ್ದು ಕಾಣುತ್ತಿದೆ ಎಂದು ಆರೋಪಿಸಿ ಶ್ರೀರಾಮ ಸೇನೆ ರಾಜ್ಯಾಧ್ಯಕ್ಷ ಗಂಗಾಧರ ಕುಲಕರ್ಣಿ ಆಕ್ರೋಶ ವ್ಯಕ್ತಪಡಿಸಿದರು. ಪುಟ 2

### ಪ್ರಜ್ವಲ್ ರೇವಣ್ಣ ಗೆಲುವಿಗಾಗಿ ದೇವಸ್ಥಾನದಲ್ಲಿ ಪೂಜೆ



**ಹಾಸನ:** ಜಿಲ್ಲೆಯ ಜೆಡಿಎಸ್ ಕಾರ್ಯಕರ್ತರಿಗೆ ತಮ್ಮ ಸಂಸದ ಪ್ರಜ್ವಲ್ ರೇವಣ್ಣ ಮೇಲೆ ಅಭಿಮಾನ ಕಡಿಮೆಯಾಗಿಲ್ಲ. ಲೈಂಗಿಕ ಅಪರಾಧಗಳ ಪ್ರಕರಣದಲ್ಲಿ ಆರೋಪಿಯಾಗಿ ದೇಶದಿಂದ ತಲೆಮರೆಸಿಕೊಂಡು ಒಂದು ತಿಂಗಳು ನಂತರ ವಾಪಸ್ಸು ಬಂದು ಎಸ್ ಐಟಿಯಿಂದ ಬಂಧನಕ್ಕೊಳಗಾಗಿದ್ದರೂ ಕಾರ್ಯಕರ್ತರು ಅವರ ಮೇಲೆ ವಿಶ್ವಾಸವಿರಿಸಿಕೊಂಡಿದ್ದಾರೆ. ಪ್ರಜ್ವಲ್ ಸೆಕ್ಸ್ ಟೇಪುಗಳು ಹೊರಬಿದ್ದ ಬಳಿಕ ಹಾಸನದ ಜನ ಜೆಡಿಎಸ್ ಅಭ್ಯರ್ಥಿಯ ಬಗ್ಗೆ ಯಾವ ಭಾವನೆ ತಳೆದಿದ್ದಾರೋ ಗೊತ್ತಿಲ್ಲ, ಇನ್ನು ಸ್ವಲ್ಪ ಹೊತ್ತಿನಲ್ಲಿ ಜೆಡಿಎಸ್ ಮತ್ತು ಕಾಂಗ್ರೆಸ್ ಪಕ್ಷದ ಶ್ರೇಯಸ್ ಪಟೇಲ್ ಹಣೆಬರಹದ ಬಗ್ಗೆ ಗೊತ್ತಾಗಲಿದೆ. ಜೆಡಿಎಸ್ ಕಾರ್ಯಕರ್ತರ ಅಭಿಮಾನವನ್ನು ನಾವು ಪ್ರಸ್ತಾಪಿಸಿರುವ ಕಾರಣ ದೃಶ್ಯಗಳಲ್ಲಿ ಕಾಣಿಸುತ್ತಿದೆ. ಹಾಸನ ವಿಧಾನಸಭಾ ಕ್ಷೇತ್ರದ ಶಾಸಕ ಸ್ವರೂಪ್ ಪ್ರಕಾಶ್ ನೇತೃತ್ವದಲ್ಲಿ ನಗರದ ಎಂಜಿ ರಸ್ತೆಯಲ್ಲಿರುವ ಗಣಪತಿ ದೇವಸ್ಥಾನದಲ್ಲಿ ಪ್ರಜ್ವಲ್ ಗೆಲುವಿಗಾಗಿ ವಿಶೇಷ ಪೂಜೆ ಸಲ್ಲಿಸಿದರು.






| ಎನ್‌ಡಿಎ | ಐಎನ್‌ಸಿ | ಎಸ್‌ಪಿ | ಟಿಎಂಸಿ |
|---|---|---|---|
| 242 ಮುನ್ನಡೆ | 94 ಮುನ್ನಡೆ | 33 ಮುನ್ನಡೆ | 30 ಮುನ್ನಡೆ |

(ಮಧ್ಯಾಹ್ನ 12ರವರೆಗಿನ ಮಾಹಿತಿ)

# ಕೌಂಟಿಂಗ್ ಕೌತುಕ

## ಬಿಜೆಪಿಗೆ ಮುನ್ನಡೆ, ವಿವಿಧ ಕ್ಷೇತ್ರಗಳಲ್ಲಿ ಹಾವು-ಏಣಿ ಆಟ



**ನವದೆಹಲಿ:** ದೇಶಕ್ಕೆ ದೇಶವೇ ಕುತೂಹಲದಿಂದ ಕಾಯುತ್ತಿರುವ ಲೋಕಸಭೆ ಚುನಾವಣೆಯ ಮತಎಣಿಕೆ ಆರಂಭವಾಗಿದ್ದು, ಎನ್‌ಡಿಎ ಮೈತ್ರಿಕೂಟವು ಆರಂಭದಲ್ಲಿಯೇ ಭರ್ಜರಿ ಮುನ್ನಡೆ ಸಾಧಿಸಿದೆ. ಎನ್‌ಡಿಎಯು 260ಕ್ಕೂ ಅಧಿಕ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದು, ಮುನ್ನಡೆಯಲ್ಲಿಯೇ ಮ್ಯಾಜಿಕ್ ನಂಬರ್ (272) ದಾಟಿದೆ. ಅತ್ತ, ಇಂಡಿಯಾ ಒಕ್ಕೂಟವೂ ಎನ್‌ಡಿಎಗೆ ಸ್ಪರ್ಧೆಯೊಡ್ಡುತ್ತಿದ್ದು, 130ಕ್ಕೂ ಅಧಿಕ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದೆ. ಬಹುತೇಕ ಕೇಂದ್ರಗಳಲ್ಲಿ ಅಂಚೆ ಮತಗಳ ಎಣಿಕೆ ಮುಗಿದಿದ್ದು, ಇವಿಎಂ ಮತಗಳ ಎಣಿಕೆ ಆರಂಭವಾಗಿದೆ. ಮಧ್ಯಾಹ್ನ 12 ಗಂಟೆ ಸುಮಾರಿಗೆ ಚುನಾವಣೆ ಫಲಿತಾಂಶದ ಸ್ಪಷ್ಟ ಚಿತ್ರಣ ದೊರೆಯಲಿದೆ.

ನರೇಂದ್ರ ಮೋದಿ ಅವರ ಅಲೆ, ಕಳೆದ 10 ವರ್ಷಗಳ ಅಭಿವೃದ್ಧಿ ಕೆಲಸಗಳು, ರಾಮಮಂದಿರ, 370ನೇ ವಿಧಿ ರದ್ದು ಸೇರಿ ಹಲವು ಪ್ರಮುಖ ತೀರ್ಮಾನಗಳನ್ನು ಮುಂದಿಟ್ಟುಕೊಂಡು ಬಿಜೆಪಿಯು ಚುನಾವಣೆ ಎದುರಿಸಿದೆ. ಅದರಲ್ಲೂ, ಮೋದಿ ಅವರು 200ಕ್ಕೂ ಅಧಿಕ ಸಮಾವೇಶಗಳ ಮೂಲಕ ದೇಶದ ಮೂಲೆ ಮೂಲೆಯಲ್ಲಿ ಅಬ್ಬರದ ಪ್ರಚಾರ ಕೈಗೊಂಡಿದ್ದಾರೆ. ಬಿಜೆಪಿ ನಾಯಕರು, ಕಾರ್ಯಕರ್ತರು ಕೂಡ ಇದಕ್ಕೆ ಶ್ರಮಿಸಿದ್ದಾರೆ. ಹಾಗಾಗಿ, ಬಿಜೆಪಿಯು ಸತತ ಮೂರನೇ ಬಾರಿಗೆ ಕೇಂದ್ರದಲ್ಲಿ ಅಧಿಕಾರದ ಗದ್ದುಗೆ ಹಿಡಿಯು ಕನಸು ಕಾಣುತ್ತಿದೆ. ಪುಟ 2

### ಅಂಚೆ ಮತದಾನದಲ್ಲಿ ಎನ್‌ಡಿಎ 304, ಇಂಡಿಯಾ ಕೂಟ 167

**ಬೆಂಗಳೂರು:** 2024 ರ ಲೋಕಸಭಾ ಚುನಾವಣೆಯ ಮತ ಎಣಿಕೆ ಇಂದು ನಡೆಯುತ್ತಿದ್ದು, ಅಂಚೆ ಮತದಾನದಲ್ಲಿ ಬಿಜೆಪಿ ಮುನ್ನಡೆ ಕಾಯ್ದುಕೊಂಡಿದೆ. ಬೆಳಗ್ಗೆ 8:52 ರ ಹೊತ್ತಿಗೆ ಎನ್‌ಡಿಎ 304, ಐಎನ್‌ಡಿಐಎ 167 ಹಾಗೂ ಇತರೆ 30 ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿವೆ.

ಕರ್ನಾಟಕದಲ್ಲಿ ಬಿಜೆಪಿ 17, ಕಾಂಗ್ರೆಸ್ 4 ಮತ್ತು ಜೆಡಿಎಸ್ 2 ಸ್ಥಾನಗಳಲ್ಲಿ ಮುನ್ನಡೆ ಕಾಯ್ದುಕೊಂಡಿವೆ. ಬೆಂಗಳೂರು ಗ್ರಾಮಾಂತರದಲ್ಲಿ ಡಾ. ಮಂಜುನಾಥ್ ಮುನ್ನಡೆ ಸಾಧಿಸಿದ್ದಾರೆ. ಇಂದು ಬೆಳಗ್ಗೆ 8 ಗಂಟೆಗೆ ಮತ ಎಣಿಕೆ ಆರಂಭವಾಯಿತು. ಮಧ್ಯಾಹ್ನದ ಹೊತ್ತಿಗೆ ಫಲಿತಾಂಶದ ಕುರಿತು ಸ್ಪಷ್ಟ ಚಿತ್ರಣ ಸಿಗಲಿದೆ.

### ಮತ ಎಣಿಕೆ ಕೇಂದ್ರದಲ್ಲಿ ಟಿ ಶರ್ಟ್ ಕಿರಿಕ್

**ಬೆಂಗಳೂರು:** ಮೈಕೋಲೇಔಟ್ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಎಸ್‌ಎಸ್‌ಎಂಆರ್‌ವಿ ಕಾಲೇಜಿನಲ್ಲಿ ಲೋಕಸಭೆ ಚುನಾವಣೆ 2024ರ ಮತ ಎಣಿಕೆ ನಡೆಯುತ್ತಿದ್ದ ಕೇಂದ್ರದಲ್ಲಿ ಗಲಾಟೆ ನಡೆದಿದೆ. ಕೆಆರ್‌ಎಸ್ ಪಾರ್ಟಿಯ ಅಭ್ಯರ್ಥಿ ರಘುಪತಿ ಭಟ್ ಎಂಬುವವರು ಪೊಲೀಸರ ವಿರುದ್ಧ ಕೂಗಾಡಿ ಆಕ್ರೋಶ ಹೊರಹಾಕಿದ್ದಾರೆ. ಪುಟ 2





### ಅಣ್ಣ ಡಿಕೆಶಿ ಜೊತೆ ಇರೋ ಡಿಕೆ ಸುರೇಶ್‌ಗೆ ಪುಕ ಪುಕ!

## ಡಾ. ಮಂಜುನಾಥ್‌ಗೆ ಭಾರೀ ಮುನ್ನಡೆ

**ಬೆಂಗಳೂರು:** ಈ ಬಾರಿಯ ಲೋಕಸಭೆಯಲ್ಲಿ ಕರ್ನಾಟಕದಲ್ಲಿ ಸಾಕಷ್ಟು ಇಂಟ್ರೆಸ್ಟಿಂಗ್ ಅನ್ನಿಸಿದ್ದು ಬೆಂಗಳೂರಿನ ಗ್ರಾಮಾಂತರ ಕ್ಷೇತ್ರ. ಡಿ.ಕೆ.ಸುರೇಶ್ ಈಗಾಗಲೇ ಇಲ್ಲಿ ಸಿಟ್ಟಿಂಗ್ ಎಂಪಿ. ಹೀಗಾಗಿಯೇ ಇಲ್ಲಿ ಈ ಬಾರಿ ಡಾ.ಮಂಜುನಾಥ್ ಅವರನ್ನು ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿಸಿತ್ತು. ಮತದಾನ ಮುಗಿದ ಬಳಿಕವೂ ಇಲ್ಲಿನ ಜನರು ಈ ಕ್ಷೇತ್ರದಲ್ಲಿ ಟಫ್ ಫೈಟ್ ನಡೆಯುವ ಸಾಧ್ಯತೆ ಹೆಚ್ಚು ಅಂತ ಹೇಳಿದ್ದರು. ಡಾ. ಮಂಜುನಾಥ್ ಅವರು ಹೆಚ್.ಡಿ.ದೇವೇಗೌಡರ ಅಳಿಯ ಬೇರೆ ಗೆಲ್ತಾರೆ ಅಂತ ಎಲ್ಲರೂ ಅಂದುಕೊಂಡಿದ್ದರು. ಇತ್ತ ಡಿಕೆ ಸುರೇಶ್ ಅವರೇನು ಕಡಿಮೆಯಿಲ್ಲ ಎನ್ನಲಾಗ್ತಿತ್ತು. ಆದರೆ ಬೆಂಗಳೂರು ಗ್ರಾಮಾಂತರದಲ್ಲಿ ಹಾವು-ಏಣಿ ಆಟ ನಡೆಯುತ್ತಿದೆ ಅಂದ್ರೆ ತಪ್ಪಾಗಲ್ಲ.

**ಡಾ. ಮಂಜುನಾಥ್‌ಗೆ ಮುನ್ನಡೆ!:** ಬೆಳಗ್ಗೆ ಅಂಚೆ ಮತ ಎಣಿಕೆಯಲ್ಲೂ ಡಾ ಮುಂಜುನಾಥ್ ಮುನ್ನಡೆ ಸಾಧಿಸಿದ್ದರು. ನಂತರ ನಡೆದ ಇವಿಎಂ ಮತ ಎಣಿಕೆಯಲ್ಲಿ ಡಿಕೆ ಸುರೇಶ್ ಮುನ್ನಡೆ ಸಾಧಿಸಿದ್ರು. ಇದೀಗ ಡಾ. ಮಂಜುನಾಥ್ ಭಾರೀ ಮುನ್ನಡೆ ಕಾಯ್ದುಕೊಂಡಿದ್ದಾರೆ. 50,466 ಮತಗಳ ಮುನ್ನಡೆ ಪಡೆದುಕೊಂಡಿದ್ದಾರೆ ಡಾ ಮಂಜುನಾಥ್.



**ಸಹೋದರನ ಕ್ಷೇತ್ರದ ಬಗ್ಗೆ ಡಿಸಿಎಂ ಡಿಕೆಶಿಗೆ ಟೆನ್ಶನ್!:** ಸಹೋದರನ ಕ್ಷೇತ್ರದ ಬಗ್ಗೆ ಡಿಸಿಎಂ ಡಿಕೆಶಿಗೆ ಟೆನ್ಶನ್ ಮಾಡಿಕೊಂಡಿದ್ದಾರೆ. ಸಹೋದರ ಡಿಕೆ ಸುರೇಶ್ ಗೆ ಹಿನ್ನಡೆ ವರದಿ ಬರ್ತಿದ್ದಂತೆ ಆಪ್ತರಿಗೆ ಡಿಸಿಎಂ ಡಿಕೆ ಶಿವಕುಮಾರ್ ಕರೆ ಮಾಡಿ ಮಾಹಿತಿ ಪಡೆದಿದ್ದಾರೆ. ಮತ ಎಣಿಕೆ ಕೇಂದ್ರದಲ್ಲಿರುವ ಆಪ್ತರಿಗೆ ಫೋನ್ ಕರೆ ಮಾಡಿದ್ದಾರೆ. ಯಾವ ಕ್ಷೇತ್ರದಲ್ಲಿ ಮತ ಎಣಿಕೆ ಆಗಿದೆ, ಯಾವುದು ಮುಗಿದಿದೆ, ಮುಂದೆ ಯಾವ ಕ್ಷೇತ್ರ ಇದೆ, ಇನ್ನೂ ಎಷ್ಟು ರೌಂಡ್ಸ್ ಗಳಿದೆ ಎಂಬುದರ ಬಗ್ಗೆ ಮಾಹಿತಿ ಪಡೆಯುತ್ತಿದ್ದಾರೆ.

ಅಣ್ಣನ ಜೊತೆಯಲ್ಲೇ ಇರುವ ಬೆಂಗಳೂರು ಗ್ರಾಮಾಂತರ ಕಾಂಗ್ರೆಸ್ ಅಭ್ಯರ್ಥಿ ಡಿಕೆ ಸುರೇಶ್. ಸದಾಶಿವನಗರ ಮನೆಯಲ್ಲಿ ಕೂತು ಫಲಿತಾಂಶ ವೀಕ್ಷಣೆ ಮಾಡ್ತಾ ಇದ್ದಾರೆ.ಸದ್ಯ ಯಾರೊಬ್ಬರಿಗೂ ಮನೆಗೆ ಒಳಗೆ ಬಿಡದಂತೆ ಸಿಬ್ಬಂದಿಗೆ ಸೂಚನೆ ನೀಡಲಾಗಿದೆ. ಕೆಲ ಕಾರ್ಯಕರ್ತರು ಬಂದ್ರೂ, ವಾಪಸ್ ಸಿಬ್ಬಂದಿ ವಾಪಾಸ್ ಕಳಿಸ್ತಾ ಇದ್ದಾರೆ.

### ಆಂಧ್ರ ಪ್ರದೇಶ ವಿಧಾನಸಭೆ

## ಎನ್‌ಡಿಎಗೆ ಭರ್ಜರಿ ಮುನ್ನಡೆ

**ಹೈದರಾಬಾದ್:** ಲೋಕಸಭಾ ಚುನಾವಣೆಯ ನಡುವೆ ಆಂಧ್ರಪ್ರದೇಶ ವಿಧಾನಸಭಾ ಚುನಾವಣೆ ಕೂಡ ನಡೆದಿದ್ದು, ಮತ ಎಣಿಕೆ ಆರಂಭವಾಗಿದೆ. ಲೋಕಸಭಾ ಚುನಾವಣೆಯ ಜತೆಗೆ ವಿಧಾನಸಭೆಯ 175 ಕ್ಷೇತ್ರಗಳಿಗೆ ಮೇ 13ರಂದು ಮತದಾನ ನಡೆದಿತ್ತು. ಈ ದಕ್ಷಿಣದ ರಾಜ್ಯದಲ್ಲಿ ಬಿಜೆಪಿ ತನ್ನ ಛಾಪು ಮೂಡಿಸಲು ಪ್ರಯತ್ನಿಸುತ್ತಿದ್ದು, ಪ್ರಧಾನಿ ನರೇಂದ್ರ ಮೋದಿ ಭರ್ಜರಿ ರ್‍ಯಾಲಿ ನಡೆಸಿ ಗಮನ ಸೆಳೆದಿದ್ದರು. ಇದೀಗ ಮೊದಲ ಹಂತದಲ್ಲಿ ಎನ್‌ಡಿಎ ಮುನ್ನಡೆ ಸಾಧಿಸಿದೆ.

ಆಂಧ್ರಪ್ರದೇಶದಲ್ಲಿ ಮುಖ್ಯಮಂತ್ರಿ ವೈ.ಎಸ್. ಜಗನ್ ಮೋಹನ್ ರೆಡ್ಡಿ ನೇತೃತ್ವದ ಆಡಳಿತಾರೂಢ ವೈಎಸ್‌ಆರ್ ಕಾಂಗ್ರೆಸ್ ಪಕ್ಷ, ಕಾಂಗ್ರೆಸ್ ನೇತೃತ್ವದ ಇಂಡಿಯಾ ಒಕ್ಕೂಟ ಮತ್ತು ಬಿಜೆಪಿ, ಚಂದ್ರಬಾಬು ನಾಯ್ಡು ನೇತೃತ್ವದ ತೆಲುಗು ದೇಶಂ ಪಕ್ಷ ಮತ್ತು ಪವನ್ ಕಲ್ಯಾಣ್ ನೇತೃತ್ವದ ಜನಸೇನಾ ಪಕ್ಷ ಒಳಗೊಂಡ ಎನ್‌ಡಿಎ ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ. 2019ರ ವಿಧಾನಸಭಾ ಚುನಾವಣೆಯಲ್ಲಿ ವೈಎಸ್‌ಆರ್‌ಪಿ 151 ಸ್ಥಾನಗಳನ್ನು ಗೆದ್ದುಕೊಂಡಿತ್ತು. ಚುನಾವಣೋತ್ತರ ಸಮೀಕ್ಷೆಗಳು ವೈಎಸ್‌ಆರ್‌ಪಿಗೆ ಹಿನ್ನಡೆಯಾಗಬಹುದು ಎಂದು ಅಂದಾಜಿಸಿವೆ. ವಿವಿಧ ಸಮೀಕ್ಷೆಗಳ ಪ್ರಕಾರ ಟಿಡಿಪಿ ಮುಖ್ಯಸ್ಥ ಎನ್. ಚಂದ್ರಬಾಬು ನಾಯ್ಡು ಮತ್ತು ನಟ ಪವನ್ ಕಲ್ಯಾಣ್ ನೇತೃತ್ವದ ಜನಸೇನಾ ಮೈತ್ರಿಕೂಟ ಜಯಗಳಿಸಲಿದೆ.



## ಮೊದಲ ಚುನಾವಣಾ ಗೆಲುವಿನತ್ತ ಪವನ್ ಕಲ್ಯಾಣ್

**ಆಂಧ್ರ:** ನಟ ಪವನ್ ಕಲ್ಯಾಣ್ ರಾಜಕಾರಣ ಪ್ರಾರಂಭಿಸಿ 16 ವರ್ಷಗಳಾಗಿವೆ. ಈ ವರೆಗೆ ನಾಲ್ಕು ಚುನಾವಣೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಾರೆ. ಆದರೆ ಇದೇ ಮೊದಲ ಬಾರಿಗೆ ಪವನ್ ಕಲ್ಯಾಣ್ ಗೆಲುವು ನೋಡಲಿದ್ದಾರೆ. ಆಂಧ್ರ ಪ್ರದೇಶದ ಪೀಠಾಪುರಂ ಕ್ಷೇತ್ರದಿಂದ ಸ್ಪರ್ಧಿಸಿರುವ ಪವನ್ ಕಲ್ಯಾಣ್ ಗೆ ಮುನ್ನಡೆ ದೊರಕಿದೆ. ಟಿಡಿಪಿ ಬೆಂಬಲದ ಮೂಲಕ ಸ್ಪರ್ಧಿಸಿದ್ದ ಪವನ್ ಕಲ್ಯಾಣ್ ಮೊದಲಿನಿಂದಲೂ ಮುನ್ನಡೆ ಕಾಯ್ದುಕೊಂಡಿದ್ದು, 11 ಗಂಟೆ ಸುಮಾರಿಗೆ 25 ಸಾವಿರ ಮತಗಳ ಅಂತರದ ಮುನ್ನಡೆಯಲಿದ್ದಾರೆ.



ಪವನ್ ಕಲ್ಯಾಣ್ ಗೆ ಟಿಡಿಪಿಯ ಹಾಲಿ ಶಾಸಕ ಪೀಠಾಪುರಂ ಕ್ಷೇತ್ರವನ್ನು ಬಿಟ್ಟುಕೊಟ್ಟಿದ್ದರು. ಪವನ್ ಕಲ್ಯಾಣ್ ಅನ್ನು ಸೋಲಿಸಿಯೇ ತೀರಲು ಆಡಳಿತ ಪಕ್ಷವಾಗಿದ್ದ ವೈಸಿಪಿ ಹಲವು ಪ್ರಯತ್ನಗಳನ್ನು ಮಾಡಿತ್ತು. ಟಿಡಿಪಿ ಹಾಲಿ ಶಾಸಕನಿಗೂ ಹಣ ಆಮಿಷ ಒಡ್ಡಿತ್ತು ಹೀಗೆಂದು ಸ್ವತಃ ಶಾಸಕರೇ ಮಾಧ್ಯಮಗಳ ಮುಂದೆ ಹೇಳಿಕೊಂಡಿದ್ದರು. ಪೀಠಾಪುರಂನಲ್ಲಿ ರ್‍ಯಾಲಿ ಮಾಡಿದ್ದ ಜಗನ್, ಪವನ್ ಎದುರಾಳಿ ವೈಸಿಪಿ ಅಭ್ಯರ್ಥಿ ವಂಗ ಗೀತಾ ಅವರನ್ನು ಗೆಲ್ಲಿಸಿದರೆ ಅವರನ್ನು ಉಪಮುಖ್ಯ ಮಂತ್ರಿ ಮಾಡುವುದಾಗಿ ಘೋಷಿಸಿದ್ದರು.

ರಾಜ್ಯದಾದ್ಯಂತ ಪ್ರಚಾರ ಮಾಡಿದ್ದ ಪವನ್ ಕಲ್ಯಾಣ್ ಪೀಠಾಪುರಂ ಕ್ಷೇತ್ರದಲ್ಲಿ ಹೆಚ್ಚಿನ ಪ್ರಚಾರ ಮಾಡಲು ಸಾಧ್ಯವಾಗಿರಲಿಲ್ಲ. ಆದರೆ ಪವನ್ ಪರವಾಗಿ ರಾಮ್ ಚರಣ್, ಪವನ್ ರ ಅತ್ತಿಗೆ ಸುರೇಖಾ ಚಿರಂಜೀವಿ, ಹಲವು ಕಲಾವಿದರು ಆಗಮಿಸಿ ಬಹಿರಂಗ ಪ್ರಚಾರ ಮಾಡಿದ್ದರು. ಇದೆಲ್ಲದರ ಫಲವಾಗಿ ಈಗ ಪವನ್ ಕಲ್ಯಾಣ್ ಭಾರಿ ಮುನ್ನಡೆ ಪಡೆದಿದ್ದಾರೆ. ಪುಟ 2

## ಆದಿಚುಂಚನಗಿರಿ ಮಠದಲ್ಲಿ ಹೆಚ್‌ಡಿಕೆ ವಿಶೇಷ ಪೂಜೆ

**ಬೆಂಗಳೂರು:** ಲೋಕಸಭಾ ಚುನಾವಣೆಯ ಫಲಿತಾಂಶಕ್ಕೆ ಇನ್ನೇನೂ ಕೆಲವೇ ಗಂಟೆಗಳು ಬಾಕಿ ಇದೆ. ಈ ಹಿನ್ನಲೆಯಲ್ಲಿ ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿಯವರು ವಿಜಯನಗರದ ಆದಿಚುಂಚನಗಿರಿ ಮಹಾಸಂಸ್ಥಾನ ಮಠಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಮಠದ ಆವರಣದಲ್ಲಿರುವ ಗಂಗಾಧರೇಶ್ವರ ದೇವಾಲಯದಲ್ಲಿ ಡಾ.ನಿರ್ಮಲಾನಂದ ಶ್ರೀಗಳ ಸಮ್ಮುಖದಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಬಳಿಕ ವಿಶೇಷ ಮಂಗಳಾರತಿ ಮಾಡಿಸಿ, ಶ್ರೀಗಳ ಆಶೀರ್ವಾದ ಪಡೆದಿದ್ದಾರೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗ ಆರಂಭಿಕ ಮುನ್ನಡೆಯಲ್ಲಿದ್ದೇವೆ. ಕೊನೆ ಹಂತದವರೆಗೆ ಇದು ಹೀಗೆಯೇ ಇರಲಿದೆ. ದೇಶದಲ್ಲಿ ಎನ್‌ಡಿಎ ಅಭ್ಯರ್ಥಿಗಳು ಜಯಗಳಿಸುವ ವಿಶ್ವಾಸವಿದೆ. ರಾಜ್ಯದಲ್ಲಿ 25ಕ್ಕೂ ಹೆಚ್ಚು ಸೀಟ್‌ಗಳನ್ನು ಎನ್‌ಡಿಎ ಗೆಲ್ಲುವ ವಿಶ್ವಾಸವಿದೆ ಎಂದು ಅವರು ಹೇಳಿದ್ದಾರೆ.

ಚುನಾವಣೆಯಲ್ಲಿ ಉತ್ಸಾಹದಿಂದಲೇ ಇದ್ದೇನೆ. ಮಂಡ್ಯ ಕ್ಷೇತ್ರಕ್ಕೆ ಸೇವೆ ಮಾಡಲು ಅವಕಾಶ ಸಿಗುವುದರಲ್ಲಿ ಯಾವ ಅನುಮಾನ ಇಲ್ಲ. ಕ್ಷೇತ್ರದ ಅಭಿವೃದ್ಧಿಗಾಗಿ ಕೆಲಸ ಮಾಡುತ್ತೇನೆ ಎಂದು ಅವರು ಹೇಳಿದ್ದಾರೆ.



ಬೆಂಗಳೂರು ಗ್ರಾ. ಕ್ಷೇತ್ರದಲ್ಲಿ 81572 ಮತ ಪಡೆದು ಮುನ್ನಡೆ ಸಾಧಿಸಿರುವ ಡಾ.ಮಂಜುನಾಥ್. ಹಾಲಿ ಸಂಸದ, ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್ ಗೆ ಹಿನ್ನಡೆ, 52,363 ಮತ ಪಡೆದಿರುವ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್- ಮಂಡ್ಯ ಲೋಕಸಭಾ ಮೈತ್ರಿ ಅಭ್ಯರ್ಥಿ ಜೆಡಿ ಎಸ್ ಕುಮಾರಸ್ವಾಮಿಗೆ ನಿರ್ಮಾಲನಂದ ಸ್ವಾಮೀಜಿ ಸನ್ಮಾನ ಮಾಡಿದರು. ನಿರ್ಮಾಲನಂದ ಸ್ವಾಮೀಜಿ ಅವರಿಗೂ ಸಹ ಕುಮಾರಸ್ವಾಮಿ ಇಂದ ಸನ್ಮಾನ ಮಾಡಲಾಯ್ತು.

ಮಂಡ್ಯ ಲೋಕಸಭಾ ಮೈತ್ರಿ ಅಭ್ಯರ್ಥಿ ಜೆಡಿ ಎಸ್ ಅಧಿನಾಯಕ ಹೆಚ್ ಡಿ ಕುಮಾರಸ್ವಾಮಿಗೆ ನಿರ್ಮಲಾನಂದ ಸ್ವಾಮೀಜಿ ಸನ್ಮಾನ ಮಾಡಿದರು. ನಿರ್ಮಲಾನಂದ ಸ್ವಾಮೀಜಿ ಅವರಿಗೂ ಸಹ ಕುಮಾರಸ್ವಾಮಿ ಇಂದ ಸನ್ಮಾನ ಮಾಡಲಾಯ್ತು.

### ಗೆಲುವಿನ ಬಗ್ಗೆ ಭರವಸೆ ನೀಡಿದ ಕುಮಾರಸ್ವಾಮಿ

**ಬೆಂಗಳೂರು:** ಲೋಕಸಭೆ ಚುನಾವಣೆ ಫಲಿತಾಂಶ ಪ್ರಕಟವಾಗುತ್ತಿದ್ದು, ಮಂಡ್ಯದಲ್ಲಿ ಜೆಡಿಎಸ್ ಅಭ್ಯರ್ಥಿ ಹೆಚ್ ಡಿ ಕುಮಾರಸ್ವಾಮಿ ಮುನ್ನಡೆ ಕಾಯ್ದುಕೊಂಡಿದ್ದಾರೆ. ಗೆಲುವಿನ ಬಗ್ಗೆ ಭರವಸೆ ವ್ಯಕ್ತಪಡಿಸಿದ ಅವರು, ಮಂಡ್ಯ ಕ್ಷೇತ್ರದ ಜನತೆ ನನಗೆ ಆಶೀರ್ವಾದ ಮಾಡುತ್ತಾರೆ. ಎಕ್ಸಿಟ್ ಪೋಲ್ ಸರ್ವೆ ಶೇ 90ರಷ್ಟು ಸತ್ಯವಾಗುತ್ತದೆ ಎಂದರು. ಕರ್ನಾಟಕದಲ್ಲಿ 25 ಸ್ಥಾನಗಳಲ್ಲಿ ಗೆಲ್ಲುವ ವಿಶ್ವಾಸವಿದೆ. ದೇಶದಲ್ಲಿ ಎನ್ ಡಿಎ ಹೆಚ್ಚು ಸ್ಥಾನಗಳು ಗೆಲ್ಲುವ ವಿಶ್ವಾಸವಿದೆ ಎಂದರು. ಪುಟ 2



## ಅನ್ಯಕೋಮಿನ ಯುವತಿಯೊಂದಿಗೆ ಪಯಣ: ಯುವಕನಿಗೆ ಹಲ್ಲೆ

**ಶಿವಮೊಗ್ಗ:** ಅನ್ಯಕೋಮಿನ ಯುವತಿಯನ್ನು ಬೈಕಿನಲ್ಲಿ ಕೂರಿಸಿಕೊಂಡು ಹೋಗಿದ್ದಕ್ಕೆ ಯುವಕನಿಗೆ ಹಲ್ಲೆ ನಡೆಸಿದ ಘಟನೆ ಶಿವಮೊಗ್ಗದ ಸೀಗೆಟಹಳ್ಳಿ ಬಳಿ ನಡೆದಿದೆ. ಜೂನ್ 1 ರಂದು ಘಟನೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ನಂದನ್ ಹಲ್ಲೆಗೊಳಗಾದ ಯುವಕ. ನಂದನ್ ಹಾಗೂ ಅನ್ಯಕೋಮಿನ ಯುವತಿ ಒಂದೇ ಖಾಸಗಿ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದರು. ಕೆಲಸದ ನಿಮಿತ್ತ ನಂದನ್ ಹಾಗೂ ಯುವತಿ ಬೈಕ್‌ನಲ್ಲಿ ಹೋಗುತ್ತಿದ್ದರು. ಬೈಕ್‌ನಲ್ಲಿ ಹೋಗುವುದನ್ನು ಗಮನಿಸಿದ ಅನ್ಯಕೋಮಿನ ಯುವಕರು ಬೈಕ್ ಅಡ್ಡಗಟ್ಟಿದ್ದಾರೆ. ಬಳಿಕ ನಂದನ್ ಅನ್ನು ಸ್ಥಳೀಯ ಟಿಂಬರ್ ಯಾರ್ಡ್‌ಗೆ ಎಳೆದೊಯ್ದು ಹಲ್ಲೆ ನಡೆಸಿದ್ದಾರೆ. ಸ್ಥಳದಿಂದ ತಪ್ಪಿಸಿಕೊಂಡು ಯುವಕ ಓಡಿ ಬಂದಿದ್ದಾನೆ. ಹಲ್ಲೆಗೊಳಗಾದ ಯುವಕನಿಗೆ ಮೆಗ್ಗಾನ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಶಾಸಕ ಚನ್ನಬಸಪ್ಪ ಮೆಗ್ಗಾನ್ ಆಸ್ಪತ್ರೆಗೆ ಭೇಟಿ ನೀಡಿ ಯುವಕನ ಆರೋಗ್ಯ ವಿಚಾರಿಸಿದ್ದಾರೆ. ಘಟನೆ ಕುರಿತು ದೊಡ್ಡಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.



## ರಾಜ್ಯದಲ್ಲಿ ಹೂಡಿಕೆ ಇಳಿಕೆಗೆ ಕೇಂದ್ರ, ಬಿಜೆಪಿ ಕಾರಣ

**ಬೆಂಗಳೂರು:** ವಿದೇಶಿ ನೇರ ಬಂಡವಾಳ ಆಕರ್ಷಿಸುವಲ್ಲಿ ಮೊದಲ ಸ್ಥಾನದಲ್ಲಿದ್ದ ಕರ್ನಾಟಕ ಈಗ ಮೂರನೇ ಸ್ಥಾನಕ್ಕೆ ಇಳಿಯಲು ಕೇಂದ್ರ ಸರ್ಕಾರದ ಧೋರಣೆ ಹಾಗೂ ರಾಜ್ಯದಲ್ಲಿ ಈ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರದ ಉದಾಸೀನ ನಿಲುವು ಮುಖ್ಯ ಕಾರಣ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ ಆರೋಪಿಸಿದ್ದಾರೆ.ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕರ್ನಾಟಕವೂ ಸೇರಿದಂತೆ ದಕ್ಷಿಣ ಭಾರತದಲ್ಲಿ ಹೂಡಿಕೆಗೆ ಒಲವು ತೋರಿಸಿದ್ದ ವಿದೇಶಿ ಹೂಡಿಕೆದಾರರು ಇತ್ತೀಚಿನ ವರ್ಷಗಳಲ್ಲಿ ಕೇಂದ್ರ ಸರ್ಕಾರದ ಒತ್ತಾಸೆಯ ಮೇರೆಗೆ ಮಹಾರಾಷ್ಟ್ರ ಮತ್ತು ಗುಜರಾತ್ ರಾಜ್ಯಗಳತ್ತ ಮುಖ ಮಾಡಿರುವುದು ಹಾಗೂ ಆ ರಾಜ್ಯಗಳತ್ತ ಹರಿಯುತ್ತಿದ್ದ ಎಫ್‌ಡಿಐ ಯನ್ನು ರಾಜ್ಯದತ್ತ ತಿರುಗುವಂತೆ ಮಾಡುವಲ್ಲಿ ಹಿಂದಿನ ಬಿಜೆಪಿ ಸರ್ಕಾರ ಯಾವುದೇ ಪ್ರಯತ್ನ ಮಾಡದಿರುವುದೇ ಇಂದಿನ ಪರಿಸ್ಥಿತಿಗೆ ಮುಖ್ಯ ಕಾರಣವಾಗಿದೆ ಎಂದಿದ್ದಾರೆ.ದೇಶದಲ್ಲಿ ಎಫ್‌ಡಿಐ ಇಳಿಕೆ ಆಗಲು ಕೇಂದ್ರ ಸರ್ಕಾರದ ದೂರದೃಷ್ಟಿ ಇಲ್ಲದ, ದೋಷಪೂರಿತ ನೀತಿಗಳೇ ಕಾರಣ. ಜತೆಗೆ ಜಾಗತಿಕ ವಿದ್ಯಮಾನಗಳು ಕೂಡ ಸೇರಿರಬಹುದು. ಹಿಂದಿನ ಮೂರು ಹಣಕಾಸು ವರ್ಷಗಳಲ್ಲಿ ಎಫ್‌ಡಿಐ ಈಕ್ವಿಟಿ ಹೂಡಿಕೆ ಕಳವಳಕಾರಿ ಮಟ್ಟದಲ್ಲಿ ಇಳಿಕೆಯಾಗಿದೆ. 2022–23ನೇ ಹಣಕಾಸು ವರ್ಷಕ್ಕೆ ಹೋಲಿಸಿದರೆ 2023–24ರಲ್ಲಿ ಹೂಡಿಕೆಯಲ್ಲಿನ ಇಳಿಕೆ ಶೇ.3ರಷ್ಟು ಮಾತ್ರ ದಾಖಲಾಗಿದೆ. ಆದರೆ, ಅದಕ್ಕೂ ಮುಂಚಿನ 4 ಹಣಕಾಸು ವರ್ಷಗಳಲ್ಲಿನ ಇಳಿಕೆ ಪ್ರಮಾಣ ಶೇ. 25ಕ್ಕಿಂತಲೂ ಹೆಚ್ಚಿಗೆ ಇದೆ ಎಂದು ವಿವರಿಸಿದ್ದಾರೆ.



**ಹೂಡಿಕೆದಾರರ ಸೆಳೆಯಲು ಯತ್ನ:** ದೇಶದ ಪರಿಸ್ಥಿತಿಯ ಪರಿಣಾಮ ರಾಜ್ಯದ ಮೇಲೂ ಆಗಿದೆ. ಆದರೆ, ಅದು ಈ ಹಿಂದೆ ಬಿಜೆಪಿ ಸರ್ಕಾರ ಇದ್ದಾಗ ಎಫ್‌ಡಿಐ ಪಾತಾಳಕ್ಕೆ ಇಳಿದಷ್ಟು ಆಗಿಲ್ಲ. 2023–24ರಲ್ಲಿ ಇಳಿಕೆ ಪ್ರಮಾಣ ಕಡಿಮೆ ಆಗಿದ್ದು, ಪರಿಸ್ಥಿತಿಯನ್ನು ಗಣನೀಯವಾಗಿ ಸುಧಾರಿಸಲು ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ರಚನಾತ್ಮಕವಾಗಿ ಕಾರ್ಯೋನ್ಮುಖವಾಗಿದೆ. ಕರ್ನಾಟಕ 2023–24ರ ಹಣಕಾಸು ವರ್ಷದಲ್ಲಿ ದೇಶಿ ಹಾಗೂ ವಿದೇಶಿ ಕಂಪನಿಗಳಿಂದ 1.13 ಲಕ್ಷ ಕೋಟಿ ಮೌಲ್ಯದ ಬಂಡವಾಳ ಹೂಡಿಕೆ ಆಕರ್ಷಿಸಿದೆ ಎಂದು ಸಚಿವರು ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ರಾಮನಗರ:** ರಾಜ್ಯದ ಎಲ್ಲಾ ಸರ್ಕಾರಿ ಐ.ಟಿ.ಐ ಗಳಿಗೆ ಆಗಸ್ಟ್–2024ನೇ ಸಾಲಿಗೆ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ರಾಜ್ಯದ ಯಾವುದೇ ಪ್ರದೇಶದಿಂದ ಸೈಬರ್ ಸೆಂಟರ್ ಮೂಲಕ ಅಥವಾ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಖುದ್ದಾಗಿ ಹಾಜರಾಗಿ www. cite.karnataka.gov.inಈ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಲು ಜೂ. 9 ರವರೆಗೆ ಅವಧಿ ವಿಸ್ತರಿಸಲಾಗಿದೆ. ಮಾಹಿತಿಗೆ 9449188993, 7760023749 ಅಥವಾ 9740065425 ಸಂಪರ್ಕಿಸುವಂತೆ ಮಾಗಡಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 64.2 ಕೋಟಿ ಜನರಿಂದ ಮತದಾನ, ಸಾರ್ವತ್ರಿಕ ಚುನಾವಣೆಯಲ್ಲಿ ಭಾರತ ವಿಶ್ವದಾಖಲೆ

**ನವದೆಹಲಿ:** ಪ್ರಸಕ್ತ ವರ್ಷದ ಲೋಕಸಭಾ ಚುನಾವಣೆಯಲ್ಲಿ 64.2 ಕೋಟಿಗೂ ಅಧಿಕ ಜನರು ಮತದಾನ ಮಾಡಿದ್ದು, ಭಾರತ ವಿಶ್ವ ದಾಖಲೆ ಬರೆದಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ.

2024ರ ಲೋಕಸಭಾ ಚುನಾವಣೆ ಫಲಿತಾಂಶ ಪ್ರಕಟವಾಗುವ ಮುನ್ನಾ ದಿನವೇ ಸುದ್ದಿಗೋಷ್ಠಿ ನಡೆಸಿದ ಕೇಂದ್ರ ಚುನಾವಣಾ ಆಯೋಗ ಹಲವು ಮಹತ್ವದ ವಿಚಾರಗಳನ್ನು ಹಂಚಿಕೊಂಡಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ಪಿ.ರಾಜೀವ್ ಕುಮಾರ್ ಈ ಬಾರಿ 64.2 ಕೋಟಿಗೂ ಅಧಿಕ ಮತದಾರರು ಮತದಾನ ಮಾಡುವ ಮೂಲಕ ಭಾರತ ವಿಶ್ವ ದಾಖಲೆ ಬರೆದಿದೆ. ಜೊತೆಗೆ ಮಹಿಳೆಯರೂ ದಾಖಲೆ ಸಂಖ್ಯೆಯಲ್ಲಿ ಮತ ಚಲಾಯಿಸಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು. ದೇಶಾದ್ಯಂತ 64.2 ಕೋಟಿಗೂ ಅಧಿಕ ಜನ ಹಕ್ಕು ಚಲಾಯಿಸಿದ್ದಾರೆ. ಇದು ಜಿ7 ರಾಷ್ಟ್ರಗಳಿಗಿಂತ 1.5 ಪಟ್ಟು ಹಾಗೂ 27 ಯುರೋಪಿಯನ್ ರಾಷ್ಟ್ರಗಳಿಗಿಂತಲೂ 2.5 ಪಟ್ಟು ಹೆಚ್ಚಾಗಿದೆ. ಅಲ್ಲದೇ ದೇಶದಲ್ಲಿ 31 ಕೋಟಿ ಮಹಿಳಾ ಮತದಾರರು ಮತ ಚಲಾಯಿಸಿದ್ದು, ಇದೇ ಮೊದಲಬಾರಿಗೆ ಅತಿಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಮತದಾನ ಮಾಡಿದ್ದಾರೆ ಎಂದು ಪಿ.ರಾಜೀವ್ ಕುಮಾರ್ ಮಾಹಿತಿ ಹಂಚಿಕೊಂಡರು. ಇದೇ ವೇಳೆ ಹೆಚ್ಚಿನ ಸಂಖ್ಯೆಯಲ್ಲಿ



ಮತದಾನ ಮಾಡಿದ ಮತದಾರ ಪ್ರಭುಗಳಿಗೆ ಆಯೋಗದ ಅಧಿಕಾರಿಗಳು ಎದ್ದುನಿಂತು ಚಪ್ಪಾಳೆ ಹೊಡೆಯುವ ಮೂಲಕ ಅಭಿನಂದಿಸಿದರು. 2024ರ ಲೋಕಸಭಾ ಚುನಾವಣೆ ಕರ್ತವ್ಯ ನಿರ್ವಹಣೆಗೆ ಸುಮಾರು 4 ಲಕ್ಷ ವಾಹನಗಳು, 135 ವಿಶೇಷ ರೈಲುಗಳು ಮತ್ತು 1,692 ವಿಮಾನಗಳನ್ನು ಬಳಸಲಾಗಿದೆ. 39 ಕೇಂದ್ರಗಳಲ್ಲಿ ಮಾತ್ರವೇ ಮರುಮತದಾನ ನಡೆದಿದೆ. ಜಮ್ಮು ಮತ್ತು ಕಾಶ್ಮೀರವು ಕಳೆದ 4 ದಶಕಗಳಲ್ಲಿ ದಾಖಲೆಯ ಶೇ.58.58 ಮತ್ತು ಕಾಶ್ಮೀರದಲ್ಲಿ ಶೇ.51.05 ರಷ್ಟು ಮತದಾನವಾಗಿದೆ ಎಂದು ತಿಳಿಸಿದ್ದಾರೆ. ಇನ್ನೂ ಈ ಬಾರಿ ಡ್ರಗ್ಸ್, ನಗದು, ಚಿನ್ನಾಭರಣ ಸೇರಿ ದಾಖಲೆಯ 10,000 ಕೋಟಿ ರೂ. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. 2019ರಲ್ಲಿ ಇದರ ಪ್ರಮಾಣ 3,500 ಕೋಟಿ ರೂ.ಗಳಷ್ಟಿತ್ತು.

# ಜವರಾಯಿಗೌಡಗೆ ಜೆಡಿಎಸ್ ಎಂಎಲ್‌ಸಿ ಟಿಕೆಟ್

**ಬೆಂಗಳೂರು:** ವಿಧಾನಸಭೆಯಿಂದ ವಿಧಾನ ಪರಿಷತ್ ಸ್ಥಾನಕ್ಕೆ ನಡೆಯುವ ಚುನಾವಣೆಗೆ ಜೆಡಿಎಸ್ ಅಭ್ಯರ್ಥಿಯಾಗಿ 4 ಬಾರಿ ಯಶವಂತಪುರ ಕ್ಷೇತ್ರದಿಂದ ಸ್ಪರ್ಧೆ ಮಾಡಿ ಸೋತಿದ್ದ ಜವರಾಯಿಗೌಡ ಅವರಿಗೆ ಜೆಡಿಎಸ್ ಟಿಕೆಟ್ ನೀಡಿದೆ.



ನಿನ್ನೆ ನಡೆದ ಶಾಸಕಾಂಗ ಸಭೆಯಲ್ಲಿ ಜವರಾಯಿಗೌಡ ಹೆಸರು ಘೋಷಣೆ ಮಾಡಲಾಯಿತು. ಬಳಿಕ ಮಾಜಿ ಸಿಎಂ ಕುಮಾರಸ್ವಾಮಿ ನೇತೃತ್ವದಲ್ಲಿ ಜವರಾಯಿಗೌಡ ನಾಮಪತ್ರ ಸಲ್ಲಿಕೆ ಮಾಡಿದರು.

ನಾಮಪತ್ರ ಸಲ್ಲಿಕೆ ಬಳಿಕ ಮಾತನಾಡಿದ ಕುಮಾರಸ್ವಾಮಿ, 4 ಬಾರಿ ಕಡಿಮೆ ಅಂತರದಿಂದ ಜವರಾಯಿಗೌಡ ಸೋತಿದ್ದರು. ಪಕ್ಷದ ಕಾರ್ಯಕರ್ತರ ಭಾವನೆಗೆ ಬೆಲೆ ಕೊಟ್ಟು ಅವರಿಗೆ ಟಿಕೆಟ್ ನೀಡಿದ್ದೇವೆ. ಫಾರೂಕ್ ಮತ್ತು ಕುಪ್ಪೇಂದ್ರ ರೆಡ್ಡಿ ಅವರ ಹೆಸರು ಚರ್ಚೆ ಆಯಿತು. ಅಂತಿಮವಾಗಿ ಜವರಾಯಿಗೌಡಗೆ ಟಿಕೆಟ್ ನೀಡಲು ಇಬ್ಬರು ನಾಯಕರು ಒಪ್ಪಿಕೊಂಡರು ಎಂದು ಕುಮಾರಸ್ವಾಮಿ ತಿಳಿಸಿದರು.

ನಾಮಪತ್ರ ಸಲ್ಲಿಕೆ ಬಳಿಕ ಮಾತನಾಡಿದ ಅಭ್ಯರ್ಥಿ ಜವರಾಯಿಗೌಡ ಕಣ್ಣೀರು ಹಾಕುತ್ತಲೇ ಪ್ರತಿಕ್ರಿಯೆ ನೀಡಿದರು. 4 ಬಾರಿ ನಾನು ಚುನಾವಣೆ ಸೋತಿದ್ದೆ. ನನ್ನನ್ನ ಕೈ ಬಿಡಬಾರದು ಅಂತ ಕುಮಾರಸ್ವಾಮಿ, ದೇವೇಗೌಡರು ನನ್ನನ್ನ ವಿಧಾನ ಪರಿಷತ್ ಗೆ ಆಯ್ಕೆ ಮಾಡಿ ಕಳುಹಿಸಿದ್ದಾರೆ. ನಾನು ಯಾವತ್ತು ದೇವೇಗೌಡರ ಕುಟುಂಬಕ್ಕೆ ಚಿರೃಣಿ ಆಗಿರುತ್ತೇನೆ. ನನ್ನನ್ನ ಆಯ್ಕೆ ಮಾಡಿದ ಕುಮಾರಸ್ವಾಮಿ, ದೇವೇಗೌಡ, ಪಕ್ಷ 19 ಶಾಸಕರಿಗೂ ನಾನು ಧನ್ಯವಾದ ಹೇಳುತ್ತೇನೆ. ಪಕ್ಷಕ್ಕಾಗಿ, ಪಕ್ಷದ ಸಂಘಟನೆಗಾಗಿ ಕೆಲಸ ಮಾಡುತ್ತೇನೆ ಅಂತ ಕಣ್ಣೀರು ಹಾಕುತ್ತಾ ದೇವೇಗೌಡರ ಕುಟುಂಬಕ್ಕೆ ಧನ್ಯವಾದ ಹೇಳಿದರು.

# ಫುಟ್‌ಪಾತ್‌ಗಳಲ್ಲಿ ದಿನಗಟ್ಟಲೇ ವಾಹನ ಪಾರ್ಕ್ ಮಾಡೀರಿ ಜೋಕೆ!

**ಬೆಂಗಳೂರು:** ಕೆಲವರಿಗೆ ಬೆಂಗಳೂರಿನ ಫುಟ್‌ಪಾತ್ ಗಳಲ್ಲಿ, ರಸ್ತೆ ಬದಿ ದಿನಗಟ್ಟಲೇ ವಾಹನ ಪಾರ್ಕ್ ಮಾಡಿ ತೆರಳುವ ಅಭ್ಯಾಸವಿರುತ್ತದೆ. ಒಂದು ವೇಳೆ ಈ ಅಭ್ಯಾಸ ಇದ್ದರೆ ತಕ್ಷಣವೇ ಗಮನಿಸಿ. ಫುಟ್‌ಪಾತ್ ಮೇಲೆ ಸುದೀರ್ಘ ಕಾಲ ನಿಲ್ಲಿಸುವ ವಾಹನಗಳನ್ನು ಇದೀಗ ಸಂಚಾರ ಪೊಲೀಸರು ಜಪ್ತಿ ಮಾಡುತ್ತಿದ್ದಾರೆ. ಜಪ್ತಿ ಮಾಡಿದ ನಂತರವೂ ಗಮನಿಸದೆ ಹೋದರೆ, ವಾಹನ ಬಿಡಿಸಿಕೊಳ್ಳದಿದ್ದರೆ ನಿಮ್ಮ ವಾಹನ ಹರಾಜಾಗಲಿದೆ.

**3 ತಿಂಗಳಲ್ಲಿ 1500 ವಾಹನಗಳು ಜಪ್ತಿ:** ರಸ್ತೆ ಬದಿ ವಾಹನ ನಿಲ್ಲಿಸುವುದರಿಂದ ಪಾದಚಾರಿಗಳ ಓಡಾಟಕ್ಕೆ ತೊಂದರೆಯಾಗುತ್ತದೆ. ಇದನ್ನು ಪೊಲೀಸರು ಗಂಭೀರವಾಗಿ ಪರಿಗಣಿಸಿದ್ದಾರೆ. ಕಳೆದ 3 ತಿಂಗಳಲ್ಲಿ 1500 ವಾಹನಗಳನ್ನು ಜಪ್ತಿ ಮಾಡಲಾಗಿದೆ. ವಾಹನ ನೋಂದಣಿ ಆಧರಿಸಿ ವಾಹನಗಳ ಮಾಲೀಕರಿಗೆ ಮಾಹಿತಿ ನೀಡಲಾಗಿದೆ. ಈ ವೇಳೆ, 1388 ವಾಹನಗಳನ್ನು ಅವುಗಳ ಮಾಲೀಕರು ದಂಡ ಪಾವತಿಸಿ ಬಿಡಿಸಿಕೊಂಡಿದ್ದಾರೆ. ಇದರ ಜೊತೆಗೆ ವಾಹನದ ಮೇಲೆ ಇರುವ ಹಳೆ ದಂಡವನ್ನೂ ವಸೂಲಿ ಮಾಡಲಾಗುತ್ತಿದೆ.

ನಂಬರ್ ಪ್ಲೇಟ್ ಇಲ್ಲದ 64 ವಾಹನಗಳನ್ನು



ಪಾರ್ಕಿಂಗ್ ಯಾರ್ಡ್‌ಗೆ ಸ್ಥಳಾಂತರ ಮಾಡಲಾಗಿದೆ. ಮೈಲಸಂದ್ರದ ಪಾರ್ಕಿಂಗ್ ಯಾರ್ಡ್‌ಗೆ ಸ್ಥಳಾಂತರ ಮಾಡಲಾಗಿದೆ. ವಾಹನ ಮಾಲೀಕರು ಪತ್ತೆಯಾಗದಿದ್ದರೆ ಕೋರ್ಟ್ ಅನುಮತಿ ಪಡೆದು ಹರಾಜು ಹಾಕಲಾಗುತ್ತದೆ.

ಮತ್ತೊಂದೆಡೆ, ಸುದೀರ್ಘ ಕಾಲದಿಂದ ಪಾರ್ಕ್ ಮಾಡಿರುವ ವಾಹನಗಳು ಕಳ್ಳತನವಾಗುವ ಸಾಧ್ಯತೆಯೂ ಹೆಚ್ಚಿದೆ. ಅಂಥ ವಾಹನಗಳನ್ನು ಕಳವು ಮಾಡಿ ಅಪರಾಧ ಕೃತ್ಯಗಳಿಗೆ ಬಳಸುವ ಆತಂಕ ಎದುರಾಗಿದೆ. ಈ ಎಲ್ಲ ಕಾರಣಗಳಿಂದ ಸಂಚಾರ ಪೊಲೀಸರು ಕಠಿಣ ಕ್ರಮಕ್ಕೆ ಮುಂದಾಗಿದ್ದಾರೆ.

ಬೆಂಗಳೂರು ನಗರದ ಫುಟ್‌ಪಾತ್‌ಗಳು, ಸಾರ್ವಜನಿಕ ಮಾರ್ಗಗಳು ಮತ್ತು ರಸ್ತೆಗಳಲ್ಲಿ ಸಾರ್ವಜನಿಕ ಸಂಚಾರಕ್ಕೆ ಅಡ್ಡಿಪಡಿಸುವ ವಾಹನಗಳನ್ನು ಗುರುತಿಸಲು ತಂಡಗಳನ್ನು ರಚಿಸುವ ಕುರಿತು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಕಳೆದ ಫೆಬ್ರವರಿ ತಿಂಗಳಲ್ಲಿ ಸರ್ಕಾರಕ್ಕೆ ಸಲ್ಲಿಸಿದ್ದ ಅಫಿಡವಿಟ್‌ನಲ್ಲಿ ಬಹಿರಂಗಪಡಿಸಿದ್ದರು. ಯಾವುದೇ ವಾಹನವನ್ನು 15 ದಿನಗಳಿಗಿಂತ ಹೆಚ್ಚು ಕಾಲ ಫುಟ್‌ಪಾತ್‌ಗಳು ಅಥವಾ ರಸ್ತೆಗಳಲ್ಲಿ ನಿಲ್ಲಿಸಿದರೆ ಅದನ್ನು ವಾರಸುದಾರರು ತ್ಯಜಿಸಿದ ವಾಹನ ಎಂದು ಪರಿಗಣಿಸಲಾಗುತ್ತದೆ ಮತ್ತು ನೋಂದಾಯಿತ ಮಾಲೀಕರಿಗೆ ದಂಡವನ್ನು ವಿಧಿಸಲಾಗುತ್ತದೆ ಎಂದು ಅಫಿಡವಿಟ್‌ನಲ್ಲಿ ಹೇಳಲಾಗಿತ್ತು. ವಾರಸುದಾರರಿಲ್ಲದ ವಾಹನಗಳಿಗೆ ಸಂಬಂಧಿಸಿದ ಕರ್ನಾಟಕ ಹೈಕೋರ್ಟ್ ವಿಚಾರಣೆ ವೇಳೆ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಸರ್ಕಾರದ ಪರ ಮಾಹಿತಿ ನೀಡುವ ಸಂದರ್ಭ ಇದನ್ನು ಉಲ್ಲೇಖಿಸಿದ್ದರು.

## ಬುರ್ಖಾ ಧರಿಸಿ ಸಿಸಿಬಿ ಮುಂದೆ ಹಾಜರಾದ ನಟಿ ಹೇಮಾ ಅರೆಸ್ಟ್



**ಬೆಂಗಳೂರು:** ರೇವ್ ಪಾರ್ಟಿ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ದಿಕ್ಕು ತಪ್ಪಿಸುವ ಯತ್ನ ಮಾಡಿದ್ದ ಆರೋಪದ ಮೇಲೆ ತೆಲುಗು ನಟಿ ಹೇಮಾ ಅವರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಇತ್ತೀಚೆಗೆ ಡ್ರಗ್ಸ್ ಸೇವನೆಗೆ ಸಂಬಂಧಿಸಿದಂತೆ ಹೇಮಾ ರಿಪೋರ್ಟ್ ಪಾಸಿಟೀವ್ ಬಂದಿತ್ತು. ಈ ವೇಳೆ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಮೊದಲು ವಿಚಾರಣೆಗೆ ಹಾಜರಾಗುವಂತೆ ಅವರಿಗೆ ನೋಟಿಸ್ ನೀಡಲಾಗಿತ್ತು. ಆದರೆ ಅವರು ಅನಾರೋಗ್ಯದ ನೆಪ ಹೇಳಿ ವಿಚಾರಣೆಗೆ ಹಾಜರಾಗದೇ ಸಮಯಾವಕಾಶ ಕೇಳಿದ್ದರು. ಹಾಜರಾಗದ ಹಿನ್ನೆಲೆಯಲ್ಲಿ ಸಿಸಿಬಿ ಅಧಿಕಾರಿಗಳು 2ನೇ ನೋಟಿಸ್ ಕೂಡ ನೀಡಿದ್ದರು. ನಿನ್ನೆ ಸಂಜೆ 4 ಗಂಟೆಗೆ ಬೆಂಗಳೂರಿಗೆ ಆಗಮಿಸಿರುವ ಅವರು ಬುರ್ಖಾ ತೊಟ್ಟು ಅಧಿಕಾರಿಗಳ ಮುಂದೆ ಹಾಜರಾಗಿದ್ದರು. ಈ ವೇಳೆ ಅವರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಸಿಸಿಬಿ ಪೊಲೀಸರು ವಿಚಾರಣೆ ನಡೆಸುತ್ತಿದ್ದು, ಅವರು ಸಮರ್ಪಕ ಉತ್ತರ ನೀಡಿಲ್ಲ. ಅವರನ್ನು ಕೆಸಿ ಜನರಲ್ ಆಸ್ಪತ್ರೆಗೆ ಮೆಡಿಕಲ್ ಟೆಸ್ಟ್‌ಗಾಗಿ ಪೊಲೀಸರು ಕರೆದೊಯ್ದಿದ್ದಾರೆ. ಮಂಗಳವಾರ ಬೆಳಗ್ಗೆ ಆನೇಕಲ್ ನಲ್ಲಿರುವ ನ್ಯಾಯಾಲಯದ ಮುಂದೆ ನಟಿಯನ್ನು ಹಾಜರುಪಡಿಸಲಿದ್ದಾರೆ.

# ಎಂ.ಪಿ. ರೇಣುಕಾಚಾರ್ಯ, ಪುತ್ರನಿಗೆ ಫೋನ್‌ನಲ್ಲಿ ಕೊಲೆ ಬೆದರಿಕೆ

**ಬೆಂಗಳೂರು:** ಮಾಜಿ ಸಚಿವ, ಹೊನ್ನಾಳಿ ಮಾಜಿ ಶಾಸಕ, ಬಿಜೆಪಿ ಮುಖಂಡ ಎಂಪಿ ರೇಣುಕಾಚಾರ್ಯ ಅವರಿಗೆ ದೂರವಾಣಿ ಮೂಲಕ ಕೊಲೆ ಬೆದರಿಕೆ ಒಡ್ಡಲಾಗಿದೆ. ಮಗನನ್ನೂ ಕೊಲೆ ಮಾಡುತ್ತೇವೆ ಎಂದು ಬೆದರಿಸಲಾಗಿದೆ.

ನಿನ್ನೆ ಬೆಳಗ್ಗೆ ಬೆದರಿಕೆ ಕರೆ ಬಂದಿದ್ದು, ?ನಿನಗೂ ನಿನ್ನ ಮಗನಿಗೂ ಇವತ್ತು ರಾತ್ರಿ ಒಳಗೆ ಮುಗಿಸ್ತೀವಿ? ಎಂದು ಕರೆ ಮಾಡಿದವರು ಬೆದರಿಸಿದ್ದಾರೆ. 912250155161 ಹಾಗೂ 60695539248 ನಂಬರ್‌ಗಳಿಂದ ಕರೆ ಮಾಡಲಾಗಿದೆ ಎಂದು ರೇಣುಕಾಚಾರ್ಯ ತಿಳಿಸಿದ್ದಾರೆ.

**ರೈತ ವಿರೋಧಿ ಸರಕಾರ:** ಈ ಸರ್ಕಾರ ರೈತ ವಿರೋಧಿ ಸರ್ಕಾರ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ರೈತರ ಆತ್ಮಹತ್ಯೆಗಳು ನಿರಂತರವಾಗಿ ನಡೆಯುತ್ತಿವೆ ಎಂದು ಎಂ.ಪಿ. ರೇಣುಕಾಚಾರ್ಯ ಆರೋಪಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರ ಹಿಡಿದ ಸಂದರ್ಭದಿಂದ ಇಲ್ಲಿಯವರೆಗೆ 500ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರೈತರ ಬಗ್ಗೆ ನಿಜವಾದ ಕಾಳಜಿ ಇದ್ದರೆ ಆತ್ಮಹತ್ಯೆಗೆ ಕಾರಣ ಕಂಡುಹಿಡಿದು ಸಾಲ ಮನ್ನಾ ಮಾಡುವುದು ಸೇರಿದಂತೆ ರೈತಪರ ಯೋಜನೆಗಳನ್ನು ರೂಪಿಸಬೇಕು ಎಂದಿದ್ದಾರೆ.

ಅಮಾನತು ಆದೇಶ ಹಿಂಪಡೆಯಬೇಕು: ಚನ್ನಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ, ಪೊಲೀಸರ ಮೇಲೆ ಹಲ್ಲೆ ನಡೆದರೂ ದುಷ್ಕರ್ಮಿಗಳನ್ನು ಬಂಧಿಸಿ, ಕಠಿಣ ಕ್ರಮ ಕೈಗೊಂಡಿಲ್ಲ. ಬದಲಿಗೆ ಡಿವೈಎಸ್‌ಪಿ ಪ್ರಶಾಂತ್ ಮುನ್ನೋಳಿ ಹಾಗೂ ಪೊಲೀಸ್ ಇನ್‌ಸ್ಪೆಕ್ಟರ್ ನಿರಂಜನ ಅವರನ್ನು ಹೊಣೆಗಾರರನ್ನಾಗಿಸಿ ಅಮಾನತುಗೊಳಿಸಿ, ತುಷ್ಟೀಕರಣ ನೀತಿ ಅನುಸರಿಸಿರುವುದು ಖಂಡನೀಯ. ಸರ್ಕಾರ ಕೂಡಲೇ



ಅಧಿಕಾರಿಗಳ ಅಮಾನತು ಆದೇಶ ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ.

**ಚಂದ್ರಶೇಖರ ಆತ್ಮಹತ್ಯೆ ಪ್ರಕರಣ ಸಿಬಿಐಗೆ ವಹಿಸಿ:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಬಹುಕೋಟಿ ಹಗರಣ ಹಾಗೂ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರ್ ಅವರು ಆತ್ಮಹತ್ಯೆಗೂ ಮುನ್ನ ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿರುವುದು ಪತ್ರಿಕೆಗಳಲ್ಲಿ ವರದಿಯಾಗಿದೆ. ನಿಗಮದ ಬಹುಕೋಟಿ ಹಗರಣ ಹಾಗೂ ಆತ್ಮಹತ್ಯೆ ಪ್ರಕರಣದಲ್ಲಿ ನ್ಯಾಯ ಸಿಗಬೇಕಾದರೆ ಈ ಪ್ರಕರಣವನ್ನು ಸಿಬಿಐಗೆ ವಹಿಸಿ ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

# ವಿಧಾನಪರಿಷತ್ ಟಿಕೆಟ್ ಘೋಷಣೆ ಬೆನ್ನಲ್ಲೇ ರಾಜ್ಯ ಕಾಂಗ್ರೆಸ್‌ನಲ್ಲಿ ಅಸಮಾಧಾನ

**ಬೆಂಗಳೂರು:** ವಿಧಾನಸಭೆಯಿಂದ ವಿಧಾನಪರಿಷತ್ ಗೆ ನಡೆಯುವ ಚುನಾವಣೆಗೆ ಈಗಾಗಲೇ ಕಾಂಗ್ರೆಸ್ ತನ್ನ ಏಳು ಅಭ್ಯರ್ಥಿಗಳನ್ನು ಪ್ರಕಟಿಸಿದ್ದು, ಅಭ್ಯರ್ಥಿಗಳು ಈಗಾಗಲೇ ವಿಧಾನಪರಿಷತ್ ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದಾರೆ.



ಆದ್ರೆ, ವಿಧಾನಪರಿಷತ್ ಟಿಕೆಟ್ ವಿಚಾರವಾಗಿ ಕಾಂಗ್ರೆಸ್‌ನಲ್ಲಿ ಅಸಮಾಧಾನ ಸ್ಫೋಟಗೊಂಡಿದೆ. ಅಭ್ಯರ್ಥಿಗಳು ನಾಮಪತ್ರ ಸಲ್ಲಿಕೆಗೆ ಮುನ್ನ ವಿಧಾನಪರಿಷತ್ ಚುನಾವಣೆ ಬಗ್ಗೆ ಚರ್ಚಿಸಲು ಕಾಂಗ್ರೆಸ್ ಶಾಸಕಾಂಗ ಸಭೆ ನಡೆದಿತ್ತು. ಈ ಸಭೆಗೆ ಕೆಲ ಹಿರಿಯ ಸಚಿವರು ಹಾಜರಾಗದೇ ಗೈರಾಗುವ ಮೂಲಕ ತಮ್ಮ ಅಸಮಾಧಾನಗೊಂಡಿದ್ದಾರೆ. ಸಚಿವರಾದ ಡಾ ಜಿ ಪರಮೇಶ್ವರ್, ಸತೀಶ್ ಜಾರಕಿಹೊಳಿ, ಕೆಎನ್ ರಾಜಣ್ಣ ಮತ್ತು ಜಮೀರ್ ಅಹಮ್ಮದ್ ಖಾನ್ ನಿನ್ನೆಯ ಶಾಸಕಾಂಗ ಸಭೆಗೆ ಗೈರಾಗಿದ್ದರು. ಈ ಮೂಲಕ ಮೂಲಕ ಅಸಮಾಧಾನ ಹೊರಹಾಕಿದ್ದಾರೆ.

ಹುಬ್ಬಳ್ಳಿಯ ತಮ್ಮ ಸಮುದಾಯದಯದ ಇಸ್ಮಾಯಿಲ್ ತಮಟಗಾರ ಅವರಿಗೆ ಪರಿಷತ್ ಟಿಕೆಟ್ ನೀಡಬೇಕೆಂದು ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಮುಂದೆ ಬೇಡಿಕೆ ಇಟ್ಟಿದ್ದರು. ಆದ್ರೆ, ಹೈಕಮಾಂಡ್ ಇಸ್ಮಾಯಿಲ್ ತಮಟಗಾರ ಬದಲಿಗೆ ಅದೇ ಮುಸ್ಲಿಂ ಸಮುದಾಯದ ಶಿವಮೊಗ್ಗ ಮೂಲದ ಬಲ್ಕಿಸ್ ಭಾನು ಅವರಿಗೆ ಮಣೆ ಹಾಕಿದೆ. ಇದರಿಂದ ಜಮೀರ್ ಅಹಮ್ಮದ್ ಖಾನ್ ಅವರ ಕಣ್ಣು ಕೆಂಪಾಗಿಸಿದ್ದು, ಶಾಸಕಾಂಗ ಸಭೆಗೆ ಹಾಜರಾಗದೇ ಪರೋಕ್ಷವಾಗಿ ತಮ್ಮ ಅಸಮಾಧಾನ ಹೊರಹಾಕಿದ್ದಾರೆ.

ಇನ್ನು ಗೃಹ ಸಚಿವ ಡಾ ಜಿ ಪರಮೇಶ್ವರ್ ಸಹ ತಮ್ಮ ಅಭಿಪ್ರಾಯ ಕೇಳಿ ಟಿಕೆಟ್ ನೀಡಬೇಕೆಂದು ಈ ಹಿಂದೆಯೇ ಹೇಳಿದ್ದರು. ಆದ್ರೆ, ಡಿಕೆ ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಅವರು ಹಿರಿಯ ಸಚಿವರ ಅಭಿಪ್ರಾಯ ಕೇಳದೇ ಏಕಾಂಗಿಯಾಗಿ ತಾವೇ ಸ್ವಯಂ ನಿರ್ಧಾರ ತೆಗೆದುಕೊಂಡು ಹೈಕಮಾಂಡ್‌ಗೆ ಅಭ್ಯರ್ಥಿಗಳ ಪಟ್ಟಿ ಶಿಫಾರಸು ಮಾಡಿರುವುದು ಪರಮೇಶ್ವರ್ ಅವರ ಅಸಮಾಧಾನಕ್ಕೆ ಕಾರಣವಾಗಿದೆ.

ಪರಮೇಶ್ವರ್ ಹಾಗೂ ರಾಜಣ್ಣ ಅವರು ದಲಿತ, ಅತಿ ಹಿಂದುಳಿದವರಿಗೆ ಟಿಕೆಟ್ ಕೇಳಿದ್ದರು. ಆದರೆ ಹಿರಿಯ ಸಚಿವರ ಯಾವೊಬ್ಬ ಬೆಂಬಲಿಗರಿಗೂ ಮನ್ನಣೆ ಸಿಕ್ಕಿಲ್ಲ. ಹೀಗಾಗಿ ರಾಜಣ್ಣ, ಪರಮೇಶ್ವರ್, ಶಾಸಕಾಂಗ ಸಭೆ ಗೈರಾಗುವ ಮೂಲಕ ಹೈಕಮಾಂಡ್ ನಿರ್ಧಾರಕ್ಕೆ ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ. ಇನ್ನು ಮತ್ತೋರ್ವ ಸಚಿವ ಸತೀಶ್ ಜಾರಕಿಹೊಳಿ ಅವರು ಸಹ ಮುಂಬೈ ಕರ್ನಾಟಕ ಭಾಗದವರಿಗೆ ವಿಧಾನಪರಿಷತ್ ಟಿಕೆಟ್ ಕೇಳಿದ್ದರು. ಅವರ ಮನವಿಗೂ ಹೈಕಮಾಂಡ್ ಕ್ಯಾರೇ ಎಂದಿಲ್ಲ. ಹೀಗಾಗಿ ಸತೀಶ್ ಜಾರಕಿಹೊಳಿ ಅವರ ಅಸಮಾಧಾನಕ್ಕೆ ಕಾರಣವಾಗಿದೆ.

## ಕೌಂಟಿಂಗ್ ಕೌತುಕ

ಬಿಜೆಪಿಯನ್ನು ಶತಾಯ ಗತಾಯ ಸೋಲಿಸಬೇಕು ಎಂಬ ಕಾರಣಕ್ಕಾಗಿಯೇ ಕಾಂಗ್ರೆಸ್ ಮುಂದಾಳತ್ವದಲ್ಲಿ ಇಂಡಿಯಾ ಒಕ್ಕೂಟವನ್ನು ರಚಿಸಿ, ಪ್ರತಿಪಕ್ಷಗಳು ಒಗ್ಗೂಡಿ ಚುನಾವಣೆ ಎದುರಿಸಿವೆ. ಮತಗಟ್ಟೆ ಸಮೀಕ್ಷೆಗಳ ವರದಿಗಳ ಆಚೆಯೂ ಅಚ್ಚರಿಯ ಫಲಿತಾಂಶವನ್ನು ಇಂಡಿಯಾ ಒಕ್ಕೂಟದ ಪಕ್ಷಗಳು ನಿರೀಕ್ಷಿಸುತ್ತಿವೆ. ಹಾಗೊಂದು ವೇಳೆ, ಮತಗಟ್ಟೆ ಸಮೀಕ್ಷೆಗಳು ಉಲ್ಟಾ ಹೊಡೆದರೆ, ಇಂಡಿಯಾ ಮೈತ್ರಿಕೂಟವು ಮುನ್ನಡೆ ಸಾಧಿಸಲಿದೆ. ಆದರೆ, ಆರಂಭಿಕ ಹಂತದ ಮತಎಣಿಕೆ ಪ್ರಕಾರ, ಎನ್‌ಡಿಎ ಬಾರಿ ಮುನ್ನಡೆ ಸಾಧಿಸಿದೆ.

**ಸಮೀಕ್ಷೆಗಳು ಹೇಳಿದ್ದೇನು?:** ಎಲ್ಲ ಸಮೀಕ್ಷಾ ವರದಿಗಳನ್ನು ವಿಶ್ಲೇಷಿಸಿದಾಗ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟವು ಒಟ್ಟು 543 ಕ್ಷೇತ್ರಗಳ ಪೈಕಿ 355–380 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದೆ ಎಂದು ತಿಳಿದುಬಂದಿದೆ. ಇದರೊಂದಿಗೆ 2019ರ ಲೋಕಸಭೆ ಚುನಾವಣೆ ಫಲಿತಾಂಶವೇ ಮರುಕಳಿಸಲಿದೆ ಎಂದು ಹೇಳಲಾಗುತ್ತಿದೆ. 2019ರಲ್ಲಿ ಎನ್‌ಡಿಎ ಮೈತ್ರಿಕೂಟವು 353 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದರೆ, ಬಿಜೆಪಿಯೊಂದೇ 303 ಕ್ಷೇತ್ರಗಳಲ್ಲಿ ಜಯ ಕಂಡಿತ್ತು.

ಕಾಂಗ್ರೆಸ್ ಸೇರಿ ಹಲವು ಪಕ್ಷಗಳು ಒಗ್ಗೂಡಿ ರಚಿಸಿರುವ ಇಂಡಿಯಾ ಒಕ್ಕೂಟವು ಪ್ರಸಕ್ತ ಸಾರ್ವತ್ರಿಕ ಚುನಾವಣೆಯಲ್ಲಿ 125–165 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದೆ ಎಂಬುದು ಮತಗಟ್ಟೆ ಸಮೀಕ್ಷೆಗಳ ಒಟ್ಟು ಸಾರವಾಗಿದೆ. ಇದರೊಂದಿಗೆ ಇಂಡಿಯಾ ಒಕ್ಕೂಟವು ಮ್ಯಾಜಿಕ್ ನಂಬರ್ (272) ಬಿಡಿ, 200 ಕ್ಷೇತ್ರಗಳನ್ನೂ ತಲುಪುವುದಿಲ್ಲ ಎಂದು ಸಮೀಕ್ಷೆಗಳು ತಿಳಿಸಿವೆ. ಇದರೊಂದಿಗೆ ಕಾಂಗ್ರೆಸ್ ಸೇರಿ ಪ್ರತಿಪಕ್ಷಗಳಿಗೆ ಸತತ ಮೂರನೇ ಬಾರಿಯೂ ಹಿನ್ನಡೆಯಾಗುವುದು ನಿಶ್ಚಿತ ಎಂದು ಹೇಳಲಾಗುತ್ತಿದೆ.

**ಮತ್ತೊಮ್ಮೆ ಮೋದಿ ಅನ್ನೋದು ನಿಜವಾಗಿದೆ: ಸಿಟಿ ರವಿ:** ಬೆಂಗಳೂರು: ನಗರದಲ್ಲಿಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತಾಡಿದ ಬಿಜೆಪಿ ನಾಯಕ ಸಿಟಿ ರವಿ ಮತ್ತೊಮ್ಮೆ ಮೋದಿ ಎಂದುಕೊಂಡಿದ್ದ ಜನರ ನಿರೀಕ್ಷೆ ನಿಜವಾಗುತ್ತಿದೆ, ಆದರೆ ನಿರೀಕ್ಷಿಸಿದಷ್ಟು ಸಂಖ್ಯೆಯ ಸ್ಥಾನಗಳಲ್ಲಿ ಮುನ್ನಡೆ ಇನ್ನೂ ಲಭ್ಯವಾಗಿಲ್ಲ, 300 ರಿಂದ 350 ಸೀಟುಗಳನ್ನು ಗೆಲ್ಲುವ ನಿರೀಕ್ಷೆ ಇತ್ತು, ಆದರೆ ಸಂಖ್ಯೆಯಲ್ಲಿ ಕೊಂಚ ಹಿನ್ನಡೆಯಾಗಬಹುದು ಆದರೆ ನರೇಂದ್ರ ಮೋದಿಯವರೇ ಮತ್ತೊಮ್ಮೆ ಪ್ರಧಾನಿಯಾಗಬೇಕೆನ್ನುವ ಮಾತಿಗೆ ಜನ ಮನ್ನಣೆ ನೀಡಿದ್ದಾರೆ ಎಂದು ಸಿಟಿ ರವಿ ಹೇಳಿದರು. ಅದಾಗ್ಯೂ, ಈಗಲೇ ಯಾವುದನ್ನೂ ನಿರ್ಧಾರಿತವಾಗಿ ಹೇಳಲಾಗಲ್ಲ, ಒಂದು ಗಂಟೆಯ ಹೊತ್ತಿಗೆ ಸ್ಪಷ್ಟ ಚಿತ್ರಣ ಸಿಗಲಿದೆ ಎಂದು ಹೇಳಿದ ಅವರು, 2014 ಮತ್ತು 2019 ರ ಚುನಾವಣೆ ಸಂದರ್ಭದಲ್ಲೂ ಬೆಳಗಿನ 11 ಗಂಟೆ ಹೊತ್ತಿಗೆ ಇದೇ ರೀತಿಯ ವಾತಾವರಣವಿತ್ತು, ಆದರೆ ಮಧ್ಯಾಹ್ನವಾಗುತ್ತಿದಂತೆಯೇ ಎನ್ ಡಿ ಎ ಭಾರೀ ಸಂಖ್ಯೆಯಲ್ಲಿ ಸೀಟುಗಳನ್ನು ಗೆದ್ದು ಬೀಗಿತ್ತು. ಈ ಬಾರಿಯೂ ಹಾಗೆಯೇ ಆಗಲಿದೆ ಎಂಬ ವಿಶ್ವಾಸವಂತೂ ಇದೆ ಎಂದು ಹಿರಿಯ ಬಿಜೆಪಿ ನಾಯಕ ಹೇಳಿದರು.

## ಟಿ ಶರ್ಟ್ ಕಿರಿಕ್

ರಘುಪತಿ ಭಟ್ ಟಿ ಶರ್ಟ್ ಧರಿಸಿ ಬಂದಿದ್ದರು. ಸೆಕ್ಯೂರಿಟಿ ಚೆಕ್ ಎಲ್ಲವೂ ಆದ ಬಳಿಕ ಒಳಗೆ ಬಂದಾಗ ಟಿ ಶರ್ಟ್ ಧರಿಸಿ ಮತ ಎಣಿಕೆ ಕೇಂದ್ರಕ್ಕೆ ಬರಬಾರದು ಎಂದು ಪೊಲೀಸರು ಹೊರಗೆ ಕಳಿಸಿದ್ದಾರೆ. ಇದರಿಂದ ಸಿಟ್ಟಾದ ರಘುಪತಿ ಭಟ್ ಅನುಮತಿ ಇದೆ ಎಂದು ಹೇಳಿದ್ದಕ್ಕೆ ಟಿ ಶರ್ಟ್ ಧರಿಸಿದ್ದು, ಇಲ್ಲಿಗೆ ಬಂದ್ಮೇಲೆ ಪೊಲೀಸರು ಹೊರಗೆ ಕಳಿಸಿ ಅವಮಾನ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು. ಟಿ ಶರ್ಟ್ ಧರಿಸಿ ಬರಬಾರದು ಎಂಬ ಯಾವ ರೂಲ್ಸ್ ಇಲ್ಲ. ಹೀಗಿದ್ದರೂ ಪೊಲೀಸರು ಸುಖಾಸುಮ್ಮನೆ ಕಿರಿಕಿರಿ ಮಾಡುತ್ತಿದ್ದಾರೆ. ನನ್ನ ಎಳೆದುಕೊಂಡು, ದೂಡಿಕೊಂಡು ಹೊರಗೆ ಕಳಿಸಿದ್ದಾರೆ ಎಂದು ಅಸಮಾಧಾನ ಹೊರಹಾಕಿದರು.

ಮತ ಎಣಿಕೆ ಕೇಂದ್ರದಲ್ಲಿ ಮೊಬೈಲ್ ನಿಷೇಧ ಮಾಡಲಾಗಿದ್ದು, ಹೆಜ್ಜೆ ಹೆಜ್ಜೆಗೂ ಸಿಸಿ ಟಿವಿ ಕ್ಯಾಮೆರಾ ಕಣ್ಗಾವಲು ಇಡಲಾಗಿದೆ. ಪೊಲೀಸ್ ಸಿಬ್ಬಂದಿ, ಮತ ಎಣಿಕೆ ಸಿಬ್ಬಂದಿ ಸೇರಿದಂತೆ ಯಾರಿಗೂ ಮೊಬೈಲ್ ಕೊಂಡೊಯ್ಯಲು ಅವಕಾಶವಿಲ್ಲ. ನಾಲ್ಕು ಹಂತದಲ್ಲಿ ಸಿಬ್ಬಂದಿಯ ಐಡಿ ಕಾರ್ಡ್ ತಪಾಸಣೆ ಮಾಡಲಾಗುತ್ತದೆ.

ಅಂದಹಾಗೆ ಮತ ಎಣಿಕೆ ಕೇಂದ್ರದ ಕೊಠಡಿಯೊಳಗೆ ಮೊಬೈಲ್ ಫೋನ್, ಸ್ಮಾರ್ಟ್ ವಾಚ್, ಬ್ಲ್ಯೂಟೂತ್ ಡಿವೈಸ್, ನೀರಿನ ಬಾಟೆಲ್, ತಿಂಡಿ ಹಾಗೂ ತಂಪು ಪಾನೀಯಯನ್ನು ತರುವಂತಿಲ್ಲ. ಇನ್ನೂ ಗುಟ್ಕಾ, ಪಾನ್ ಮಸಾಲ, ಧೂಮಪಾನವೂ ನಿಷೇಧವಿದೆ. ಮ್ಯಾಚ್ ಬಾಕ್ಸ್, ಲೈಟರ್, ಪಟಾಕಿಯನ್ನು ತರುವಂತಿಲ್ಲ.

ಮೊದಲನೇ ಪುಟದಿಂದ...

## ಎನ್‌ಡಿಎಗೆ ಭರ್ಜರಿ ಮುನ್ನಡೆ

175 ಸ್ಥಾನಗಳ ಪೈಕಿ ಮೈತ್ರಿಕೂಟ 160 ಸ್ಥಾನಗಳಲ್ಲಿ ಜಯಗಳಿಸುವ ಮೂಲಕ ರಾಜ್ಯದಲ್ಲಿ ಅಧಿಕಾರ ಪಡೆಯಲಿದೆ ಎಂದು ಭವಿಷ್ಯ ನುಡಿಯಲಾಗಿದೆ. ಆಂಧ್ರಪ್ರದೇಶದ 175 ವಿಧಾನಸಭಾ ಸ್ಥಾನಗಳಲ್ಲಿ ಟಿಡಿಪಿ 30 ಸ್ಥಾನಗಳಲ್ಲಿ ಅಲ್ಪ ಮುನ್ನಡೆ ಸಾಧಿಸಿದೆ. ವೈಎಸ್‌ಆರ್‌ಪಿ ಮೂರು ಸ್ಥಾನಗಳಲ್ಲಿ ಮಾತ್ರ ಮುಂದಿದೆ. ಲೋಕಸಭಾ ಚುನಾವಣೆಯಲ್ಲಿ ಟಿಡಿಪಿ ನಾಲ್ಕು ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದರೆ, ವೈಎಸ್‌ಆರ್‌ಪಿ ಎರಡು ಮತ್ತು ಬಿಜೆಪಿ ಎರಡು ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದೆ. ರಾಜ್ಯದಲ್ಲಿ ಅಧಿಕಾರ ಪಡೆಯಲು 88 ಕ್ಷೇತ್ರಗಳಲ್ಲಿ ಜಯ ಗಳಿಸುವುದು ಅಗತ್ಯ.

**2019ರ ಚಿತ್ರಣ:** 2019ರ ಆಂಧ್ರಪ್ರದೇಶ ವಿಧಾನಸಭೆ ಚುನಾವಣೆಯಲ್ಲಿ ವೈಎಸ್‌ಆರ್‌ಸಿಪಿ 151 ಸ್ಥಾನಗಳಲ್ಲಿ ಜಯಭೇರಿ ಬಾರಿಸಿ ವೈಎಸ್ ಜಗನ್ ಮೋಹನ್ ರೆಡ್ಡಿ ಮುಖ್ಯಮಂತ್ರಿಯಾಗಿ ಆಯ್ಕೆಯಾಗಿದ್ದರು. ಆಗ ಆಡಳಿತದಲ್ಲಿದ್ದ ಟಿಡಿಪಿ ಕೇವಲ 23 ಸ್ಥಾನಗಳನ್ನು ಗೆದ್ದು ಸೋತಿತ್ತು. ಪವನ್ ಕಲ್ಯಾಣ್ ನೇತೃತ್ವದ ಜೆಎಸ್‌ಪಿ ಒಂದೇ ಒಂದು ಸ್ಥಾನವನ್ನು ಗೆದ್ದಿದ್ದರೆ, ಕಾಂಗ್ರೆಸ್ ಹಾಗೂ ಬಿಜೆಪಿಗೆ ಖಾತೆ ತೆರೆದಿರಲಿಲ್ಲ.

## ಹೆಚ್‌ಡಿಕೆ ವಿಶೇಷ ಪೂಜೆ

ಮೈಸೂರು–ಕೊಡಗು ಕ್ಷೇತ್ರದಲ್ಲಿ ಬಿಜೆಪಿಗೆ ಮುನ್ನಡೆ, ಯದುವೀರ ಒಡೆಯರ್ ಗೆ 48318 ಮತಗಳ ಮುನ್ನಡೆ. ಯದುವೀರಗೆ 197069 ಮತ, ಲಕ್ಷ್ಮಣಗೆ 148751 ಮತ

ಶಿವಮೊಗ್ಗ ಲೋಕಸಭೆ ಕ್ಷೇತ್ರದ ಮತ ಎಣಿಕೆ. ಮತ ಎಣಿಕೆ ಆರಂಭ ಆಗುತ್ತಿದ್ದಂತೆ ಬಿಜೆಪಿ ಅಭ್ಯರ್ಥಿ ಬಿ.ವೈ.ರಾಘವೇಂದ್ರ ಟೆಂಪಲ್ ರನ್. ಶಿವಮೊಗ್ಗದ ರವೀಂದ್ರ ನಗರ ಗಣೇಶ ದೇವಸ್ಥಾನ... ಕೋಟೆ ಆಂಜನೇಯ ದೇವಸ್ಥಾನ... ತಿಲಕ ನಗರದ ರಾಘವೇಂದ್ರ ಮಠಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು.

ಬೆಂಗಳೂರು ಗ್ರಾ. ಕ್ಷೇತ್ರದಲ್ಲಿ 81572 ಮತ ಪಡೆದು ಮುನ್ನಡೆ ಸಾಧಿಸಿರುವ ಡಾ.ಮಂಜುನಾಥ್. ಹಾಲಿ ಸಂಸದ, ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್ ಗೆ ಹಿನ್ನಡೆ, 52,363 ಮತ ಪಡೆದಿರುವ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್– ಮಂಡ್ಯ ಲೋಕಸಭಾ ಮೈತ್ರಿ ಅಭ್ಯರ್ಥಿ ಜೆಡಿ ಎಸ್ ಕುಮಾರಸ್ವಾಮಿಗೆ ನಿರ್ಮಾಲನಂದ ಸ್ವಾಮೀಜಿ ಸನ್ಮಾನ ಮಾಡಿದರು. ನಿರ್ಮಾಲನಂದ ಸ್ವಾಮೀಜಿ ಅವರಿಗೂ ಸಹ ಕುಮಾರಸ್ವಾಮಿ ಇಂದ ಸನ್ಮಾನ ಮಾಡಲಾಯ್ತು.

ಹಾಸನದ ಮೈತ್ರಿ ಅಭ್ಯರ್ಥಿ ಪ್ರಜ್ವಲ್ ರೇವಣ್ಣಗೆ ಇಲ್ಲ ಫಲಿತಾಂಶ ನೋಡುವ ಭಾಗ್ಯ. ತನ್ನ ರಿಸಲ್ಟ್ ತಾನೇ ನೋಡಲಾಗದ ಸ್ಥಿತಿಯಲ್ಲಿರುವ ಪ್ರಜ್ವಲ್ ರೇವಣ್ಣ. ಫಲಿತಾಂಶ ನೋಡಲಾಗದೆ ಪರಿತಪಿಸುತ್ತಿರೋ ಪ್ರಜ್ವಲ್ ಫಲಿತಾಂಶ ವೀಕ್ಷಿಸಲು ಟಿವಿ ವ್ಯವಸ್ಥೆ ಮಾಡದ ಎಸ್‌ಐಟಿ. ಟಿವಿ ಇಲ್ದೆ ಸೆಲ್ ನಲ್ಲಿ ಸೈಲೆಂಟಾಗಿ ಕುಳಿತ ಪ್ರಜ್ವಲ್. ಕೋರ್ಟ್ ಅನುಮತಿ ಬೇಕೆಂದು ಟಿವಿ ವ್ಯವಸ್ಥೆಗೆ ನಿರಾಕರಿಸಿರೋ ಎಸ್‌ಐಟಿ. ಹೀಗಾಗಿ ರಿಸಲ್ಟ್ ವಿಚಾರ ಗೊತ್ತಾಗದೇ ಫುಲ್ ಟೆನ್ಷನ್. ಫಲಿತಾಂಶ ವೀಕ್ಷಣೆಗೆ ಅವಕಾಶ ಕಲ್ಪಿಸುವಂತೆ ಮನವಿ ಮಾಡಿದ್ದ ಪ್ರಜ್ವಲ್. ಕೋರ್ಟ್ ನಲ್ಲಿ ಮನವಿ ಮಾಡಿದ್ದ ಪ್ರಜ್ವಲ್ ರೇವಣ್ಣ.

## ಪವನ್ ಕಲ್ಯಾಣ್

ಇನ್ನು ಆಂಧ್ರ ವಿಧಾನಸಭೆಯಲ್ಲಿ ಟಿಡಿಪಿ ಪಕ್ಷ ಭಾರಿ ಮುನ್ನಡೆಯಲ್ಲಿದ್ದು ಗೆಲುವು ಖಾತ್ರಿಯಾಗಿದೆ. ಟಿಡಿಪಿ, ಪವನ್ ಕಲ್ಯಾಣ್ ರ ಜನಸೇನಾ ಹಾಗೂ ಬಿಜೆಪಿ ಒಟ್ಟಾಗಿ ಚುನಾವಣೆ ಎದುರಿಸಿದ್ದವು. ಪವನ್ ಕಲ್ಯಾಣ್ ರ ಜನಸೇನಾ ಪಕ್ಷಕ್ಕೆ 25 ಸೀಟುಗಳನ್ನು ನೀಡಲಾಗಿತ್ತು, ಅದರಲ್ಲಿ 17 ಸೀಟುಗಳಲ್ಲಿ ಜನಸೇನಾ ಅಭ್ಯರ್ಥಿಗಳು ಮುನ್ನಡೆಯಲ್ಲಿದ್ದಾರೆ. ಆ ಮೂಲಕ ಪವನ್ ಕಲ್ಯಾಣ್ ಆಂಧ್ರ ರಾಜಕೀಯದಲ್ಲಿ ಖಾತೆ ತೆರೆಯುತ್ತಿದ್ದಾರೆ.

## ಕುಮಾರಸ್ವಾಮಿ

ದೇಶದಲ್ಲಿ ಭರ್ಜರಿ ಬಹುಮತದೊಂದಿಗೆ ಬಿಜೆಪಿ ಅಧಿಕಾರಕ್ಕೆ ಬರಲಿದೆ. ಮಂಡ್ಯದಲ್ಲಿ ಪೋಸ್ಟಲ್ ಬ್ಯಾಲೆಟ್ ಶುರುವಾಗಿದೆ. ಕೊನೆಯ ಹಂತದ ವರೆಗೂ ಮುನ್ನಡೆಯಲ್ಲಿ ಇರುತ್ತೇನೆ. ನಾನು ಚುನಾವಣೆ ಶುರುವಿನಿಂದಲೂ ಉತ್ಸಾಹದಿಂದ ಇದ್ದೇನೆ.

ಎನ್ ಡಿಎ ಅಧಿಕಾರಕ್ಕೆ ಬಂದರೆ ಕೇಂದ್ರ ಸಚಿವರಾಗುತ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಆ ಬಗ್ಗೆ ನನಗೆ ಹೆಚ್ಚಿನ ಆಸಕ್ತಿ ಏನೂ ಇಲ್ಲ. ಮಂಡ್ಯ ಜಿಲ್ಲೆಗೆ ನನ್ನ ಕೈಲಾದ ಅಳಿಲು ಸೇವೆಯನ್ನು ಮಾಡುತ್ತೇನೆ. ರಾಜ್ಯಕ್ಕೆ ಏನಾಗಬೇಕೋ ಅದನ್ನು ಮಾಡುವುದು ನನ್ನ ಮೊದಲ ಆದ್ಯತೆ ಎಂದು ಕುಮಾರಸ್ವಾಮಿ ಹೇಳಿದರು.

## ಆರೋಪ!

**ಲವ್ ಜಿಹಾದ್ ಆರೋಪ; ಹಿಂದೂಪರ ಸಂಘಟನೆ ಮುಖಂಡರ ಭೇಟಿ:** ಕೊಲ್ಹಾರ ಪಟ್ಟಣದಲ್ಲಿ ಹಿಂದೂಪರ ಸಂಘಟನೆಯ ಮುಖಂಡರ ನಿಯೋಗದೊಂದಿಗೆ ಅಪಹರಣಕ್ಕೊಳಗಾದ ಮಹಿಳೆಯ ಮನೆಗೆ ತೆರಳಿ ಕುಟುಂಬದವರಿಗೆ ಸಾಂತ್ವನ ಹೇಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪಟ್ಟಣದ ಹಿಂದೂ ಸಮುದಾಯದ ಚಂದ್ರಭಾಗ ವಿಠ್ಠಲ ಹುಗ್ಗೆನವರ, ಆಕೆಯ ಮಕ್ಕಳಾದ ಪ್ರಥಮ, ಸಜನಿ, ಸಾನ್ವಿ ಎನ್ನುವವರ ಅಪಹರಣವಾಗಿದೆ. ಪ್ರಕರಣವಾಗಿ ಒಂದು ವರ್ಷವಾಗುತ್ತಿದ್ದರೂ ಅಪಹೃತರನ್ನು ಪತ್ತೆ ಮಾಡುವಲ್ಲಿ ಪೊಲೀಸ ಇಲಾಖೆ ವಿಫಲವಾಗಿದೆ ಎಂದರು.

**ಪೊಲೀಸರಿಂದ ಬೆದರಿಕೆ ಆರೋಪ:** ಅಪಹೃತರ ಕುಟುಂಬಸ್ಥರು ನ್ಯಾಯ ಕೇಳಿ ಕೊಲ್ಹಾರ ಠಾಣೆಗೆ ಬಂದರೆ ಪಿಎಸ್‌ಐ ನೊಂದವರಿಗೆ ನ್ಯಾಯ ಕೊಡಿಸುವುದು ಬಿಟ್ಟು ಬೆದರಿಸುವ ಕೆಲಸ ಮಾಡುತ್ತಿದ್ದಾರೆ. ಪೊಲೀಸರು ವಾರದಲ್ಲೇ ಅಪಹರಣ ಕೃತ್ಯದ ಹಿಂದಿರುವ ಶಕ್ತಿಗಳನ್ನ ಪತ್ತೆ ಹಚ್ಚದಿದ್ದರೆ ಹಿಂದೂ ಸಂಘಟನೆಗಳೆಲ್ಲಾ ಬೀದಿಗಿಳಿದು ಹೋರಾಟ ಮಾಡಲಿದೆ. ಅದರಿಂದಾಗುವ ಪರಿಣಾಮಕ್ಕೆ ಕೊಲ್ಹಾರ ಪಿಎಸ್‌ಐ, ಸಿಪಿಐ ಹೊಣೆಯಾಗಲಿದ್ದಾರೆ. ಅಲ್ಲದೇ ಕೃತ್ಯದ ಹಿಂದೆ ಪಟ್ಟಣದ ಎಂ.ಆರ್ ಕಲಾದಗಿ ಎನ್ನುವ ವ್ಯಕ್ತಿ ಹಾಗೂ ಇನ್ನು ಕೆಲವರು ಪ್ರಚೋದನೆ ನೀಡಿರುವ ಮಾಹಿತಿ ದೊರಕಿದ್ದು ಎಂ.ಆರ್ ಕಲಾದಗಿ ಎನ್ನುವ ವ್ಯಕ್ತಿ ಪದೇ ಪದೇ ಹಿಂದೂ ಸಮಾಜವನ್ನ ಕೆಣಕುವ ಕೆಲಸ ಮಾಡುತ್ತಿದ್ದು ಹಿಂದೂ ಸಮಾಜ ಆತನಿಗೆ ಪ್ರತ್ಯುತ್ತರ ನೀಡಲಿದೆ ಎಂದು ಗಂಗಾಧರ ಕುಲಕರ್ಣಿ ಎಚ್ಚರಿಕೆ ನೀಡಿದರು.

**ನಮಗೆ ಹಣ ಬೇಡ, ಮಹಿಳೆ– ಮಕ್ಕಳು ಬೇಕು:** ಅಪಹೃತ ಚಂದ್ರಭಾಗ ಹುಗ್ಗೆನವರ ಚಿಕ್ಕಪ್ಪ ಸಿಂಧೂರ ಬ್ಯಾಲ್ಯಾಳ ಮಾತನಾಡಿ, ನಮ್ಮ ಅಣ್ಣನ ಮಗಳ ಹಾಗೂ ಮೊಮ್ಮಕ್ಕಳ ಅಪಹರಣವಾಗಿದೆ. ಮುಸ್ಲಿಂ ಸಮುದಾಯದ ಅಬ್ದುಲಗಫಾರ ಕಲಾದಗಿ ಎನ್ನುವ ಯುವಕ ಅಪಹರಿಸಿದ್ದು, ಈ ಬಗ್ಗೆ ದೂರ ನೀಡಲಾಗಿಯು ಕೂಡ ಪ್ರಯೋಜನವಾಗಿಲ್ಲ. ಪೊಲೀಸ ಅಧಿಕಾರಿಗಳು ಯುವಕನ ಸಂಬಂಧಿ ಎಂ.ಆರ್ ಕಲಾದಗಿ ಅವರಿಂದ ದುಡ್ಡು ಕೊಡಿಸುತ್ತೇವೆ ಎಂದು ಹೇಳುತ್ತಿದ್ದಾರೆ. ನಮಗೆ ದುಡ್ಡು ಬೇಡ, ನಮ್ಮ ಮಗಳು ಹಾಗೂ ಮೊಮ್ಮಕ್ಕಳು ಬೇಕು ಎಂದ ಅಳಲು ತೋಡಿಕೊಂಡರು.

## ಸಿ.ಇ.ಟಿ 2024 ಪರೀಕ್ಷೆಯಲ್ಲಿ ಎಸ್.ಎಸ್. ಪಿಯು ಕಾಲೇಜು ತಾಲ್ಲೂಕಿಗೆ ಪ್ರಥಮ

**ತಿಪಟೂರು:** ಸಿ.ಇ.ಟಿ 2024 ಪರೀಕ್ಷೆಯಲ್ಲಿ ತಿಪಟೂರಿನ ಎಸ್.ಎಸ್.ಪಿ.ಯು ಕಾಲೇಜಿನ ವಿದ್ಯಾರ್ಥಿಗಳು ಪ್ರತಿ ವರ್ಷದಂತೆ ಈ ಬಾರಿಯೂ ಮೇಲುಗೈ ಸಾಧಿಸಿದ್ದಾರೆ. ಕಾಲೇಜಿನ ವಿದ್ಯಾರ್ಥಿ ಜಿತಿನ್.ಕೆ 686ನೇ ರ್‍ಯಾಂಕ್, 1015 ನೇ ರ್‍ಯಾಂಕ್ ಪಡೆಯುವ ಮೂಲಕ ಇಂಜಿನಿಯರಿಂಗ್ ವಿಭಾಗದಲ್ಲಿ ತಾಲ್ಲೂಕಿಗೆ ಪ್ರಥಮ ಸ್ಥಾನ ಗಳಿಸಿದ್ದಾರೆ. ಇನ್ನುಳಿದಂತೆ ಪುನೀತ್ ಗುರು 980 ನೇ ರ್‍ಯಾಂಕ್, ಮೋಹನ್ ಎನ್.ಎಸ್. 2366 ರ್‍ಯಾಂಕ್, ಪ್ರಕುಲ್ ಹೆಬ್ಬಾರ್ 3068 ರ್‍ಯಾಂಕ್ ಪಡೆದು ಕಾಲೇಜಿಗೆ ಕೀರ್ತಿ ತಂದಿರುತ್ತಾರೆ. ಐದು ಸಾವಿರ ರ್‍ಯಾಂಕ್ ಒಳಗೆ ಸುಮಾರು 10 ವಿದ್ಯಾರ್ಥಿಗಳು, ಹತ್ತು ಸಾವಿರ ರ್‍ಯಾಂಕ್ ಒಳಗೆ ಸುಮಾರು 15 ವಿದ್ಯಾರ್ಥಿಗಳು ರ್‍ಯಾಂಕ್ ಪಡೆದಿರುತ್ತಾರೆ. ತಿಪಟೂರು ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಸಿ.ಇ.ಟಿ, ನೀಟ್ ಮತ್ತು ಜೆ.ಇ.ಇ ಪರೀಕ್ಷೆಗಳಿಗೆ ತರಬೇತಿ ನೀಡಿ ಉತ್ತಮ ಫಲಿತಾಂಶ ನೀಡುತ್ತಿರುವ ಏಕೈಕ ಕಾಲೇಜಾಗಿದೆ ಎಂದು ಹೇಳಲು ಹೆಮ್ಮೆ ಎನಿಸುತ್ತದೆಂಬುದಾಗಿ ಕಾಲೇಜಿನ ಕಾರ್ಯದರ್ಶಿ ಶ್ರೀಮತಿ ಯಮುನಾ ರವರು ತಿಳಿಸಿದ್ದು, ರ್‍ಯಾಂಕ್ ಪಡೆದ ಎಲ್ಲಾ ವಿದ್ಯಾರ್ಥಿಗಳಿಗೂ ಕಾಲೇಜಿನ ಶೈಕ್ಷಣಿಕ ಮುಖ್ಯಸ್ಥರಾದ ಡಾ.ಎ.ಎಂ.ಶಿವಣ್ಣನವರು ಮತ್ತು ಪ್ರಾಂಶುಪಾಲರಾದ ಶ್ರೀಮತಿ ವೀಣಾ ಡಿ ರವರು ಅಭಿನಂದನೆ ಸಲ್ಲಿಸಿರುತ್ತಾರೆ.






## ಫಸಲ್ ಬಿಮಾ ಯೋಜನೆ ಅನುಷ್ಠಾನ

**ಚಾಮರಾಜನಗರ:** ಕೃಷಿ ಇಲಾಖೆಯಿಂದ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು 2024-25ರ ಸಾಲಿನ ಮುಂಗಾರು ಹಂಗಾಮಿನ ವಿವಿಧ ಬೆಳೆಗಳಿಗೆ ಹೋಬಳಿ ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ಯೋಜನೆಯಡಿ ಹೋಬಳಿ ಮಟ್ಟದಲ್ಲಿ ಮುಂಗಾರು ಹಂಗಾಮಿನ ನೀರಾವರಿ ಆಶ್ರಯದಲ್ಲಿ ಭತ್ತ, ಮುಸುಕಿನ ಜೋಳ, ರಾಗಿ, ಈರುಳ್ಳಿ, ಟೊಮ್ಯಾಟೋ, ಅರಿಶಿಣ, ಆಲೂಗೆಡ್ಡೆ, ಜೋಳ, ಸೂರ್ಯಕಾಂತಿ, ಸಜ್ಜೆ ಹಾಗೂ ಮಳೆ ಆಶ್ರಯದಲ್ಲಿ ಜೋಳ, ರಾಗಿ, ಉದ್ದು, ಸೂರ್ಯಕಾಂತಿ ಮುಸುಕಿನಜೋಳ, ತೊಗರಿ, ನೆಲಗಡಲೆ (ಶೇಂಗಾ), ಹೆಸರು, ಎಳ್ಳು, ಅಲಸಂದೆ, ಹುರುಳಿ, ಹತ್ತಿ, ಸಜ್ಜೆ ಬೆಳೆಗಳನ್ನು ಬೆಳೆವಿಮೆಗೆ ಒಳಪಡಿಸಿದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮುಂಗಾರು ಹಂಗಾಮಿಗೆ ಚಾಮರಾಜನಗರ ತಾಲೂಕು (ಮಳೆ ಆಶ್ರಿತ) ಮುಸುಕಿನ ಜೋಳ, ಗುಂಡ್ಲುಪೇಟೆ ತಾಲೂಕು (ಮಳೆ ಆಶ್ರಿತ) ಜೋಳ, ಸೂರ್ಯಕಾಂತಿ, ಕೊಳ್ಳೇಗಾಲ ಹಾಗೂ ಹನೂರು ತಾಲೂಕು (ಮಳೆ ಆಶ್ರಿತ) ರಾಗಿ, ಮುಸುಕಿನಜೋಳ ಮತ್ತು ಯಳಂದೂರು ತಾಲೂಕಿಗೆ (ನೀರಾವರಿ) ಭತ್ತ ಬೆಳೆಗಳನ್ನು ಬೆಳೆ ವಿಮೆಗೆ ಒಳಪಡಿಸಲಾಗಿದೆ.

ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಖಾತೆ, ಪಾಸ್ ಪುಸ್ತಕ, ಕಂದಾಯ ರಶೀದಿಯನ್ನು ನೀಡಬೇಕು.

ಉದ್ದು (ಮಳೆ ಆಶ್ರಿತ), ಹೆಸರು, ಎಳ್ಳು, ಜೋಳ, ಸೂರ್ಯಕಾಂತಿ ಹಾಗೂ (ನೀರಾವರಿ ಆಶ್ರಿತ) ಈರುಳ್ಳಿ ಜೋಳ ಸೂರ್ಯಕಾಂತಿ ಬೆಳೆಗಳಿಗೆ ಬೆಳೆ ವಿಮೆ ನೋಂದಣಿ ಮಾಡಲು ಹಾಗೂ ವಿಮಾ ಕಂತು ಪಾವತಿಸಲು ಜುಲೈ 1 ಕೊನೆಯ ದಿನವಾಗಿದೆ. ಉದ್ದು (ಮಳೆ ಆಶ್ರಿತ) ಬೆಳೆಗೆ ಎಕರೆಗೆ 133 ರೂ. ವಿಮಾ ಕಂತು ಪಾವತಿಸಬೇಕು. (ಮಳೆ ಆಶ್ರಿತ) ಹೆಸರು 135 ರೂ., (ನೀರಾವರಿ ಆಶ್ರಿತ) ಈರುಳ್ಳಿ 1629 ರೂ., (ಮಳೆ ಆಶ್ರಿತ) ಎಳ್ಳು 116 ರೂ., (ನೀರಾವರಿ ಆಶ್ರಿತ) ಜೋಳ 183 ರೂ., (ಮಳೆ ಆಶ್ರಿತ) ಜೋಳ 155 ರೂ., (ನೀರಾವರಿ ಆಶ್ರಿತ) ಸೂರ್ಯಕಾಂತಿ 395 ರೂ. ಹಾಗೂ (ಮಳೆ ಆಶ್ರಿತ) ಸೂರ್ಯಕಾಂತಿ ಬೆಳೆಗೆ 165 ರೂ. ವಿಮಾ ಕಂತು ನಿಗದಿಪಡಿಸಲಾಗಿದೆ.

ಅಲಸಂದೆ (ಮಳೆ ಆಶ್ರಿತ), ನೆಲಗಡಲೆ (ಶೇಂಗಾ), ಮುಸುಕಿನ ಜೋಳ, ಸಜ್ಜೆ ಹಾಗೂ (ನೀರಾವರಿ ಆಶ್ರಿತ) ಮುಸುಕಿನ ಜೋಳ, ಸಜ್ಜೆ, ಟೊಮ್ಯಾಟೊ ಬೆಳೆ ವಿಮೆ ನೋಂದಣಿ ಹಾಗೂ ವಿಮಾ ಕಂತು ಪಾವತಿಸಲು ಜುಲೈ 15 ಕೊನೆಯ ದಿನವಾಗಿದೆ.

ಅಲಸಂದೆ (ಮಳೆ ಆಶ್ರಿತ) ಬೆಳೆಗೆ ಪ್ರತಿ ಎಕರೆಗೆ 121 ರೂ. ವಿಮಾ ಕಂತು, ನೆಲಗಡಲೆ ಶೇಂಗಾ (ಮಳೆ ಆಶ್ರಿತ) 221 ರೂ., ಮುಸುಕಿನ ಜೋಳ (ನೀರಾವರಿ ಆಶ್ರಿತ) 261 ರೂ., ಮುಸುಕಿನ ಜೋಳ (ಮಳೆ ಆಶ್ರಿತ) 229 ರೂ., ಸಜ್ಜೆ (ನೀರಾವರಿ ಆಶ್ರಿತ) 159 ರೂ., ಸಜ್ಜೆ (ಮಳೆಯಾಶ್ರಿತ) 127 ರೂ., ಆಲೂಗಡ್ಡೆ (ನೀರಾವರಿ ಆಶ್ರಿತ) 3005 ರೂ. ಹಾಗೂ ಟೊಮ್ಯಾಟೊ ಬೆಳೆಗೆ 2863 ರೂ. ವಿಮಾ ಕಂತು ನಿಗದಿಪಡಿಸಿದೆ. ಹತ್ತಿ, ಹುರುಳಿ, ತೊಗರಿ, ರಾಗಿ (ಮಳೆ ಆಶ್ರಿತ) ಹಾಗೂ ಭತ್ತ, ರಾಗಿ (ನೀರಾವರಿ ಆಶ್ರಿತ) ಹಾಗೂ ಅರಿಶಿಣ ಬೆಳೆ ವಿಮೆ ನೊಂದಣಿ ಹಗೂ ವಿಮಾ ಕಂತು ಪಾವತಿಸಲು ಜುಲೈ 31 ಕೊನೆಯ ದಿನವಾಗಿದೆ.

ಹತ್ತಿ (ಮಳೆ ಆಶ್ರಿತ) ಪ್ರತಿ ಎಕರೆ 1007 ರೂ. ವಿಮಾ ಕಂತು, ಹುರುಳಿ (ಮಳೆ ಆಶ್ರಿತ) 83 ರೂ., ಭತ್ತ (ನೀರಾವರಿ ಆಶ್ರಿತ) 377 ರೂ., ತೊಗರಿ (ಮಳೆ ಆಶ್ರಿತ) 194 ರೂ., ರಾಗಿ (ನೀರಾವರಿ ಆಶ್ರಿತ) 205 ರೂ., ರಾಗಿ (ಮಳೆ ಆಶ್ರಿತ) 172 ರೂ. ಹಾಗೂ ಅರಿಶಿಣ ಬೆಳೆಗೆ 2878 ರೂ. ವಿಮಾ ಕಂತು ನಿಗದಿಪಡಿಸಲಾಗಿದೆ. ಬೆಳೆ ವಿಮೆ ನೊಂದಣಿಗೆ ರೈತರ ಗುರುತಿನ ಚೀಟಿ ಸಂಖ್ಯೆ (ಎಫ್.ಐ.ಡಿ) ಕಡ್ಡಾಯವಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ವ್ಯಾಪ್ತಿಗೆ ಒಳಪಡುವ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಬ್ಯಾಂಕುಗಳನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕರಾದ ಎಸ್.ಎಸ್. ಆಬೀದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಕ್ಷಿಣ ಶಿಕ್ಷಕರ ಕ್ಷೇತ್ರ ಚುನಾವಣೆ ಜಿಲ್ಲೆಯಲ್ಲಿ ಶೇ. 92ರಷ್ಟು ಮತದಾನ

**ಚಾಮರಾಜನಗರ:** ಕರ್ನಾಟಕ ವಿಧಾನಪರಿಷತ್ತಿನ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಮತದಾನ ನಡೆದಿದ್ದು, ಚಾಮರಾಜನಗರ ಜಿಲ್ಲೆಗೆ ಸಂಬಂಧಿಸಿದಂತೆ ಶೇ. 92ರಷ್ಟು ಮತದಾನವಾಗಿದೆ.



ತಾಲೂಕುವಾರು ಮತದಾನದ ವಿವರ : ಗುಂಡ್ಲುಪೇಟೆ ಶೇ. 93 ರಷ್ಟು, ಚಾಮರಾಜನಗರ ಶೇ. 94, ಯಳಂದೂರು ಶೇ. 90, ಕೊಳ್ಳೇಗಾಲ ಶೇ. 91 ಹಾಗೂ ಹನೂರು ತಾಲೂಕಿನಲ್ಲಿ ಶೇ. 91ರಷ್ಟು ಮತದಾನವಾಗಿದ್ದು, ಜಿಲ್ಲೆಯಲ್ಲಿ ಒಟ್ಟಾರೆ ಶೇ. 92ರಷ್ಟು ಮತದಾನವಾಗಿದೆ.

ಗುಂಡ್ಲುಪೇಟೆ ತಾಲೂಕಿನಲ್ಲಿ 306 ಪುರುಷರು, 97 ಮಹಿಳೆಯರು ಸೇರಿದಂತೆ ಒಟ್ಟು 403 ಮತದಾರರು, ಚಾಮರಾಜನಗರ 384 ಪುರುಷರು, 219 ಮಹಿಳೆಯರು ಸೇರಿದಂತೆ ಒಟ್ಟು 603 ಮತದಾರರು, ಯಳಂದೂರು 148 ಪುರುಷರು, 54 ಮಹಿಳೆಯರು ಸೇರಿದಂತೆ ಒಟ್ಟು 202 ಮತದಾರರು, ಕೊಳ್ಳೇಗಾಲ 417 ಪುರುಷರು, 307 ಮಹಿಳೆಯರು ಸೇರಿದಂತೆ ಒಟ್ಟು 724 ಮತದಾರರು ಹಾಗೂ ಹನೂರು ತಾಲೂಕಿನಲ್ಲಿ 193 ಪುರುಷರು, 56 ಮಹಿಳೆಯರು ಸೇರಿದಂತೆ ಒಟ್ಟು 249 ಮತದಾರರಿದ್ದು, ಜಿಲ್ಲೆಯಲ್ಲಿ ಒಟ್ಟು 1448 ಪುರುಷರು, 733 ಮಹಿಳೆಯರು ಸೇರಿದಂತೆ 2181 ಮತದಾರರಿದ್ದಾರೆ.

ಈ ಪೈಕಿ ಗುಂಡ್ಲುಪೇಟೆ ತಾಲೂಕಿನಲ್ಲಿ 290 ಪುರುಷರು, 86 ಮಹಿಳೆಯರು ಸೇರಿದಂತೆ ಒಟ್ಟು 376 ಮತದಾರರು, ಚಾಮರಾಜನಗರ 367 ಪುರುಷರು, 201 ಮಹಿಳೆಯರು ಸೇರಿದಂತೆ ಒಟ್ಟು 568 ಮತದಾರರು, ಯಳಂದೂರು 134 ಪುರುಷರು, 48 ಮಹಿಳೆಯರು ಸೇರಿದಂತೆ ಒಟ್ಟು 182 ಮತದಾರರು, ಕೊಳ್ಳೇಗಾಲ 379 ಪುರುಷರು, 280 ಮಹಿಳೆಯರು ಸೇರಿದಂತೆ ಒಟ್ಟು 659 ಮತದಾರರು ಹಾಗೂ ಹನೂರು ತಾಲೂಕಿನಲ್ಲಿ 177 ಪುರುಷರು, 50 ಮಹಿಳೆಯರು ಸೇರಿದಂತೆ ಒಟ್ಟು 227 ಮತದಾರರು ಮತ ಚಲಾಯಿಸಿದ್ದು, ಜಿಲ್ಲೆಯಲ್ಲಿ ಒಟ್ಟು 1347 ಪುರುಷರು, 665 ಮಹಿಳೆಯರು ಸೇರಿದಂತೆ 2012 ಮಂದಿ ಮತ ಚಲಾಯಿಸಿದ್ದಾರೆ.

## ಗುರುಕುಲ ಸೇವಾಶ್ರಮದಲ್ಲಿ ಸಾಮೂಹಿಕ ಉಪನಯನ

**ಮೈಸೂರು:** ಕೆಆರ್‌ಎಸ್ ಮುಖ್ಯರಸ್ತೆಯಲ್ಲಿರುವ ಸಪ್ತರ್ಷಿ ಗುರುಕುಲ ವೈದಿಕ ಗುರುಕುಲ ಸೇವಾಶ್ರಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಕೂಡ ಸಾಮೂಹಿಕ ಉಪನಯನ ಕಾರ್ಯಕ್ರಮವನ್ನು ಜೂ.24ರಂದು ಆಯೋಜಿಸಲಾಗಿದೆ. ಉಪನಯನ, ಪಂಚ ಸಂಸ್ಕಾರ, ಪೂರ್ಣಾಹುತಿ, ಮಹಾಮಂಗಳಾರತಿ, ಶಾತ್ತುಮೊರೈ, ತೀರ್ಥ ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ. ಜೂ.23ರಂದು ಭಾನುವಾರ ಸಂಜೆ ಉದಕಶಾಂತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಸಾಮೂಹಿಕ ಉಪನಯನದ ನಂತರ ಅಯೋಧ್ಯೆಯಿಂದ ಶ್ರೀರಾಮ ಮಂದಿರದಿಂದ ತರಿಸಿರುವ ಅಕ್ಷತೆ ಹಾಗೂ ಛಾಯಾಚಿತ್ರವನ್ನು ಭಕ್ತಾದಿಗಳಿಗೆ ವಿತರಿಸಲಾಗುವುದು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಮಠದ ಪೀಠಾಧ್ಯಕ್ಷರಾದ ಶ್ರೀ ಶ್ರೀ ಅಭಿನವ ರಾಮಾನುಜ ಜೀಯರ್ ಅವರು ವಹಿಸಿ, ಆಶೀರ್ವಚಿಸಲಿದ್ದಾರೆ ಮಠದಲ್ಲಿ ಎಲ್ಲಾ ವರ್ಗದ ಮಕ್ಕಳಿಗೆ ಗುರುಕುಲ ಪದ್ಧತಿಯಲ್ಲಿ, ಶಿಕ್ಷಣ, ಸನಾತನ ಸಂಸ್ಕೃತಿ, ಪರಂಪರೆ, ಇತಿಹಾಸ, ವೇದದ್ಯಯನ ಉಚಿತವಾಗಿ ಹೇಳಿಕೊಡಲಾಗುವುದು, ಮಾಹಿತಿಗಾಗಿ 9481319111 ಅಥವಾ ವ್ಯವಸ್ಥಾಪಕರಾದ ರಂಗನಾಥ್ ಮೊಬೈಲ್ 8861573934 ಸಂಪರ್ಕಿಸಬಹುದು.

### 2029ಕ್ಕೆ ಕಾಂಗ್ರೆಸ್ ಸರಕಾರ ಗ್ಯಾರಂಟಿ: ಕೊತ್ತೂರು ಮಂಜುನಾಥ್

## ಬಿಜೆಪಿ ಮತ್ತೆ ಅಧಿಕಾರಕ್ಕೆ

**ಕೋಲಾರ:** 2024 ರ ಲೋಕಸಭಾ ಚುನಾವಣೆ ಬಗ್ಗೆ ವಿವಿಧ ಸಮೀಕ್ಷೆಗಳು ಬಹಿರಂಗಪಡಿಸಿರುವ ಅಂಕಿ ಅಂಶಗಳ ಪ್ರಕಾರ ದೇಶದಲ್ಲಿ ಮತ್ತೆ ಬಿಜೆಪಿ ನೇತೃತ್ವದ ಸರಕಾರವೇ ಹೆಚ್ಚು ಸ್ಥಾನಗಳು ಬರುತ್ತವೆ ಜೊತೆಗೆ ಅವರಿಗೆ ಅಧಿಕಾರ ಸಿಗಲಿದೆ ಮುಂದಿನ 5 ವರ್ಷಗಳ ಲೋಕಸಭಾ ಚುನಾವಣೆಯಲ್ಲಿ ದೇಶದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವುದು ಗ್ಯಾರಂಟಿ ಇದು ಕಾಂಗ್ರೆಸ್ ಪಕ್ಷದ ಟಾರ್ಗೆಟ್ ಎಂದು ಶಾಸಕ ಕೊತ್ತೂರು ಜಿ. ಮಂಜುನಾಥ್ ತಿಳಿಸಿದರು.

ನಗರದಲ್ಲಿ ಸೋಮವಾರ ಆಗ್ನೇಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಮತಯಾಚನೆ ಮಾಡಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿ ಈಗಾಗಲೇ ಎಕ್ಸಿಟ್ ಪೋಲ್ ಸಮೀಕ್ಷೆಪ್ರಕಾರ ಎನ್.ಡಿ.ಎ ಹೆಚ್ಚು



ಸ್ಥಾನಗಳು ಬರುತ್ತಿವೆ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ ನಿಜ ಸುಳ್ಳು ಹೇಳುವ ಅವಶ್ಯಕತೆಯಿಲ್ಲ ನಾನು ಕಾಂಗ್ರೆಸ್ ಶಾಸಕನಾಗಿದ್ದು, ವಾಸ್ತವಾಂಶವನ್ನು ಮರೆಮಾಚಲು ಸಾಧ್ಯವಿಲ್ಲ. ಮೊದಲಿನಿಂದಲೂ ಬಿಜೆಪಿಗೆ ಹೆಚ್ಚು ಸ್ಥಾನಗಳು ಬರುತ್ತವೆ ಎಂದು ಹೇಳಲಾಗುತ್ತಿದೆ. ಅದರಲ್ಲಿ ಅನುಮಾನವಿಲ್ಲ. ಆದರೆ ಕಾಂಗ್ರೆಸ್ ಪಕ್ಷ ಹೆಚ್ಚು ಕೆಲಸ ಮಾಡಿದೆ. ಮುಂದಿನ 5 ವರ್ಷಗಳಲ್ಲಿ ನಡೆಯುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದೇ ಬರುತ್ತದೆ ಅದಕ್ಕಾಗಿ ಈಗಿನಿಂದಲೇ ತಯಾರಿ ನಡೆದಿದೆ ಎಂದರು.

ಕರ್ನಾಟಕ ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಹಾಗೂ ಕಾಂಗ್ರೆಸ್ ಗೆ ಸಮಾನ ಸ್ಥಾನಗಳು ಬರಲಿವೆ. ಕೋಲಾರ ಕ್ಷೇತ್ರದಲ್ಲಿ 29 ಸಾವಿರ ಮತಗಳ ಅಂತರದಿಂದ ಕಾಂಗ್ರೆಸ್ ಅಭ್ಯರ್ಥಿ ಗೌತಮ್ ಗೆಲ್ಲಲಿದ್ದಾರೆ ಎಂದರು. ಮಾಜಿ ಸ್ಪೀಕರ್ ಕೆ.ಆರ್ ರಮೇಶ್ ಕುಮಾರ್ ರವರು ಎಂಎಲ್ಸಿಗಾಗಿ ಲಾಬಿ ನಡೆಸಿಲ್ಲ. ಅವರಿಗಾಗಿ ಎರಡು ಜಿಲ್ಲೆಯ ಶಾಸಕರು ಸೇರಿ ಲಾಬಿ ನಡೆಸಿದೆವು. ಇದು ಪ್ರಯತ್ನ ಮಾತ್ರ, ಮುಂದಿನ ದಿನಗಳಲ್ಲಿ ಅವರಿಗೆ ಒಳ್ಳೆಯ ಸ್ಥಾನಮಾನ ಸಿಗಲೂಬಹುದು. ನಾವು ಪ್ರಯತ್ನ ಮಾಡಿದ್ದೇವೆ ಅಷ್ಟೇ ಒಂದು ತಪ್ಪಿದೆ ಎಂದರೆ ಮುಂದೆ ಒಂದು ಸ್ಥಾನಮಾನ ಸಿಗುತ್ತದೆ ಎಂಬ ನಂಬಿಕೆ ಇದೆ. ಆ ನಂಬಿಕೆ ಹುಸಿ ಆಗುವುದಿಲ್ಲ. ಕೋಲಾರಕ್ಕೆ ಮಂತ್ರಿ ಮಂಡಲ ವಿಸ್ತರಣೆಯಾದಲ್ಲಿ ಕೋಲಾರ ಜಿಲ್ಲೆಗೆ ಸಚಿವ ಸ್ಥಾನ ಸಿಗಲಿದೆ ಎಂದರು.

ಅಭಿವೃದ್ಧಿಗೆ ಒತ್ತು ನೀಡಲಾಗುವುದು: ಮತ ಎಣಿಕೆ ಮುಗಿದ ನಂತರ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುವುದು. ಕೋಲಾರದಲ್ಲಿ ರಸ್ತೆಗಳು ಅಭಿವೃದ್ಧಿಯಾಗಬೇಕಾಗಿದೆ. ರಸ್ತೆಗಳ ಅಭಿವೃದ್ಧಿಗಾಗಿ 40 ಕೋಟಿ ರೂ.ಗಳ ಟೆಂಡರ್ ಪ್ರಕ್ರಿಯೆ ಮುಗಿದಿದೆ. ಜೂ.6 ಕ್ಕೆ ನೀತಿ ಸಂಹಿತೆ ಮುಕ್ತಾಯಗೊಳ್ಳಲಿದೆ. ಅಭಿವೃದ್ಧಿ ಕೆಲಸಗಳನ್ನು ಪ್ರಾರಂಭಿಸಲಾಗುವುದು ಎಂದು ಕೊತ್ತೂರು ಮಂಜುನಾಥ್ ಹೇಳಿದರು.

ಇನ್ನು ಅಭಿವೃದ್ಧಿಯಾಗಬೇಕಾದ ರಸ್ತೆಗಳಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕಾಗುತ್ತದೆ. ಅಧಿಕಾರಿಗಳು ಆ ಕೆಲಸವನ್ನು ಮಾಡುತ್ತಾರೆ. ವರ್ತುಲ ರಸ್ತೆಗೆ ನಾಗಲಾಪುರ ಗೇಟ್ನಿಂದ ಕಾಳಹಸ್ತಿಪುರ ಗೇಟ್ ತನಕ ಈಗಾಗಲೇ ಡಿಪಿಆರ್ ಮುಗಿದಿದೆ. 100 ಕೋಟಿ ರೂ.ಗಳು ಇದಕ್ಕಾಗಿ ಸಿದ್ಧ ಇದೆ. ಕಾಳಹಸ್ತಿಪುರ ಗೇಟಿನಿಂದ ನಾಗಲಾಪುರ ಗೇಟ್ ತನಕ 2ನೇ ರಸ್ತೆಗೆ ಡಿಪಿಆರ್. ಆಗಬೇಕಾಗಿದೆ. ಇದು ಶ್ರೀನಿವಾಸಪುರ ರಸ್ತೆ, ಚಿಕ್ಕಬಳ್ಳಾಪುರ ರಸ್ತೆ ಸೇರಿಕೊಂಡು ವರ್ತುಲ ರಸ್ತೆ ನಿರ್ಮಾಣಗೊಳ್ಳುತ್ತದೆ. ಸರ್ವೇ ಕೆಲಸ ಮುಗಿದಿದೆ. ಜಮೀನು ಸ್ವಾಧೀನ ಕೆಲಸ ಆಗಬೇಕಾಗಿದೆ ಎಂದರು.

ಎಪಿಎಂಸಿಯಲ್ಲಿ ಎರಡು ಬಣಗಳ ಬಗ್ಗೆ ನಡೆಯುತ್ತಿರುವ ಜಗಳಗಳ ಬಗ್ಗೆ ಶಾಸಕರ ಗಮನಕ್ಕೆ ತಂದರು. 2 ಬಣಗಳ ಜಗಳ ಇತ್ಯರ್ಥಪಡಿಸುವ ಜವಾಬ್ದಾರಿ ಶಾಸಕರದ್ದಲ್ಲ, ಅದು ಅಲ್ಲಿನ ಲೋಕಲ್ ಸಮಸ್ಯೆ ರೈತರಿಗೆ ಸಮಸ್ಯೆಯಾಗದಂತೆ ನೋಡಿಕೊಳ್ಳುವುದು, ರೈತರ ಹಿತ ಕಾಪಾಡುವುದು ನಮ್ಮ ಜವಾಬ್ದಾರಿ. ಅಲ್ಲಿ ವರ್ತಕ ಸಮಸ್ಯೆ ಉಂಟಾಗಿದೆ. ಎಪಿಎಂಸಿ ಜಾಗಕ್ಕಾಗಿ ಈಗಾಗಲೇ 2 ಜಾಗಗಳಲ್ಲಿ ಜಮೀನನ್ನು ಗುರ್ತಿಸಲಾಗಿದೆ. ಇದರಲ್ಲಿ ಚಲುವನಹಳ್ಳಿ ಬಳಿ ಇರುವ ಜಾಗವನ್ನು ಗುರ್ತಿಸಲಾಗಿದೆ ಎಂದರು. ಶಿಕ್ಷಕರು ಬುದ್ಧಿವಂತರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇರುವುದರಿಂದ ಶಿಕ್ಷಕರ ಸಮಸ್ಯೆಗಳ ಬಗ್ಗೆ ಧ್ವನಿಯೆತ್ತುವಂತಹ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳಬೇಕು. ಕಾಂಗ್ರೆಸ್ ಸರ್ಕಾರ ಇರುವುದರಿಂದ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿಕೊಂಡರೆ ಶಿಕ್ಷಕರ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಅನುಕೂಲವಾಗುತ್ತವೆಂದು ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ರವರನ್ನು ಶಿಕ್ಷಕರು ಬೆಂಬಲಿಸಿದ್ದಾರೆ ಎಂದರು.

ಬಂಗಾರಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸೀಸಂದ್ರ ಗೋಪಾಲಗೌಡ, ಮುಖಂಡರಾದ ಮೈಲಾಂಡಹಳ್ಳಿ ಮುರಳಿ, ಮಲೇಷಿಯಾ ರಾಜಕುಮಾರ್, ವೈ.ಶಿವಕುಮಾರ್, ಪ್ರಸಾದ್ ಬಾಬು ಮುಂತಾದವರು ಇದ್ದರು.

### ಮತಯಾಚನೆ

**ನಗರದ ತಾಲೂಕು ಕಚೇರಿ ಸಮೀಪ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಬಿ ಎಸ್ ಪಿ ಅಭ್ಯರ್ಥಿ ಡಾ ಹ ರಾ ಮಹೇಶ್ ಮತಯಾಚನೆ ಮಾಡಿದರು ಈ ಸಂದರ್ಭದಲ್ಲಿ ಕೃಷ್ಣಮೂರ್ತಿ ಶಿವಶಂಕರ್, ತಾಲೂಕು ಪಂಚಾಯಿತಿ ಸಮೀಪ ದಕ್ಷಿಣ ಶಿಕ್ಷಕರ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಕೆ ವಿವೇಕಾನಂದ ಪರ ಬಿಜೆಪಿ ಮುಖಂಡ ಭೀಮೇಶ್ ಮತಯಾಚನೆ ಮಾಡಿದರು ಈ ಸಂದರ್ಭದಲ್ಲಿ ಶಿವಕುಮಾರ್ ಆರಾಧ್ಯ ಇದ್ದರು.**

## ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ರಕ್ಷಣಾ ಅಭಿಯಾನ

**ಕೋಲಾರ:** "Let us act on our Commitments: End Child Labour" ಎಂಬ ಅಂತರಾಷ್ಟ್ರೀಯ ಬಾಲಕಾರ್ಮಿಕ ನಿರ್ಮೂಲನಾ ದಿನದ ಆಪ್ತ ವಾಕ್ಯವನ್ನು ಧ್ಯೇಯವಾಗಿಟ್ಟುಕೊಂಡು ಕೋಲಾರ ಕಾರ್ಮಿಕ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಇವರ ಸಂಯುಕ್ತಾಶ್ರಯದಲ್ಲಿ ಈ ದಿನ ಅಲ್-ಅಮೀನ್ ಅಂಜುಮಾನ್ ಪ್ರೌಢಶಾಲೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ರಕ್ಷಣಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಪ್ರಸ್ತುತ ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಗೌರವಾನ್ವಿತ ಸದಸ್ಯ ಕಾರ್ಯದರ್ಶಿಗಳಾದ ಶ್ರೀಯುತ ಸುನಿಲ್ ಎಸ್ ಹೊಸಮನಿ, ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಶಬಾನ ಅಜ್ಮಿ, ಬಚ್‌ಪನ್ ಬಚಾವೋ ಆಂದೋಲನದ ರಾಜ್ಯ ಸಮನ್ವಯಾಧಿಕಾರಿಗಳು ಉಪಸ್ಥಿತರಿದ್ದು ಶಾಲಾ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿರ್ಮೂಲನೆಯ ಹಾಗೂ ಪ್ರತಿಯೊಬ್ಬ ಮಕ್ಕಳು ಶಾಲಾ ವಿದ್ಯಾಬ್ಯಾಸವನ್ನು ಮಾಡುವ ಅಗತ್ಯತೆಯ ಬಗ್ಗೆ ಮನವರಿಕೆ ಮಾಡಿದರು. ಈ ದಿನದ ಕಾರ್ಯಕ್ರಮದಲ್ಲಿ ಎಲ್ಲಾ ವಿದ್ಯಾರ್ಥಿಗಳು ಹಾಗೂ ಇಲಾಖಾ ಅಧಿಕಾರಿಗಳು ಜೊತೆ ಸೇರಿ ಸಾರ್ವಜನಿಕರೊಡನೆ ಅರಿವನ್ನು ಮೂಡಿಸುವ ಸಲುವಾಗಿ ಜಾಥಾ ಕಾರ್ಯಕ್ರಮವನ್ನು ಹಮ್ಮಿ ಕೊಳ್ಳಲಾಯಿತು.

## ವಿದ್ಯಾರ್ಥಿ ಬಸ್ ಪಾಸುಗಳ ವಿತರಣೆ

**ಕೋಲಾರ:** ಕ.ರಾ.ರ.ಸಾ.ನಿಗಮದ ವತಿಯಿಂದ ಪ್ರಸಕ್ತ ಸಾಲಿಗೆ ಶಾಲಾ, ಕಾಲೇಜು ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಮೇ 30, ರಿಂದ ಸೇವಾಸಿಂಧು ಆನ್‌ಲೈನ್ ಮುಖಾಂತರ ಸೇವಾಸಿಂಧು ಪೋರ್ಟಲ್ ಐಡಿ URL-sevasindhu.karnataka.gov.in ಮುಖಾಂತರ ಅರ್ಜಿಗಳನ್ನು ಸಲ್ಲಿಸಿ, ಜೂನ್ 01 ರಿಂದ ಕರ್ನಾಟಕ-01 ಕೇಂದ್ರಗಳಿಗೆ ಹಾಜರಾಗಿ ಸೂಚಿತ ದಾಖಲೆಗಳನ್ನು ಸಲ್ಲಿಸಿ ಹಾಗೂ ನಿಗದಿಪಡಿಸಿದ ಮೊತ್ತ ಪಾವತಿಸಿ ಪಾಸುಗಳನ್ನು ಪಡೆಯಬಹುದೆಂದು ಕ.ರಾ.ರಸಾ.ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾನೂನು ಪದವಿಗೆ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** ಶೈಕ್ಷಣಿಕ ಸಾಲಿಗೆ ಪ್ರವೇಶಾತಿ ಕುರಿತಂತೆ ಪ್ರಥಮ ವರ್ಷದ ಬಿ.ಎ.,ಎಲ್.ಎಲ್.ಬಿ (5 ವರ್ಷಗಳ) ಕಾನೂನು ಪದವಿಗೆ ಪ್ರವೇಶಾತಿಗಾಗಿ ಕಾಲೇಜಿನ ಕಛೇರಿ ಮೂಲಕ ನೇರವಾಗಿ ಉಚಿತ ಅರ್ಜಿಗಳನ್ನು ಪಡೆದು ಜೂನ್ 20 ರೊಳಗೆ ಅರ್ಜಿ ಸಲ್ಲಿಸಬಹುದು. ಸ್ವೀಕೃತವಾದ ಅರ್ಜಿಗಳ ಮೇರೆಗೆ ವಿಶ್ವವಿದ್ಯಾಲಯವು ವಿದ್ಯಾರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ. ಯಾವುದೇ ಡೊನೇಷನ್ ಇಲ್ಲದೆ ಸರ್ಕಾರಿ ಶುಲ್ಕ ಮಾತ್ರ ಇರುತ್ತದೆಂದೆ ಸರ್ಕಾರಿ ಕಾನೂನು ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹನುಮ ಜಯಂತಿ ಅಲಂಕಾರ

**ತಿಪಟೂರು :** ನಗರದ ವ್ಯಾಸರಾಜ ಪ್ರತಿಷ್ಠಾಪಿತ ಕೋಟೆ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಶನಿವಾರ ಹನುಮ ಜಯಂತಿ ಪ್ರಯುಕ್ತ ವಿಶೇಷ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿತ್ತು ಬೆಳಗ್ಗೆ ಸ್ವಾಮಿಯವರಿಗೆ ಪಂಚಾಮೃತ ಅಭಿಷೇಕ ಮತ್ತು ಪವಮಾನ ಸೂಕ್ತ ಪಾರಾಯಣ ನೆರವೇರಿತು.ವ್ಯಾಸರಾಜ ಪ್ರತಿಷ್ಠಾಪಿತ ಕೋಟೆ ಆಂಜನೇಯ ಸ್ವಾಮಿಯವರಿಗೆ ವಿಶೇಷ ಅಲಂಕಾರವನ್ನು ಮಾಡಲಾಗಿತ್ತು. ನಂತರ ಮಹಾಮಂಗಳಾರತಿ ಪ್ರಸಾದ ವಿನಿಯೋಗವನ್ನು ಮಾಡಲಾಯಿತು. ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾದಿಗಳ ಆಗಮಿಸಿ ಆಂಜನೇಯ ಸ್ವಾಮಿಯ ಕೃಪೆಗೆ ಪಾತ್ರರಾದರು.



## ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಬಹುತೇಕ ಶಾಂತಿಯುತ

**ಕೋಲಾರ:** ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಜಿಲ್ಲೆಯಾದ್ಯಂತ ಉತ್ತಮ ಪ್ರತಿಕ್ರಿಯೆ ದೊರೆತೆದ್ದು ಶೇಕಡಾ 95.52 ರಷ್ಟು ಮತದಾನವಾಗಿದೆ. ಬೆಳಿಗ್ಗೆಯಿಂದಲೇ ಶಿಕ್ಷಕ ಮತದಾರರು ಉತ್ಸುಕವಾಗಿ ಮತಚಲಾಯಿಸಲು ಚುನಾವಣಾಕೇಂದ್ರದ ಮುಂದೆ ಸರತಿಸಾಲಿನಲ್ಲಿ ನಿಂತಿದ್ದರು ಸಕಲ ಸಿದ್ಧತೆಗಳನ್ನು ಚುನಾವಣಾ ಸಮಿತಿ ಅಚ್ಚುಕಟ್ಟಾಗಿ ಸಿದ್ದಮಾಡಿದ್ದರು. ಮತದಾರರ ಮನವೊಲಿಸಲು ಬಿಜೆಪಿ ಜೆ ಡಿ ಎಸ್ ಕಾಂಗ್ರೆಸ್ ಸ್ವತಂತ್ರ್ಯ ಅಭ್ಯರ್ಥಿಗಳ ಬೆಂಬಲಿಗರು ಶ್ರಮಪಡುತ್ತಿರುವುದು ಕಂಡುಬಂತು ಪೊಲೀಸ್ ಇಲಾಖೆ ಸೂಕ್ತ ಬಂದೋಬಸ್ತ್ ನೀಡಿತ್ತು

ಕಣದಲ್ಲಿ ಬಿಜೆಪಿ ,ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ವೈ ಎ ನಾರಾಯಣಸ್ವಾಮಿ ಕಾಂಗ್ರೆಸ್ ಪಕ್ಷದಿಂದ ಡಿ ಟಿ ಶ್ರೀನಿವಾಸ್ ಸ್ವಾತಂತ್ರ್ಯ ಅಭ್ಯರ್ಥಿಯಾಗಿ ವಿನೋದ್ ಶಿವರಾಜ್ ಕಣದಲ್ಲಿದ್ದಾರೆ

ಬಹುತೇಕ ನೇರ ಹಣಾಹಣಿ ಎನ್ ಡಿ ಎ ಮತ್ತು ಕಾಂಗ್ರೆಸ್ ನಡುವೆ ಕಂಡುಬಂತು ಪಲಿತಾಂಶ ಏನಾಗುವುದೋ ಕಾದುನೋಡಬೇಕಷ್ಟೇ. ಬಿ ಜೆ ಪಿ ಮತ್ತು ಜೆಡಿಎಸ್ ಕಡೆಯಿಂದ ಎಂ ಪಿ ಮುನಿಸ್ವಾಮಿ ಸಿ ಎಂ ಆರ್ ಶ್ರೀನಾಥ್ ,ಚೌಡರೆಡ್ಡಿ ,ಬಣಕನಹಳ್ಳಿ ನಟರಾಜ್ ,ವಡಗೂರು ರಾಮು ,ಮಾಗೇರಿನಾರಾಯಣಸ್ವಾಮಿ ,ರಾಜೇಶ್ ಸಿಂಗ್ ,ವಿಜಯಕುಮಾರ್ ,ರಾಮಚಂದ್ರೇಗೌಡ ಮುಂತಾದವರಿದ್ದರು . ಕಾಂಗ್ರೆಸ್ ಪಕ್ಷದ ಕಡೆಯಿಂದ ಎಂ ಎಲ್ ಎ ಕೊತ್ತೂರ್ ಮಂಜುನಾಥ್ ,ಎಂ ಎಲ್ ಸಿ ಅನಿಲ್ ,ಮುರಳಿ ,ಮನೋಹರ್ ,ಸೋಮು ಮುಂತಾದವರಿದ್ದರು.

## ಬೇವೂರು ಆದಿ ಉಡಸಲಮ್ಮ ಪರ ಅದ್ದೂರಿ

**ಚನ್ನಪಟ್ಟಣ:** ತಾಲೂಕಿನ ಬೇವೂರು ಗ್ರಾಮದ ಶಕ್ತಿ ದೇವತೆ ಶ್ರೀ ಆದಿ ಉಡಸಲಮ್ಮ ದೇವಿಯ ನೂತನ ದೇವಸ್ಥಾನದ ನಿರ್ಮಾಣಕ್ಕೆ ಚಾಲನೆ ನೀಡುವ ಪ್ರಯುಕ್ತ ಭಾನುವಾರ ಆಯೋಜಿಸಿದ್ದ ಪರದಲ್ಲಿ 20 ಸಾವಿರಕ್ಕೂ ಹೆಚ್ಚು ಭಕ್ತರು ಭಾಗವಹಿಸಿ ಪ್ರಸಾದ ಸ್ವೀಕಾರ ಮಾಡುವ ಮೂಲಕ ಪರವನ್ನು ಯಶಸ್ವಿಗೊಳಿಸಿದರು. ಇದೇ ವೇಳೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಸಿ.ಪಿ.ಯೋಗೇಶ್ವರ್ ಅವರು ದೇವಸ್ಥಾನದ ನಿರ್ಮಾಣದ ಕಾಮಗಾರಿಗೆ 25 ಲಕ್ಷ ರೂ. ಎಂಎಲ್‌ಸಿ ಅನುದಾನದಲ್ಲಿ ಹಾಗೂ ವಯಕ್ತಿಕವಾಗಿ 5 ಲಕ್ಷ ರೂ. ಸಹಾಯ ನೀಡುವುದಾಗಿ ಸಭೆಯಲ್ಲಿ ಘೋಷಣೆ ಮಾಡಿದರು. 500 ವರ್ಷಗಳ ಇತಿಹಾಸ ಇರುವ ಶ್ರೀ ಆದಿಉಡಸಲಮ್ಮ ದೇವಸ್ಥಾನದ ನೂತನ ಕಟ್ಟಡ ನಿರ್ಮಾಣದ ಕಾಂಗಾರಿಗೆ ಚಾಲನೆ ನೀಡಲು ಆಯೋಜಿಸಿದ್ದ ಪರಕ್ಕೆ ಬೆಳಿಗ್ಗೆ 11 ಗಂಟೆಯಿಂದ ಸಂಜೆ 6 ಗಂಟೆವರೆಗೆ ಅನ್ನಸಂತರ್ಪಣೆ ಮಾಡಲಾಯಿತು. ಈ ವೇಳೆ ಭಕ್ತರು ಸಾಗರದಂತೆ ಹರಿದು ಬಂದು ಪ್ರಸಾದ ಸ್ವೀಕಾರ ಮಾಡಿ ದೇವರ ಕೃಪೆಗೆ ಪಾತ್ರರಾಗುವ ಜೊತೆಗೆ ದೇವಸ್ಥಾನದ ನಿರ್ಮಾಣಕ್ಕೆ ಆರ್ಥಿಕ ಸಹಕಾರ ನೀಡಿದರು.



ಪರದಲ್ಲಿ ರಾಜಕೀಯ ಮುಖಂಡರು ಪಕ್ಷಾತೀತವಾಗಿ ಭಾಗವಹಿಸಿದ್ದರು. ಅಲ್ಲದೆ ಈ ಮಾರ್ಗದ ವಾಹನ ಸಂಚಾರವನ್ನು ಬದಲಾವಣೆ ಮಾಡಿ ಗುಡ್ಡೆತಿಮ್ಮಸಂದ್ರ ಮೂಲಕ ಬೈರಾಪಟ್ಟಣ ಕೆಸ್ತೂರು ಮಾರ್ಗದಲ್ಲಿ ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಡಲಾಗಿತ್ತು. ಪರದಲ್ಲಿ ಗ್ರಾಮದ ಯುವಕರು ಸ್ವಯಂ ಸೇವಕರಾಗಿ ಸೇವೆ ಮಾಡಿ ಭಕ್ತರಿಗೆ ಪ್ರಸಾದ ವಿತರಣೆ ಮಾಡುವಲ್ಲಿ ಶ್ರಮಿಸಿದರು.

## ವಿದ್ಯಾರ್ಥಿಗಳಿಂದ ಉನ್ನತ ಶಿಕ್ಷಣಕ್ಕಾಗಿ ಧನಸಹಾಯ ಪಡೆಯಲು ಅರ್ಜಿ

**ಚಿಕ್ಕಬಳ್ಳಾಪುರ:** ಗೌರಿಬಿದನೂರು ನಗರಸಭಾ ವ್ಯಾಪ್ತಿಯಲ್ಲಿ ವಾಸವಾಗಿರುವ ಬಡತನ ರೇಖೆಗಿಂತ ಕೆಳಮಟ್ಟದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ಬಡಜನರ ಹಾಗೂ ವಿಶೇಷ ಚೇತನರಿಗೆ 2023-24ನೇ ಸಾಲಿನ ಎಸ್.ಎಫ್.ಸಿ ಅನುದಾನದಲ್ಲಿ ಪೌರಕಾರ್ಮಿಕರ ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯರ್ಥಿಗಳಿಗೆ ತಾಂತ್ರಿಕ ಶಿಕ್ಷಣಕ್ಕೆ ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಧನಸಹಾಯ ಹಾಗೂ ವಿಶೇಷ ಚೇತನರಿಗೆ ತ್ರಿಚಕ್ರ, ವಾಹನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ನಗರಸಭೆ ಕಚೇರಿಯಿಂದ ಅರ್ಜಿ ಪಡೆದು ಭರ್ತಿ ಮಾಡಿ ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿ ಜೂನ್ 15 ರೊಳಗೆ ಸಲ್ಲಿಸಬೇಕು. ತಡವಾಗಿ ಬಂದ ಹಾಗೂ ಅಪೂರ್ಣವಾದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಅಗತ್ಯ ದಾಖಲೆಗಳು: ವ್ಯಾಸಂಗ ದೃಢೀಕರಣ ಪತ್ರ, (ಮೂಲ ಪ್ರತಿ) ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಡಿತರ ಚೀಟಿ, ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ಬ್ಯಾಂಕ್ ಖಾತೆಯ ಜೆರಾಕ್ಸ್ ಪ್ರತಿ, ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರ, ಅಂಕಪಟ್ಟಿಗಳು, ವಿಶೇಷ ಚೇತನರು ಅಂಗವಿಕಲತೆಯ ದೃಢೀಕರಣ ಪತ್ರ, ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಗೌರಿಬಿದನೂರ ನಗರಸಭೆ ಕಚೇರಿಯ ಶೇ.24.10 ಹಾಗೂ ಶೇ.5ರ ಯೋಜನೆಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದೆಂದು ಗೌರಿಬಿದನೂರ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉತ್ತಮ ಗುಣಮಟ್ಟದ ತೋಟಗಾರಿಕೆ ಬೆಳೆಗಳ ಕಸಿ, ಸಸಿಗಳ ಮಾರಾಟ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ, ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ಕೈಗೊಳ್ಳಲು ಇಚ್ಚಿಸುವ ರೈತರು ತೋಟಗಾರಿಕೆ ಇಲಾಖೆಯ ಕ್ಷೇತ್ರ/ನರ್ಸರಿಗಳಲ್ಲಿ ಲಭ್ಯವಿರುವ ಉತ್ತಮ ಗುಣಮಟ್ಟದ ತೆಂಗು ಸಸಿ, ಮಾವು ಕಸಿ, ನೇರಳೆ ಕಸಿ, ಗೋಡಂಬಿ ಕಸಿ, ಬೆಟ್ಟದ ನೆಲ್ಲಿ ಕಸಿ, ಹಲಸು ಕಸಿ, ನಿಂಬೆ ಸಸಿ, ನುಗ್ಗೆ ಸಸಿ, ಕರಿಬೇವು ಸಸಿ ಹಾಗೂ ಇತ್ಯಾದಿ ಕಸಿ/ಸಸಿಗಳನ್ನು ಇಲಾಖಾ ನಿಗಧಿತ ದರಗಳಲ್ಲಿ ಖರೀದಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಂಜನ್ ಕುಮಾರ್. ಜಿ.ಎ 9900940888, ರವಿಕುಮಾರ್.ಜೆ.ಎನ್ 9110447499, ಮುನಿರಾಜು 9880581528, ಮುನಿಯಪ್ಪ 9880440084, ಅಮರೇಶ್ 9902460617 ರವರನ್ನು ಸಂಪರ್ಕಿಸಬಹುದೆಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ

## ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಶೇ. 96.91 ಮತದಾನ

**ಚಿಕ್ಕಬಳ್ಳಾಪುರ:** ವಿಧಾನ ಪರಿಷತ್ತಿನ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಇಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಶೇಕಡ 96.91 ರಷ್ಟು ಮತದಾನವಾಗಿದೆ.

ಜಿಲ್ಲೆಯಲ್ಲಿ ಒಟ್ಟು 10 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಗೌರಿಬಿದನೂರು, ಮಂಚೇನಹಳ್ಳಿ, ಬಾಗೇಪಲ್ಲಿ, ಚೇಳೂರು, ಗುಡಿಬಂಡೆ, ಶಿಡ್ಲಘಟ್ಟ ತಾಲ್ಲೂಕಿನಲ್ಲಿ ತಲಾ ಒಂದು ಮತಗಟ್ಟೆ ಹಾಗೂ ಚಿಕ್ಕಬಳ್ಳಾಪುರ, ಚಿಂತಾಮಣಿ ತಾಲ್ಲೂಕಿನಲ್ಲಿ ತಲಾ ಎರಡು ಮತಗಟ್ಟೆಗಳನ್ನು ಸ್ಥಾಪಿಸಲಾಗಿತ್ತು.

ಗೌರಿಬಿದನೂರು ಮತಗಟ್ಟೆಯಲ್ಲಿ ಶೇ.97.41, ಮಂಚೇನಹಳ್ಳಿ ಮತಗಟ್ಟೆಯಲ್ಲಿ ಶೇ. 98.65, ಬಾಗೇಪಲ್ಲಿ ಮತಗಟ್ಟೆಯಲ್ಲಿ ಶೇ. 96.01, ಚೇಳೂರು ಮತಗಟ್ಟೆಯಲ್ಲಿ ಶೇ. 98.25, ಗುಡಿಬಂಡೆ ಮತಗಟ್ಟೆಯಲ್ಲಿ ಶೇ.98.18, ಶಿಡ್ಲಘಟ್ಟ ಮತಗಟ್ಟೆಯಲ್ಲಿ ಶೇ. 96.69, ಚಿಕ್ಕಬಳ್ಳಾಪುರ ತಾಲ್ಲೂಕಿನ 26ನೇ ಮತಗಟ್ಟೆಯಲ್ಲಿ ಶೇ. 96.96 ಮತ್ತು 26 ಎ ಮತಗಟ್ಟೆಯಲ್ಲಿ 97.14, ಚಿಂತಾಮಣಿ ತಾಲ್ಲೂಕಿನ 28ನೇ ಮತಗಟ್ಟೆಯಲ್ಲಿ ಶೇ. 98.09 ಹಾಗೂ 28 ಎ ಮತಗಟ್ಟೆಯಲ್ಲಿ ಶೇ. 94.89 ರಷ್ಟು ಮತದಾನವಾಗಿದೆ. ಜಿಲ್ಲೆಯಲ್ಲಿ 2,219 ಪುರುಷ ಮತದಾರರು, 1,541 ಮಹಿಳಾ ಮತದಾರರು ಸೇರಿದಂತೆ ಒಟ್ಟು 3,760 ಮತದಾರರಿದ್ದಾರೆ. ಇವರಲ್ಲಿ 2,152 ಪುರುಷ ಮತದಾರರು, 1,492 ಮಹಿಳಾ ಮತದಾರರು ಸೇರಿದಂತೆ ಒಟ್ಟು 3,644 ಮತದಾರರು ತಮ್ಮ ಮತದಾನದ ಹಕ್ಕು ಚಲಾಯಿಸಿದ್ದಾರೆ.

ಗೌರಿಬಿದನೂರು ಮತಗಟ್ಟೆಯಲ್ಲಿ 339 ಪುರುಷ ಮತದಾರರು, 240 ಮಹಿಳಾ ಮತದಾರರು ಸೇರಿದಂತೆ 579 ಮತದಾರರಿದ್ದಾರೆ. ಈ ಪೈಕಿ 331 ಪುರುಷ ಮತದಾರರು, 233 ಮಹಿಳಾ ಮತದಾರರು ಸೇರಿದಂತೆ ಒಟ್ಟು 564 ಮತದಾರರು ಮತದಾನ ಮಾಡಿದ್ದಾರೆ. ಮಂಚೇನಹಳ್ಳಿ ಮತಗಟ್ಟೆಯಲ್ಲಿ 51 ಪುರುಷ ಮತದಾರರು, 23 ಮಹಿಳಾ ಮತದಾರರು ಸೇರಿದಂತೆ 74 ಮತದಾರರಿದ್ದಾರೆ. ಈ ಪೈಕಿ 50 ಪುರುಷ ಮತದಾರರು, 23 ಮಹಿಳಾ ಮತದಾರರು ಸೇರಿದಂತೆ ಒಟ್ಟು 73 ಮತದಾರರು ತಮ್ಮ ಮತದಾನದ ಹಕ್ಕು ಚಲಾಯಿಸಿದ್ದಾರೆ. ಬಾಗೇಪಲ್ಲಿ ಮತಗಟ್ಟೆಯಲ್ಲಿ 257 ಪುರುಷ ಮತದಾರರು, 119 ಮಹಿಳಾ ಮತದಾರರು ಸೇರಿದಂತೆ 376 ಮತದಾರರಿದ್ದಾರೆ. ಈ ಪೈಕಿ 253 ಪುರುಷ ಮತದಾರರು, 108 ಮಹಿಳಾ ಮತದಾರರು ಸೇರಿದಂತೆ ಒಟ್ಟು 361 ಮತದಾರರು ಮತದಾನ ಮಾಡಿದ್ದಾರೆ.

ಚೇಳೂರು ಮತಗಟ್ಟೆಯಲ್ಲಿ 118 ಪುರುಷ ಮತದಾರರು, 53 ಮಹಿಳಾ ಮತದಾರರು ಸೇರಿದಂತೆ 171 ಮತದಾರರಿದ್ದಾರೆ. ಈ ಪೈಕಿ 115 ಪುರುಷ ಮತದಾರರು, 53 ಮಹಿಳಾ ಮತದಾರರು ಸೇರಿದಂತೆ ಒಟ್ಟು 168 ಮತದಾರರು ತಮ್ಮ ಮತದಾನದ ಹಕ್ಕು ಚಲಾಯಿಸಿದ್ದಾರೆ. ಗುಡಿಬಂಡೆ ಮತಗಟ್ಟೆಯಲ್ಲಿ 68 ಪುರುಷ ಮತದಾರರು, 42 ಮಹಿಳಾ ಮತದಾರರು ಸೇರಿದಂತೆ 110 ಮತದಾರರಿದ್ದಾರೆ. ಈ ಪೈಕಿ 67 ಪುರುಷ ಮತದಾರರು, 41 ಮಹಿಳಾ ಮತದಾರರು ಸೇರಿದಂತೆ ಒಟ್ಟು 108 ಮತದಾರರು ಮತದಾನ ಮಾಡಿದ್ದಾರೆ.

ಶಿಡ್ಲಘಟ್ಟ ಮತಗಟ್ಟೆಯಲ್ಲಿ 270 ಪುರುಷ ಮತದಾರರು, 214 ಮಹಿಳಾ ಮತದಾರರು ಸೇರಿದಂತೆ 484 ಮತದಾರರಿದ್ದಾರೆ. ಈ ಪೈಕಿ 259 ಪುರುಷ ಮತದಾರರು, 209 ಮಹಿಳಾ ಮತದಾರರು ಸೇರಿದಂತೆ ಒಟ್ಟು 468 ಮತದಾರರು ಮತದಾನ ಮಾಡಿದ್ದಾರೆ.

ಚಿಕ್ಕಬಳ್ಳಾಪುರ 26ನೇ ಮತಗಟ್ಟೆಯಲ್ಲಿ 254 ಪುರುಷ ಮತದಾರರು, 206 ಮಹಿಳಾ ಮತದಾರರು ಸೇರಿದಂತೆ 460 ಮತದಾರರಿದ್ದಾರೆ. ಈ ಪೈಕಿ 246 ಪುರುಷ ಮತದಾರರು, 200 ಮಹಿಳಾ ಮತದಾರರು ಸೇರಿದಂತೆ ಒಟ್ಟು 446 ಮತದಾರರು ಮತದಾನ ಮಾಡಿದ್ದಾರೆ.

ಚಿಕ್ಕಬಳ್ಳಾಪುರ 26 ಎ ಮತಗಟ್ಟೆಯಲ್ಲಿ 242 ಪುರುಷ ಮತದಾರರು, 212 ಮಹಿಳಾ ಮತದಾರರು ಸೇರಿದಂತೆ 454 ಮತದಾರರಿದ್ದಾರೆ. ಈ ಪೈಕಿ 233 ಪುರುಷ ಮತದಾರರು, 208 ಮಹಿಳಾ ಮತದಾರರು ಸೇರಿದಂತೆ ಒಟ್ಟು 441 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ.

ಚಿಂತಾಮಣಿಯ 28ನೇ ಮತಗಟ್ಟೆಯಲ್ಲಿ 318 ಪುರುಷ ಮತದಾರರು, 206 ಮಹಿಳಾ ಮತದಾರರು ಸೇರಿದಂತೆ 524 ಮತದಾರರಿದ್ದಾರೆ. ಈ ಪೈಕಿ 312 ಪುರುಷ ಮತದಾರರು, 202 ಮಹಿಳಾ ಮತದಾರರು ಸೇರಿದಂತೆ ಒಟ್ಟು 514 ಮತದಾರರು ಮತದಾನ ಮಾಡಿದ್ದಾರೆ. ಚಿಂತಾಮಣಿಯ 28 ಎ ಮತಗಟ್ಟೆಯಲ್ಲಿ 302 ಪುರುಷ ಮತದಾರರು, 226 ಮಹಿಳಾ ಮತದಾರರು ಸೇರಿದಂತೆ 528 ಮತದಾರರಿದ್ದಾರೆ. ಈ ಪೈಕಿ 286 ಪುರುಷ ಮತದಾರರು, 215 ಮಹಿಳಾ ಮತದಾರರು ಸೇರಿದಂತೆ ಒಟ್ಟು 501 ಮತದಾರರು ಮತದಾನ ಮಾಡಿದ್ದಾರೆ.

## ಚಿಕ್ಕಬಿದರೆಯಲ್ಲಿ ತಂಬಾಕು ವಿರೋಧಿ ದಿನಾಚರಣೆ



**ಹುಳಿಯಾರು:** ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಹುಳಿಯಾರು ಹೋಬಳಿಯ ಚಿಕ್ಕಬಿದರೆಯಲ್ಲಿ ಶನಿವಾರ ಆಯೋಜಿಸಲಾಗಿತ್ತು.

ಧರ್ಮಸ್ಥಳ ಯೋಜನೆಯ ಜಿಲ್ಲಾ ನಿರ್ದೇಶಕ ದಿನೇಶ್ ಮಾತಾನಾಡಿ ಯೋಜನೆ ವತಿಯಿಂದ ಅಂತರಾಷ್ಟ್ರೀಯ ತಂಬಾಕು ವಿರೋಧಿ ದಿನಾಚರಣೆ. ಮಧ್ಯವರ್ಜನ ಶಿಬಿರಗಳ ಮೂಲಕ ಮಧ್ಯ ವ್ಯಸನಿಗಳನ್ನು ವ್ಯಸನ ಮುಕ್ತರಾಗಿ ಉತ್ತಮ ಜೀವನವನ್ನು ಕಲ್ಪಿಸಿ ಕೊಡುವ ಕಾರ್ಯಕ್ರಮ. ಶಾಲಾ ಕಾಲೇಜುಗಳಲ್ಲಿ ಹಾಗೂ ಪ್ರೌಢಶಾಲಾ ಮಕ್ಕಳಿಗೆ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮದ ಮೂಲಕ ದುಶ್ಚಟಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಹರಿವು ಮೂಡಿಸುವ ಕಾರ್ಯಕ್ರಮ ನಡೆಸುತ್ತಿರುವುದಾಗಿ ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾದ ಶ್ಯಾಮಸುಂದರ್ ಮಾತನಾಡಿ ಧೂಮಪಾನ ಮತ್ತು ಮದ್ಯಪಾನ ಮಾಡುವುದರಿಂದ ಸುತ್ತಮುತ್ತಲಿನ ಪ್ರದೇಶದಲ್ಲಿ ಹಲವಾರು ವ್ಯಕ್ತಿಗಳ ಮೇಲೆ ದುಷ್ಪರಿಣಾಮ ಬೀರುತ್ತದೆ. ಈ ತಂಬಾಕು ವಿರೋಧಿ ದಿನಾಚರಣೆ ಈ ದಿನಕ್ಕೆ ಸೀಮಿತ ಅಲ್ಲದೆ ಪ್ರತಿ ದಿನ ಇದರ ವಿರುದ್ಧ ಹೋರಾಡಬೇಕು ದುಶ್ಚಟ ಮುಕ್ತ ಸಮಾಜ ನಿರ್ಮಾಣಕ್ಕೆ ನಾವೆಲ್ಲರೂ ಕೈ ಜೋಡಿಸೋಣ ಎಂದು ಮಾಹಿತಿ ನೀಡಿದರು. ಯೋಜನಾಧಿಕಾರಿಗಳಾದ ರಾಮಚಂದ್ರ, ವಲಯದ ಮೇಲ್ವಿಚಾರಕಿ ಉಮಾದೇವಿ, ಒಕ್ಕೂಟದ ಅಧ್ಯಕ್ಷರಾದ ದೇವರಾಜು, ಸೇವಾ ಪ್ರತಿನಿಧಿಗಳಾದ ರತ್ನಮ್ಮ ಹಾಗೂ ಸಲ್ಮಾ ಕೌಸರ್ ಮತ್ತಿತರರು ಉಪಸ್ಥಿರಿದ್ದರು.

ಸಂಜೆ ಟಿಪ್ಸ್

# ಮುಂಬಯಿಯಲ್ಲಿ ಬಹುನಿರೀಕ್ಷಿತ ಮ್ಯಾರಿಯಟ್ ಹೋಟೆಲ್ ಲೋಕಾರ್ಪಣೆ

ಎಂಆರ್ಜಿ ಗ್ರೂಪ್, ತನ್ನ ಗೋಲ್ಡ್ಫಿಂಚ್ ಹೋಟೆಲ್ಸ್ ಮತ್ತು ರೆಸಾರ್ಟ್ ಬ್ರಾಂಡ್ನಿಂದ ಹೆಸರುವಾಸಿಯಾಗಿರುವ- ಬೆಂಗಳೂರು ಮೂಲದ ಆತಿಥ್ಯ ಮತ್ತು ರಿಯಲ್ ಎಸ್ಟೇಟ್ ವಲಯದ ಪ್ರಭಾವಿ ಸಂಸ್ಥೆಯು ನವಿ ಮುಂಬಯಿಯ ಹೃದಯ ಭಾಗದಲ್ಲಿ ನಿರ್ಮಿಸಿರುವ ನವಿಮುಂಬಯಿ ಮ್ಯಾರಿಯಟ್ ಹೋಟೆಲ್ ಲೋಕಾರ್ಪಣೆಯನ್ನು ಹೆಮ್ಮೆಯಿಂದ ಘೋಷಿಸುತ್ತಿದೆ.

ನಮ್ಮ ಹೊಸ ಯೋಜನೆಯಾದ ನವಿ ಮುಂಬಯಿ ಮ್ಯಾರಿಯಟ್ ಹೋಟೆಲ್ ಆರಂಭವನ್ನು ಘೋಷಿಸುತ್ತಿರುವುದು ಎಂಆರ್ಜಿ ಸಮೂಹದ ಅತ್ಯಂತ ಹೆಮ್ಮೆಯ ಕ್ಷಣವಾಗಿದೆ. ಮ್ಯಾರಿಯಟ್ ಹೋಟೆಲ್ಗಳ ಜೊತೆಗೆ ನಮ್ಮ ಗೌರವದ ಸಹಭಾಗಿತ್ವಕ್ಕೆ ಮತ್ತೊಂದು ಅಮೂಲ್ಯ ಸೇರ್ಪಡೆಯಾಗಿದೆ ಎಂದು ಶ್ರೀ ಕೆ.ಪ್ರಕಾಶ್ ಶೆಟ್ಟಿ, ಅಧ್ಯಕ್ಷರು, ಎಂಆರ್ಜಿ ಗ್ರೂಪ್ ಅವರು ಹೇಳಿದ್ದಾರೆ. ??ಮ್ಯಾರಿಯಟ್ ಇಂಟರ್ನ್ಯಾಶನಲ್ ಜತೆಗಿನ ಈ ಸಹಭಾಗಿತ್ವವು ಆತಿಥ್ಯ ಕ್ಷೇತ್ರದಲ್ಲಿ ಶ್ರೇಷ್ಠವಾದುದನ್ನು ನೀಡಬೇಕೆಂಬ ಪರಸ್ಪರರ ಬದ್ಧತೆಯನ್ನು ಪುನರುಚ್ಚರಿಸುವುದರ ಜತೆಗೆ,ಐಷಾರಾಮಿ ಮತ್ತು ನಾವೀನ್ಯತೆಯಲ್ಲಿ ಎಂಆರ್ಜಿ ಸಮೂಹದ ಸ್ಥಳೀಯ ಪರಿಣತಿಯನ್ನು ಮ್ಯಾರಿಯಟ್ನ ಜಾಗತಿಕ ಪ್ರತಿಷ್ಠೆ ಜತೆ ವಿಲೀನಗೊಳಿಸುತ್ತದೆ. ನಾವು ಒಟ್ಟಾಗಿ ಸೌಲಭ್ಯಗಳ ಸಮ್ಮಿಲನ, ಆರಾಮದಾಯಕ ಅನುಭವ, ಅನುಕೂಲತೆಗಳ ಮೂಲಕ ನವಿ ಮುಂಬಯಿಯಲ್ಲಿ ಆತಿಥ್ಯ ಕ್ಷೇತ್ರದ ಮರುವ್ಯಾಖ್ಯಾನಕ್ಕೆ ಸನ್ನದ್ಧರಾಗಿದ್ದೇವೆ. ನಮ್ಮ ಅತಿಥಿಗಳು ಬ್ಯುಸಿನೆಸ್ ಉದ್ದೇಶಕ್ಕೇ ಬಂದಿರಲಿ ಅಥವಾ ವಿಹಾರಕ್ಕಾಗಿ ಬಂದಿರಲಿ, ಅವರಿಗೆ ಅವಿಸ್ಮರಣೀಯ ಅನುಭವ ನೀಡಲು ನಾವು ಬದ್ಧರಾಗಿದ್ದೇವೆ. ಜಗತ್ತಿನ ವಿವಿಧೆಡೆಗಳಿಂದ ಆಗಮಿಸುವ ಪ್ರಯಾಣಿಕರನ್ನು ಸ್ವಾಗತಿಸಲು ಸಜ್ಜಾಗಿದ್ದೇವೆ. ಒಟ್ಟಾಗಿ ಶಾಶ್ವತವಾದ ನೆನಪುಗಳನ್ನು ರಚಿಸಲು ಸಿದ್ಧರಾಗಿದ್ದೇವೆ ಎಂದು ಅವರು ಹೇಳಿದರು.

ಮುಂಬಯಿಯಲ್ಲಿ ನಡೆದ ನವಿ ಮುಂಬಯಿ ಮ್ಯಾರಿಯಟ್ ಹೋಟೆಲ್ ಉದ್ಘಾಟನೆ ಸಮಾರಂಭದಲ್ಲಿ ಕೆ.ಪ್ರಕಾಶ್ ಶೆಟ್ಟಿ, ಅಧ್ಯಕ್ಷರು, ಎಂಆರ್ಜಿ ಗ್ರೂಪ್ ಬೆಂಗಳೂರು, ಸೌರಭ್ ದುಬೆ, ಜನರಲ್ ಮ್ಯಾನೇಜರ್, ನವಿ ಮುಂಬಯಿ ಮ್ಯಾರಿಯಟ್ ಹೋಟೆಲ್, ರಂಜು ಅಲೆಕ್ಸ್, ಏರಿಯಾ ವೈಸ್ಪ್ರೆಸಿಡೆಂಟ್, ದಕ್ಷಿಣ ಏಷ್ಯಾ, ಮ್ಯಾರಿಯಟ್ ಇಂಟರ್ನ್ಯಾಶನಲ್, ನಿಖಿತಾ ರಾಮ್ಚಂದಾನಿ, ಮಲ್ಟಿಪ್ರಾಪರ್ಟಿ ವೈಸ್ ಪ್ರೆಸಿಡೆಂಟ್ ಉಪಸ್ಥಿತರಿದ್ದರು.

# ಕ್ಯಾರೆಟ್ - ಪಾಲಾಕ್ ಸೂಪ್

## ಪಾಕ ಶಾಲೆ



## ಮಾಡುವ ವಿಧಾನ

ಮೊದಲಿಗೆ ಪಾಲಾಕ್ ಹಾಗೂ ಸ್ಪ್ರಿಂಗ್ ಆನಿಯನ್ ಅನ್ನು ಕತ್ತರಿಸಿ ಬೇರೆ ಬೇರೆಯಾಗಿ ಇಟ್ಟುಕೊಳ್ಳಿ. ಹಾಗೇ ಕ್ಯಾರೆಟ್ ಅನ್ನು ತುರಿದಿಟ್ಟುಕೊಳ್ಳಿ. ಒಂದು ಪ್ಯಾನ್ ಗೆ ಹಾಲು, ಕಾರ್ನ್ ಫ್ಲೋರ್, ನೀರು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ಇದಕ್ಕೆ ಸ್ಪ್ರಿಂಗ್ ಆನಿಯನ್, ಪಾಲಾಕ್, ಕ್ಯಾರೆಟ್ ಹಾಕಿ ಮಿಕ್ಸ್ ಮಾಡಿ ಹದ ಉರಿಯಲ್ಲಿ 5 ನಿಮಿಷಗಳ ಕಾಲ ಬೇಯಿಸಿಕೊಳ್ಳಿ. ಯಾವುದೇ ಕಾರಣಕ್ಕೂ ತಳಹತ್ತದಂತೆ ಕೈಯಾಡಿಸುತ್ತಲೇ ಇರಿ. ನಂತರ ಇದಕ್ಕೆ ಚೀಸ್, ಉಪ್ಪು, ಕಾಳುಮೆಣಸಿಪುಡಿ ಸೇರಿಸಿ ಮಿಕ್ಸ್ ಮಾಡಿ ಗ್ಯಾಸ್ ಆಫ್ ಮಾಡಿ. ಬಿಸಿ ಬಿಸಿ ಸರ್ವ್ ಮಾಡಿ.

## ಬೇಕಾಗಿರುವ ಪದಾರ್ಥ

**ಪಾಲಕ್ - 6 ಎಲೆ, ಕ್ಯಾರೆಟ್ - 1, 1 ಕಪ್ - ಹಾಲು, 2 ಕಪ್ -ನೀರು, ಸ್ಪ್ರಿಂಗ್ ಆನಿಯನ್ - 1, 1 ಟೇಬಲ್ ಸ್ಪೂನ್ - ಕಾರ್ನ್ ಫ್ಲೋರ್, ¼ ಕಪ್ ತುರಿದ ಚೀಸ್, ಕಾಳುಮೆಣಸಿನ ಪುಡಿ - ರುಚಿಗೆ ತಕ್ಕಷ್ಟು, ಉಪ್ಪು - ರುಚಿಗೆ ತಕ್ಕಷ್ಟು.**

# ಊರ್ಫಿ ಜಾವೇದ್ ಫೋಟೋ ನೋಡಿ ಬೆಚ್ಚಿಬಿದ್ದ ನೆಟ್ಟಿಗರು

ಊರ್ಫಿ ಜಾವೇದ್. ಚಿತ್ರ ವಿಚಿತ್ರ ಬಟ್ಟೆ ಧರಿಸಿ, ಆಗಾಗ ನೆಟ್ಟಿಗರ ಆಕ್ರೋಶಕ್ಕೆ ಕಾರಣವಾಗುವ, ತನ್ನ ಒಳ್ಳೆಯ ಮಾತು, ಒಳ್ಳೆಯ ಕೆಲಸಗಳಿಂದ ಕೆಲವರ ಮೆಚ್ಚುಗೆ ಗಳಿಸುವ ನಟಿ. ಬಿಗ್‌ಬಾಸ್‌ಗೆ ಬಂದ ಬಳಿಕ, ಊರ್ಫಿ ಈ ರೀತಿ ಫ್ಯಾಷನ್ ಮಾಡಿ, ಫೇಮಸ್ ಆಗುತ್ತಿದ್ದಾರೆ. ಯಾರಾದ್ರೂ ಕೆಟ್ಟದಾಗಿ ಡ್ರೆಸ್ ಮಾಡಿಕೊಂಡರೆ, ಇವಳು ಅಥವಾ ಇವನು ಊರ್ಫಿಯಿಂದ ಇನ್‌ಸ್ಪೈರ್ ಆಗಿರಬೇಕು ಅಂತಾನೇ ಜನ ಹೇಳುವಷ್ಟು, ಇವರ ಫ್ಯಾಷನ್ ಫೇಮಸ್ ಆಗಿದೆ. ಹೀಗೆ ಸದಾ ತನ್ನದೇ ಆದ ಫ್ಯಾಷನ್‌ನಿಂದ ಟ್ರೋಲ್ ಆಗುವ ಊರ್ಫಿ ಜಾವೇದ್, ಎಡವಟ್ಟೊಂದನ್ನು ಮಾಡಿಕೊಂಡಿದ್ದಾರೆ. ಮೇಕಪ್ ಮಾಡಿಕೊಂಡೋ ಅಥವಾ ಇನ್ನೇನೋ ಮಾಡಲು ಹೋಗಿ, ಊರ್ಫಿ ಜಾವೇದ್ ಮುಖ ಊದಿಕೊಂಡಿದೆ. ಬೋಲ್ಡ್ ಫ್ಯಾಶನ್, ವಿಭಿನ್ನ ಔಟ್‌ಫಿಟ್ಗೊಂದಿಗೆ ಕ್ಯಾಮಾರಗೆ ಫೋಸ್ ನೀಡಿ, ಹೆಸರುವಾಸಿಯಾಗಿರುವ ಉರ್ಫಿ ಜಾವೇದ್ ಅವರ ಈಚೆಗಿನ ಫೋಟೋ ನೋಡಿ ನೆಟಿಜನ್‌ಗಳು ಬೆಚ್ಚಿಬಿದ್ದಿದ್ದಾರೆ. ಉರ್ಫಿ ಜಾಬೇದ್ ಅವರು ತಮ್ಮ ಇನ್ಸ್ಟಾಗ್ರಾಮ್ ಖಾತೆಯಲ್ಲಿ ತಮ್ಮ ಮುಖದ ಚಿತ್ರಗಳನ್ನು ಹಂಚಿಕೊಂಡಿದ್ದು, ಅವರ ಮುಖ ನೋಡಿದ ನೆಟ್ಟಿಗರು ಆರೋಗ್ಯಕ್ಕೆ ಏನಾಯಿತು ಎಂದು ಪ್ರಶ್ನಿಸಿದ್ದಾರೆ. ಫೋಟೋದಲ್ಲಿ ಉರ್ಫಿಯ ಮುಖ ಬಹುತೇಕ ಊದಿಕೊಂಡಿದೆ. ಇದಕ್ಕೆಲ್ಲ ಕಾರಣ ಬೊಟೊಕ್ಸ್ ಮತ್ತು ಫಿಲ್ಲರ್ಗಳು ಎಂದು ದೃಢಪಡಿಸಿದ್ದಾರೆ. ಚಿತ್ರರಂಗದ ಆಪ್ತರು ಮತ್ತು ಅಭಿಮಾನಿಗಳು ಆಕೆಗೆ ಶುಭ ಹಾರೈಸಿ ಕಾಳಜಿ ವಹಿಸುವಂತೆ ಕೇಳಿಕೊಂಡಿದ್ದಾರೆ ಈ ಬಗ್ಗೆ ಇನ್ಸ್ಟಾಗ್ರಾಂನಲ್ಲಿ ಬರೆದುಕೊಂಡಿರುವ ಉರ್ಫಿ ಅವರು, ನಾನು ನನ್ನ ಮುಖದ ಮೇಲೆ ಹಲವು ಟೀಕೆಗಳನ್ನು ಪಡೆಯುತ್ತಿದ್ದೇನೆ, ನನ್ನ ಫಿಲ್ಲರ್ಗಳೊಂದಿಗೆ ನಾನು ಅತಿಯಾಗಿ ಹೋಗಿದ್ದೇನೆ! ನನಗೆ ಪ್ರಮುಖ ಅಲರ್ಜಿ ಇದೆ, ನನ್ನ ಮುಖವು ಹೆಚ್ಚಾಗಿ ಊದಿಕೊಳ್ಳುತ್ತದೆ. ನಾನು ಪ್ರತಿ ಎರಡನೇ ದಿನವೂ ಈ ರೀತಿ ಎಚ್ಚರಗೊಳ್ಳುತ್ತೇನೆ ಮತ್ತು ನನ್ನ ಮುಖ ಯಾವಾಗಲೂ ಊದಿಕೊಳ್ಳುತ್ತದೆ. ನಾನು ಯಾವಾಗಲೂ ತೀವ್ರ ಅಸ್ವಸ್ಥತೆಯಲ್ಲಿದ್ದೇನೆ. ಫಿಲ್ಲರ್ಸ್ ನಹೀ ಹೈ ಹುಡುಗರೇ, ಅಲರ್ಜಿಗಳು ಹೈ . ಇಮ್ಯುನೊಥೆರಪಿ ಚಾಲು ಹೈ ಆದರೆ ನೀವು ಮುಂದೆ ಊದಿಕೊಂಡ ಮುಖದೊಂದಿಗೆ ನನ್ನನ್ನು ನೋಡಿದರೆ. ನಾನು ಆ ಕೆಟ್ಟ ಅಲರ್ಜಿಯ ದಿನಗಳಲ್ಲಿ ಒಂದನ್ನು ಎದುರಿಸುತ್ತಿದ್ದೇನೆ ಎಂದು ತಿಳಿಯಿರಿ, ನಾನು 18 ವರ್ಷ ವಯಸ್ಸಿನಿಂದಲೂ ನನ್ನ ಸಾಮಾನ್ಯ ಫಿಲ್ಲರ್ಗಳು ಮತ್ತು ಬೊಟೊಕ್ಸ್ ಅನ್ನು ಹೊರತುಪಡಿಸಿ ನಾನು ಏನನ್ನೂ ಮಾಡಿಲ್ಲ. ನನ್ನ ಮುಖ ಊದಿಕೊಂಡಿರುವುದನ್ನು ನೀವು ನೋಡಿದರೆ, ಹೆಚ್ಚಿನ ಫಿಲ್ಲರ್ಗಳನ್ನು ಪಡೆಯಬೇಡಿ ಎಂದು ನನಗೆ ಸಲಹೆ ನೀಡಬೇಡಿ, ಸಹಾನುಭೂತಿ ತೋರಿಸಿ ಮತ್ತು ಮುಂದುವರಿಯಿರಿ.



# ಸಕ್ಕರೆ ಸಂಪೂರ್ಣ ನಿರ್ಲಕ್ಷ್ಯ ಮಾಡಬೇಡಿ



ಸಕ್ಕರೆಯನ್ನು ಬಳಕೆ ಮಾಡದ ಮನೆಯನ್ನು ಹುಡುಕಲು ಸಾಧ್ಯವೇ ಇಲ್ಲ ಎಂಬಷ್ಟರ ಮಟ್ಟಿಗೆ ಸಕ್ಕರೆ ಎಲ್ಲರ ಮನೆಯ ಅಡುಗೆ ಮನೆಗಳಲ್ಲಿ ಸ್ಥಾನ ಪಡೆದಿದೆ. ಬೇಕರಿಗಳಲ್ಲಿ ಸಿಗುವ ಬಹುತೇಕ ಪದಾರ್ಥಗಳು ಸಕ್ಕರೆಯಿಂದಲೇ ಮಾಡಲ್ಪಟ್ಟವುಗಳಾಗಿವೆ. ಹೀಗಾಗಿ ಸಕ್ಕರೆ ಬಹುತೇಕರ ಜೀವನದ ಅವಿಭಾಜ್ಯ ಅಂಗವಾಗಿ ಬದಲಾಗಿದೆ.

ಚಹಾ, ಕಾಫಿ ಸೇವನೆಯಿಂದ ಹಿಡಿದು ಸಣ್ಣ ಬಿಸ್ಕಟ್ ಬಾಯಿಗೆ ಹಾಕಿಕೊಂಡರೂ ನಿಮ್ಮ ದೇಹಕ್ಕೆ ಸಕ್ಕರೆ ಸೇರಿದಂತೆಯೇ. ಐಸ್ಕ್ರೀಂಗಳು ಹಾಗೂ ತಂಪು ಪಾನೀಯಗಳಂತೂ ಸಕ್ಕರೆ ಅಗಾಧ ಪ್ರಮಾಣದಲ್ಲಿ ಇರುತ್ತದೆ. ಆದರೆ ನಿಜವಾಗಿಯೂ ನಮ್ಮ ದೇಹಕ್ಕೆ ಇಷ್ಟೆಲ್ಲ ಸಕ್ಕರೆಯ ಅವಶ್ಯಕತೆ ಇದೆಯೇ...?

ಹೀಗೊಂದು ಪ್ರಶ್ನೆ ನಿಮ್ಮ ಮನಸ್ಸಲ್ಲಿ ಮೂಡಿದ್ದರೆ ಇದಕ್ಕೆ ಉತ್ತರ ಖಂಡಿತವಾಗಿಯೂ ಇಲ್ಲ. ನಮ್ಮ ದೇಹ ಕಾರ್ಯ ನಿರ್ವಹಿಸಲು ಶಕ್ತಿಯನ್ನು ನೀಡುವ ಕಾರ್ಯವನ್ನು ರಕ್ತದಲ್ಲಿರುವ ಗ್ಲುಕೋಸ್ ಮಾಡುತ್ತದೆ ಎಂಬುದು ನಿಜ. ಹಾಗಂತ ನೀವು ದಿನಗಟ್ಟಲೇ ಕೆಜಿಯಷ್ಟು ಸಕ್ಕರೆ ತಿನ್ನಬೇಕು ಎಂದೇನಿಲ್ಲ. ನೈಸರ್ಗಿಕವಾಗಿ ಸಿಗುವ ಹಣ್ಣುಗಳು, ತರಕಾರಿಗಳಲ್ಲಿಯೂ ಗ್ಲುಕೋಸ್ ಅಂಶವಿದ್ದು ಇವುಗಳೇ ನಮ್ಮ ದೇಹಕ್ಕೆ ಶಕ್ತಿಯನ್ನು ಒದಗಿಸುವ ಕಾರ್ಯವನ್ನು ಮಾಡುತ್ತದೆ. ನಾವು ಸೇವಿಸುವ ಕಾರ್ಬೋಹೈಡ್ರೇಟ್ಗಳಿಂದ ಯಕೃತ್ತು ಗ್ಲುಕೋಸ್ ಅಂಶವನ್ನು ಪಡೆದುಕೊಳ್ಳುತ್ತದೆ.

ಹೆಲ್ತ್ ಟಿಪ್ಸ್

ಮನುಷ್ಯನ ಆರೋಗ್ಯ ಸೌಖ್ಯವಾಗಿ ಇರಬೇಕು ಎಂದರೆ ಖಂಡಿತವಾಗಿಯೂ ನೀವು ಸಕ್ಕರೆ ಸೇವಿಸುವುದನ್ನು ತ್ಯಜಿಸುವುದೇ ಉತ್ತಮ ಎಂದು ಹೇಳಬಹುದು. ಏಕೆಂದರೆ ಆರೋಗ್ಯಕರ ಮನುಷ್ಯನಿಗೆ ನಿತ್ಯ 5 ಗ್ರಾಂ ಸಕ್ಕರೆಯ ಅವಶ್ಯಕತೆ ಮಾತ್ರ ಇರುತ್ತದೆ. ಇದನ್ನು ದೇಹವು ನೈಸರ್ಗಿಕ ಆಹಾರಗಳಿಂದಲೇ ಪಡೆದುಕೊಳ್ಳುತ್ತದೆ. ನಾವು ಸೇವಿಸುವ ಅನ್ನದಲ್ಲಿಯೇ ಗ್ಲುಕೋಸ್ ಇರುತ್ತದೆ. ಅಲ್ಲದೇ ಯಾವ ಮನುಷ್ಯನ ದೇಹ ಯಾವ ರೀತಿಯಲ್ಲಿ ಸಕ್ಕರೆಯನ್ನು ಸಂಸ್ಕರಿಸುತ್ತದೆ ಎಂಬುದರ ಆಧಾರದ ಮೇಲೆ ಈ ಅಂಕಿ ಅಂಶ ಬದಲಾಗುತ್ತಾ ಹೋಗುತ್ತದೆ.

# ಜಿಯೋಸಿನಿಮಾದಲ್ಲಿ ದಾಖಲೆಯ 62 ಕೋಟಿಗೂ ಅಧಿಕ ವೀಕ್ಷಣೆ ಕಂಡ ಟಾಟಾ ಐಪಿಎಲ್



2024: ಟಾಟಾ ಐಪಿಎಲ್ನ ಅಧಿಕೃತ ಸ್ಟ್ರೀಮಿಂಗ್ ಪ್ಲಾಟ್ ಫಾರ್ಮ್ ಆಗಿರುವ ಜಿಯೋಸಿನಿಮಾ, ಟಾಟಾ ಐಪಿಎಲ್ 2024ರ ಋತುವಿನಲ್ಲಿ 2,600 ಕೋಟಿ ವೀಕ್ಷಣೆ ದಾಖಲೆಯೊಂದಿಗೆ ಮತ್ತೊಂದು ಯಶಸ್ವಿ ಆವೃತ್ತಿಗೆ ತೆರೆ ಎಳೆದಿದೆ. ಇದು ಟಾಟಾ ಐಪಿಎಲ್-2023ಕ್ಕೆ ಹೋಲಿಸಿದರೆ ಶೇ. 53ರಷ್ಟು ಪ್ರಗತಿಯಾಗಿದೆ. ಜಿಯೋಸಿನಿಮಾ ಐಪಿಎಲ್ನಲ್ಲಿ ತನ್ನ ಎರಡನೇ ಋತುವನ್ನು ಮುಕ್ತಾಯಗೊಳಿಸುತ್ತಿದ್ದಂತೆ, ಈ ಪ್ಲಾಟ್ಫಾರ್ಮ್ 35,000 ಕೋಟಿಗೂ ಅಧಿಕ ನಿಮಿಷಗಳ ವೀಕ್ಷಣೆಯ ಸಮಯವನ್ನು ದಾಖಲಿಸಿದೆ.

ಅಮೋಘವಾದ ಟೂರ್ನಿಯ ಮೊದಲ ದಿನದ ಅದ್ಭುತ ಆರಂಭವನ್ನು ನಂತರದಲ್ಲೂ ಮುಂದುವರಿಸಿರುವ ಜಿಯೋಸಿನಿಮಾ, ತನ್ನ ವ್ಯಾಪ್ತಿಯನ್ನು ಶೇ. 38ಕ್ಕಿಂತ ಅಧಿಕವಾಗಿ ಬೆಳೆಸಿದ್ದು, 62 ಕೋಟಿಗೂ ಅಧಿಕ ವಿಕ್ಷಣೆಯೊಂದಿಗೆ ಮುಕ್ತಾಯಗೊಳಿಸಿತು. 12 ಭಾಷೆಯ ಫೀಡ್‌ಗಳು, 4ಕೆ ವೀಕ್ಷಣೆ, ಮಲ್ಟಿ-ಕ್ಯಾಮ್ ವೀಕ್ಷಣೆಗಳು ಮತ್ತು ಎಆರ್/ವಿಆರ್ಮೂಲಕ ಕ್ರೀಡಾಂಗಣದಂಥ ಅನುಭವ ಮತ್ತು 360-ಡಿಗ್ರಿ ವೀಕ್ಷಣೆಯು ಸರಾಸರಿ ಸಮಯವನ್ನು 75 ನಿಮಿಷಗಳಿಗೆ ಮುಟ್ಟುವಂತೆ ಮಾಡಿದ್ದರಿಂದ ಸಂಪರ್ಕಿತ ಟಿವಿ ವೀಕ್ಷಕರು ಗಣನೀಯವಾಗಿ ವಿಸ್ತರಿಸಿದರು. ಕಳೆದ ಆವೃತ್ತಿಯಲ್ಲಿ ವೀಕ್ಷಣೆಯ ಸರಾಸರಿಯು 60 ನಿಮಿಷಗಳಾಗಿತ್ತು.

ಜಿಯೋಸಿನಿಮಾ 2024ರ ಆವೃತ್ತಿಯನ್ನು 11.3 ಕೋಟಿ ವೀಕ್ಷಕರು ಮೊದಲ ದಿನದಂದೇ ಲಾಗ್‌ಇನ್ ಆಗುವುದರೊಂದಿಗೆ ಆರಂಭಿಸಿತ್ತು. ಟಾಟಾ ಐಪಿಎಲ್-2023ರ ಮೊದಲ ದಿನಕ್ಕೆ ಹೋಲಿಸಿದರೆ ಇದು ಶೇ.51ರಷ್ಟು ಹೆಚ್ಚಳವಾಗಿದೆ. ಜಿಯೋಸಿನಿಮಾ ತನ್ನ ಎರಡನೇ ಆವೃತ್ತಿಯನ್ನು ಡಿಜಿಟಲ್ನಲ್ಲಿ ಪ್ರಾರಂಭಿಸುತ್ತಿದ್ದಂತೆ, ಟಾಟಾ ಐಪಿಎಲ್-2024ರ ಆರಂಭಿಕ ದಿನವು 59 ಕೋಟಿಗೂ ಹೆಚ್ಚು ವೀಡಿಯೊ ವೀಕ್ಷಣೆಗಳನ್ನು ಪ್ಲಾಟ್ಫಾರ್ಮ್ನಲ್ಲಿ ದಾಖಲಿಸಿಕೊಂಡಿತು. ಅಂತಿಮವಾಗಿ ಇದು 660 ಕೋಟಿ ನಿಮಿಷಗಳ ವೀಕ್ಷಣೆ ಸಮಯಕ್ಕೆ ಕಾರಣವಾಯಿತು.

ಭಾರತದಲ್ಲಿ ಕ್ರೀಡೆಗಳನ್ನು ಸವಿಯುವ ವಿಧಾನವನ್ನು ಮರು ವ್ಯಾಖ್ಯಾನಿಸುವುದನ್ನು ಮುಂದುವರಿಸುವ ಭರವಸೆಯೊಂದಿಗೆ ನಾವು ಟಾಟಾ ಐಪಿಎಲ್-2024 ಅನ್ನು ಮುಕ್ತಾಯಗೊಳಿಸುತ್ತೇವೆ. ನಾವು ವರ್ಷದಿಂದ ವರ್ಷಕ್ಕೆ ಕಾಣುತ್ತಿರುವ ಬೆಳವಣಿಗೆಯು ನಮ್ಮ ವೀಕ್ಷಕ ಕೇಂದ್ರಿತ ಪ್ರಸ್ತುತಿಯು ಹೆಚ್ಚಿನ ಜನರನ್ನು ತಲುಪುತ್ತಿದೆ ಮತ್ತು ಮೆಚ್ಚುಗೆಯನ್ನು ಪಡೆದುಕೊಂಡಿದೆ ಎಂಬ ಭರವಸೆಯನ್ನು ನಮಗೆ ನೀಡುತ್ತಿದೆ. ಜಿಯೋಸಿನಿಮಾವನ್ನು ಹೆಚ್ಚು ಬೇಡಿಕೆಯಿರುವ ಡಿಜಿಟಲ ಪ್ಲಾಟ್ ಫಾರ್ಮ್ಆಗಿ ಮಾಡುವ ಹಾದಿಯಲ್ಲಿ ನಮ್ಮ ದೃಷ್ಟಿಕೋನವನ್ನು ಹಂಚಿಕೊಂಡ ನಮ್ಮ ಪಾಲುದಾರರು, ಪ್ರಾಯೋಜಕರಿಗೆ ನಾವು ಧನ್ಯವಾದ ಹೇಳಲು ಬಯಸುತ್ತೇವೆ ಎಂದು ವಯಾಕಾಮ್18ರ ವಕ್ತಾರರು ಹೇಳಿದ್ದಾರೆ.

ಈ ಆವೃತ್ತಿಯಲ್ಲಿ ಜಿಯೋಸಿನಿಮಾ ಆರು ಪ್ರಮುಖ ಗ್ರಾಹಕ ಬ್ರಾಂಡ್ಗಳಾದ ಡ್ರೀಮ್11, ಥಮ್ಸ್ ಅಪ್, ಪಾರ್ಲೆ ಪ್ರಾಡಕ್ಟ್ಸ್, ಬ್ರಿಟಾನಿಯಾ, ದಾಲ್ಮಿಯಾ ಸಿಮೆಂಟ್ಸ್ ಮತ್ತು ಎಚ್ಡಿಎಫ್ಸಿ ಬ್ಯಾಂಕ್ನಿಂದ ಸಂಪೂರ್ಣ ಹೊಸ ಹಂತಕ್ಕೆ ಆರಂಭಿಕ ಪಂದ್ಯದ ಪ್ರಸ್ತುತಿಯನ್ನು ತೆಗೆದುಕೊಂಡಿತು. ಹೊಸದಾಗಿ ಪರಿಚಯಿಸಲಾದ ಜಿಯೋಸಿನಿಮಾದ ಬ್ಯಾಂಡ್ ಸ್ಪಾಟ್ಲೈಟ್ ಅಡಿಯಲ್ಲಿ ಮೊದಲ ಆರು ಓವರ್ಗಳಲ್ಲೇ ಟಾಟಾ ಐಪಿಎಲ್ಅಭಿಯಾನವನ್ನು ಪ್ರಾರಂಭಿಸಿತು. ಋತುವಿನ ಅಂತ್ಯದ ವೇಳೆಗೆ ಜಿಯೋಸಿನಿಮಾ ದಾಖಲೆಯ 28 ಪ್ರಾಯೋಜಕರು ಮತ್ತು 1400ಕ್ಕೂ ಹೆಚ್ಚು ಜಾಹೀರಾತುದಾರರನ್ನು ಹೊಂದಿತ್ತು.

ಅತ್ಯುತ್ತಮ ದರ್ಜೆಯ ಕ್ರೀಡಾ ವಿಷಯವನ್ನು ನೀಡುವ ಜಿಯೋಸಿನಿಮಾದ ಬದ್ಧತೆಯು ಪ್ಯಾರಿಸ್‌ಒಲಿಂಪಿಕ್ ಗೇಮ್ಸ್ 2024ರೊಂದಿಗೆ ಮುಂದುವರಿಯುತ್ತದೆ. ವೀಕ್ಷಕರು ಸಾವಿರಾರು ಗಂಟೆಗಳ ಲೈವ್ ಮತ್ತು ಬೇಡಿಕೆಯ ಕ್ರೀಡೆಯೊಂದಿಗೆ ಒಲಿಂಪಿಕ್ಸ್ನ ವರ್ಧಿತ ವೀಕ್ಷಣೆಯ ಅನುಭವವನ್ನು ಹಿಂದೆಂದಿಗಿಂತಲೂ ಹೆಚ್ಚಾಗಿ ನಿರೀಕ್ಷಿಸಬಹುದು. ವಯಾಕಾಮ್18ರ ಪ್ಯಾರಿಸ್ -2024ರ ಸಮಗ್ರ ಕವರೇಜ್, ಭಾರತದ ಅಭಿಮಾನಿಗಳು, ಒಲಿಂಪಿಕ್ಸ್ನಲ್ಲಿ ಭಾರತೀಯರು ನೋಡಲೇಬೇಕಾದ ಸ್ಪರ್ಧೆಗಳು, ಒಲಿಂಪಿಕ್ಸ್ ಇತಿಹಾಸದ ಶ್ರೇಷ್ಠ ಪ್ರದರ್ಶನಗಳು, ಪ್ಯಾರಿಸ್ ಒಲಿಂಪಿಕ್ಸ್-2024ರಲ್ಲಿ ಭಾರತೀಯರು ಸಾಧಿಸಬಹುದಾದ ಅಭೂತಪೂರ್ವ ಹೆಗ್ಗುರುತುಗಳು ಮತ್ತು ಹೆಚ್ಚಿನದನ್ನು ಒಳಗೊಂಡಿರುತ್ತದೆ.

ವೀಕ್ಷಕರು ಜಿಯೋಸಿನಿಮಾ ಆ್ಯಪ್ (ಐಒಎಸ್ಮತ್ತು ಆಂಡ್ರಾಯ್ಡ್) ಡೌನ್ಲೋಡ್ಮಾಡಿಕೊಳ್ಳುವ ಮೂಲಕ ತಮ್ಮ ಆಯ್ಕೆಯ ಕ್ರೀಡೆಗಳನ್ನು ವೀಕ್ಷಿಸಬಹುದಾಗಿದೆ. ತಾಜಾ ಸುದ್ದಿಗಳು, ಸ್ಕೋರ್, ವಿಡಿಯೋಗಳಿಗಾಗಿ ಅಭಿಮಾನಿಗಳು ಫೇಸ್ಬುಕ್, ಇನ್ಸ್ಟಾಗ್ರಾಂ, ಟ್ವಿಟರ್, ಯುಟ್ಯೂಬ್ ಮತ್ತು ವ್ಯಾಟ್ಸ್‌ಆ್ಯಪ್‌ನಲ್ಲಿ ಜಿಯೋಸಿನಿಮಾ ಹಾಗೂ ಫೇಸ್ಬುಕ್, ಇನ್ಸ್ಟಾಗ್ರಾಂ, ಟ್ವಿಟರ್ ಮತ್ತು ಯುಟ್ಯೂಬ್ನಲ್ಲಿ ಸ್ಪೋರ್ಟ್ಸ್18 ಅನ್ನು ಫಾಲೋ ಮಾಡಬಹುದು.

# ಕೂದಲು ಸರಿಪಡಿಸಲು ಹೇರ್ ಪ್ಯಾಕ್ ಹಚ್ಚಿ

## ಬ್ಯೂಟಿ ಟಿಪ್ಸ್



ವಾತಾವರಣದ ಕೊಳೆ, ಧೂಳು, ಮಾಲಿನ್ಯದಿಂದ ಕೂದಲು ಹಾನಿಗೊಳಗಾಗುತ್ತದೆ. ಇದಕ್ಕೆ ಸರಿಯಾದ ಆರೈಕೆ ಮಾಡಬೇಕು. ಇಲ್ಲವಾದರೆ ಈ ಕೂದಲು ಉದುರಿ ಹೋಗಿ ಬೊಕ್ಕ ತಲೆಯ ಸಮಸ್ಯೆ ಕಾಡಬಹುದು. ಅಲ್ಲದೇ ಇದು ಕೂದಲಿನ ಸೌಂದರ್ಯವನ್ನು ಕೆಡಿಸುತ್ತದೆ. ಹಾಗಾಗಿ ಈ ಹಾನಿಗೊಳಗಾದ ಕೂದಲನ್ನು ಸರಿಪಡಿಸಲು ಈ ಹೇರ್ ಪ್ಯಾಕ್ ಹಚ್ಚಿ. ಮೊಟ್ಟೆಯ ಹಳದಿ ಲೋಳೆಯಲ್ಲಿ ಕೊಬ್ಬು ಮತ್ತು ಪ್ರೋಟೀನ್ ಹೆಚ್ಚಾಗಿದೆ. ಇದು ಹಾನಿಗೊಳಗಾದ ಕೂದಲಿಗೆ ಜೀವ ನೀಡುತ್ತದೆ. ಹಾಗೇ ಮೊಸರಿನಲ್ಲಿ ಪ್ರೋಟೀನ್ ಸಮೃದ್ಧವಾಗಿದೆ. ಇದು ಕೂದಲಿನ ಬೇರುಗಳನ್ನು ಬಲಗೊಳಿಸುತ್ತದೆ. ಮತ್ತು ಕೂದಲನ್ನು ತೇವಗೊಳಿಸಿ ಅವು ನೈಸರ್ಗಿಕವಾಗಿ ಹೊಳೆಯುವಂತೆ ಮಾಡುತ್ತದೆ. ಹಾಗಾಗಿ 2 ಮೊಟ್ಟೆಗೆ 1 ಚಮಚ ಜೇನುತುಪ್ಪ ಮತ್ತು 2 ಚಮಚ ಮೊಸರನ್ನು ಬೆರೆಸಿ ಹೇರ್ ಪ್ಯಾಕ್ ತಯಾರಿಸಿ ಕೂದಲಿಗೆ ಹಚ್ಚಿ. ಅರ್ಧ ಗಂಟೆ ಬಿಟ್ಟು ಕೂದಲನ್ನು ತೊಳೆಯಿರಿ. ಹಾಗೇ ಹಾನಿಗೊಳಗಾದ ಕೂದಲಿಗೆ ಅಲೋವೆರಾ ತುಂಬಾ ಒಳ್ಳೆಯದು. ಇದು ಹಾನಿಗೊಳಗಾದ ಕೂದಲಿಗೆ ತೇವವನ್ನು ನೀಡಿ ಜೀವ ತುಂಬುತ್ತದೆ. ಮತ್ತು ಕೂದಲಿನ ಬೆಳವಣಿಗೆಗೆ ಸಹಾಯ ಮಾಡುತ್ತದೆ. ಹಾಗಾಗಿ 3 ಚಮಚ ಮೊಸರಿಗೆ 4 ಚಮಚ ಅಲೋವೆರಾ ಜೆಲ್, 2 ಚಮಚ ತೆಂಗಿನೆಣ್ಣೆಯನ್ನು ಬೆರೆಸಿ ಪೇಸ್ಟ್ ತಯಾರಿಸಿ ಕೂದಲಿಗೆ ಹಚ್ಚಿ ಅರ್ಧ ಗಂಟೆ ಬಿಟ್ಟು ಕೂದಲನ್ನು ತಣ್ಣೀರಿನಿಂದ ತೊಳೆಯಿರಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಹೊಸ ವ್ಯವಹಾರಗಳಿಂದ ಲಾಭ, ವಿಧೇಯತೆ ಯಶಸ್ಸಿನ ಮೆಟ್ಟಿಲು, ದುಂದು ವೆಚ್ಚ, ತಿರುಗಾಟ.

**ವೃಷಭ:** ಉದ್ಯಮಿಗಳಿಗೆ ಅಧಿಕ ಲಾಭ, ಅಪರಿಚಿತರ ವಿಷಯದಲ್ಲಿ ಜಾಗ್ರತೆ, ಸ್ವತಂತ್ರವಾಗಿ ಹಣ ಸಂಪಾದನೆ.

**ಮಿಥುನ:** ಅತಿಯಾದ ಆತ್ಮವಿಶ್ವಾಸ, ಮಿತ್ರರ ಬೆಂಬಲ, ಕಾರ್ಯ ವಿಕಲ್ಪ, ಶತ್ರು ನಾಶ, ವಾದ ವಿವಾದಗಳಿಂದ ದೂರವಿರಿ.

**ಕಟಕ:** ಮಾನಸಿಕ ಒತ್ತಡ, ದಂಡ ಕಟ್ಟುವಿರಿ, ನಿಮ್ಮ ಮಾತುಗಳಿಂದ ಕಲಹ ಸಾಧ್ಯತೆ, ಸೌಜನ್ಯದಿಂದ ವರ್ತಿಸಿ, ವಿದ್ಯಾರ್ಥಿಗಳಲ್ಲಿ ಪ್ರಗತಿ.

**ಸಿಂಹ:** ಗುರಿಯನ್ನು ಸಾಧಿಸುವಿರಿ, ಪರರಿಗೆ ಸಹಾನುಭೂತಿ ತೋರುವಿರಿ, ಸುಖ ಭೋಜನ, ವಿಪರೀತ ಖರ್ಚು.

**ಕನ್ಯಾ:** ರಾಜಕೀಯ ಕ್ಷೇತ್ರದವರಿಗೆ ಶುಭ, ದೈವಿಕ ಚಿಂತನೆ, ಮೂಗಿನ ಮೇಲೆ ಕೋಪ, ಸ್ನೇಹಿತರಿಂದ ಹಿತನುಡಿ.

**ತುಲಾ:** ಅಲ್ಪ ಕಾರ್ಯ, ಋಣವಿಮೋಚನೆ, ಸುಳ್ಳು ಮಾತನಾಡುವಿರಿ, ಕೃಷಿಕರಿಗೆ ಅಲ್ಪ ಲಾಭ.

**ವೃಶ್ಚಿಕ:** ಆದಾಯಕ್ಕಿಂತ ಖರ್ಚು ಜಾಸ್ತಿ, ಆರೋಗ್ಯದ ಸಮಸ್ಯೆ, ಉದ್ಯೋಗದಲ್ಲಿ ಕಿರಿಕಿರಿ, ಕುಟುಂಬ ಸೌಖ್ಯ.

**ಧನಸ್ಸು:** ವಿವಿಧ ರೀತಿ ಧನ ಲಾಭ, ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ, ಪರಸ್ಥಳವಾಸ, ಎಷ್ಟೇ ಹಣ ಬಂದರೂ ಉಳಿಯುವುದಿಲ್ಲ.

**ಮಕರ:** ಮಾರಾಟದಿಂದ ಲಾಭ, ಮಾತಿಗೆ ಮರುಳಾಗದಿರಿ, ಬಹು ಸೌಖ್ಯ, ಉದ್ಯೋಗದಲ್ಲಿ ಬಡ್ತಿ.

**ಕುಂಭ:** ಮಾನಸಿಕ ಒತ್ತಡ, ಹಿತ ಶತ್ರು ಭಾದೆ, ಮನೆಯವರ ಭಾವನೆಗಳಿಗೆ ಸ್ಪಂದಿಸುವಿರಿ, ತೀರ್ಥ ಯಾತ್ರಾ ದರ್ಶನ.

**ಮೀನ:** ನೀಚ ಜನರಿಂದ ದೂರವಿರಿ, ಪಾಪ ಬುದ್ಧಿ, ಸಾಧಾರಣ ಪ್ರಗತಿ, ಮನಕ್ಲೇಶ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು.

# ವಿಶ್ವಪರಿಸರ ದಿನ




ಇಂದು ವಿಶ್ವ ಪರಿಸರ ದಿನ. ಪ್ರತಿ ವರ್ಷ ಜೂನ್ 5 ರಂದು ವಿಶ್ವಾದ್ಯಂತ ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತದೆ. ವಿಶ್ವ ಪರಿಸರ ದಿನವನ್ನು ವಿಶ್ವಾದ್ಯಂತ ಪರಿಸರದ ಬಗ್ಗೆ ಜಾಗೃತಿ ಮತ್ತು ನಮ್ಮ ಪರಿಸರದ ರಕ್ಷಣೆಗೆ ಉತ್ತೇಜಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಜೀವಿಗಳ ಪೋಷಣೆಯಲ್ಲಿ ಪರಿಸರ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಪರಿಸರದ ಸಮೃದ್ಧಿ ಆರೋಗ್ಯಕರ ಜೀವನ ಮತ್ತು ಭೂಮಿಯ ಮೇಲಿನ ಪ್ರತಿಯೊಂದು ಜೀವಿಯ ಜೀವನದ ಅಸ್ತಿತ್ವಕ್ಕೆ ಕಾರಣವಾಗಿದೆ.

ಮಾನವ ಸೇರಿದಂತೆ ಇತರೆ ಪ್ರಾಣಿ, ಪಕ್ಷಿಗಳು, ಸೇರಿದಂತೆ ಪ್ರತಿಯೊಂದು ಜೀವ ಸಂಕುಲ ಆಹಾರ, ಗಾಳಿ, ನೀರು ಇತರೆ ಅಗತ್ಯತೆಗಳಿಗಾಗಿ ಪರಿಸರವನ್ನ ಅವಲಂಭಿಸಿದೆ ಎಂದರೆ ತಪ್ಪಾಗಲಾರದು. ಇದರೆ ಇತ್ತೀಚಿನ ದಿನಗಳಲ್ಲಿ ಮಾನವನು ಆಧುನಿಕ ಬದುಕಿನ ಗೀಳಿಗೆ ಬಿದ್ದು ಪರಿಸರವನ್ನು ನಾಶ ಮಾಡುತ್ತಿದ್ದಾನೆ. ಈಗ ಮಾನವನ ಈ ದುರಾಸೆಯಿಂದ ಗಾಳಿ, ನೀರು, ಮಣ್ಣು ಮುಂತಾದ ಪರಿಸರದ ಪ್ರತಿಯೊಂದು ಅಂಶವೂ ಕಲುಷಿತಗೊಂಡಿದೆ. ಮನುಷ್ಯ ತನ್ನ ಅಭಿವೃದ್ಧಿಗಾಗಿ ತನಗೆ ಅರಿವಿಲ್ಲದಂತೆ ಪರಿಸರವನ್ನು ಹಾಳು ಮಾಡುತ್ತಿದ್ದಾನೆ.ಹೀಗಾಗಿ ಪ್ರತಿಯೊಬ್ಬರಲ್ಲೂ ಪರಿಸರದ ಬಗ್ಗೆ ಕಾಳಜಿ ಮೂಡಿಸುವ ಸಲುವಾಗಿ ಪ್ರತಿವರ್ಷ ಜೂನ್ 5 ರಂದು ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತದೆ.

ವಿಶ್ವ ಪರಿಸರ ದಿನವನ್ನು 1974 ರಲ್ಲಿ ವಿಶ್ವಸಂಸ್ಥೆಯ ಅನುಮೋದನೆಯೊಂದಿಗೆ ಆರಂಭಿಸಲಾಯಿತು. ಈ ಕುರಿತು 1972 ರಲ್ಲಿಯೇ ಚರ್ಚೆಗಳು ಆರಂಭವಾಗಿತ್ತು. ಆದರೆ ಎರಡು ವರ್ಷಗಳ ಕಾಲ ಈ ಚರ್ಚೆ ನಡೆಸಿ, 1974 ಜೂನ್ 5 ರಂದು ಮೊದಲು ವಿಶ್ವ ಪರಿಸರ ದಿನವನ್ನು ಆಚರಿಸಲಾಯಿತು. ಅಂದಿನಿಂದ ಪ್ರತಿ ವರ್ಷ ವಿಶ್ವ ಪರಿಸರ ದಿನವನ್ನು ಒಂದು ಧ್ಯೇಯವಾಕ್ಯದೊಂದಿಗೆ ಆಚರಿಸಲಾಗುತ್ತದೆ.

ವಿಶ್ವ ಪರಿಸರ ದಿನವನ್ನು ಪ್ರತಿ ವರ್ಷ ಜೂನ್ 5 ರಂದು ಆಚರಿಸಲಾಗುತ್ತದೆ. ಜೂನ್ ತಿಂಗಳ 5ನೇ ತಾರೀಖಿನಿಂದ ಜೂನ್ 16ರ ವರೆಗೆ ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತದೆ. ಈ ದಿನಗಳಲ್ಲಿ ಎಲ್ಲಡೆ ಮರಗಳನ್ನು ನೆಡಲಾಗುತ್ತದೆ. ಮತ್ತು ಪರಿಸರಕ್ಕೆ ಸಂಬಂಧಿಸಿದ ಅನೇಕ ಜಾಗೃತಿ ಕೆಲಸಗಳನ್ನು ಮಾಡಲಾಗುತ್ತದೆ.

ಪ್ರತಿಯೊಬ್ಬರಲ್ಲು ಪರಿಸರದ ಬಗ್ಗೆ ಕಾಳಜಿ ಮೂಡಿಸುವ ಸಲುವಾಗಿ ಪ್ರತಿವರ್ಷ ಜೂನ್ 5ರಂದು ವಿಶ್ವಪರಿಸರ ದಿನವನ್ನು ಆಚರಿಸಲಾಗುತ್ತದೆ. ಪ್ರತಿ ವರ್ಷ ಬೇರೆ ಬೇರೆ ಧ್ಯೇಯವಾಕ್ಯದೊಂದಿಗೆ ಪರಿಸರ ದಿನವನ್ನು ಆಚರಿಸಲಾಗುತ್ತದೆ. ಇದರ ಮುಖ್ಯ ಉದ್ದೇಶ ಪರಿಸರದ ಬಗ್ಗೆ ಪ್ರತಿ ಮನುಷ್ಯನಲ್ಲೂ ಜಾಗೃತಿ ಮೂಡಿಸುವುದು ಮತ್ತು ಪರಿಸರವನ್ನು ಹಾಳು ಮಾಡುವುದನ್ನ ತಡೆಯುವುದಾಗಿದೆ.

ಸಂಜೆ ಮುಗಿಲು
ಮಂಗಳವಾರ
4.6.2024



# 93ನೇ ವಯಸ್ಸಿನಲ್ಲಿ 5ನೇ ವಿವಾಹವಾದ ರೂಪರ್ಟ್ ಮರ್ಡೋಕ್



**ಲಾಸ್ ಎಂಜಲೀಸ್:** ಮಾಧ್ಯಮ ಕ್ಷೇತ್ರದ ದಿಗ್ಗಜ ರೂಪರ್ಟ್ ಮರ್ಡೋಕ್ ಅವರು ಶನಿವಾರ ತಮ್ಮ 93ನೇ ವಯಸ್ಸಿನಲ್ಲಿ ತಮಗಿಂತ 25 ವರ್ಷ ಕಿರಿಯರಾದ ನಿವೃತ್ತ ಕಣ ಜೀವಶಾಸ್ತ್ರಜ್ಞೆಯನ್ನು ವಿವಾಹವಾದರು. ಇದು ಮರ್ಡೋಕ್ ಅವರ ಐದನೇ ವಿವಾಹ. ಎಲೆನಾ ಝುಕೋವಾ ಅವರಿಗೆ 67 ವರ್ಷ ವಯಸ್ಸು, ಮೊರಗಾ ಎಂಬ ಕ್ಯಾಲಿಫೋರ್ನಿಯಾ ವೈನ್ ಯಾರ್ಡ್ ಎಸ್ಟೇಟ್ ನಲ್ಲಿ ವಿವಾಹ ನಡೆಯಿತು.

ವಿವಾಹದ ಚಿತ್ರಗಳನ್ನು ಮರ್ಡೋಕ್ ಮಾಲೀಕತ್ವದ ಬ್ರಿಟನ್ ಪತ್ರಿಕೆ 'ದ ಸನ್' ಪತ್ರಿಕೆಯಲ್ಲಿ ಪ್ರಕಟಿಸಲಾಗಿದೆ. ನವಜೋಡಿ ಫೋಟೊಗೆ ಪೋಸ್ ನೀಡುತ್ತಾ ನಗುತ್ತಿರುವ ಚಿತ್ರಗಳು ಪ್ರಕಟವಾಗಿವೆ.

ಈ ವಿವಾಹ ಸಂಭ್ರಮದಲ್ಲಿ ನ್ಯೂ ಇಂಗ್ಲೆಂಡ್ ಪೇಟ್ರಿಯಾಟ್ಸ್ ಯುಎಸ್ ಫುಟ್ಬಾಲ್ ತಂಡದ ಮಾಲೀಕ ರಾಬರ್ಟ್ ಕ್ರಾಫ್ಟ್ (82) ಮತ್ತು ಅವರ 50 ವರ್ಷ ವಯಸ್ಸಿನ ಪತ್ನಿ ದಾನಾ ಬ್ಲೂಂಬರ್ಗ್ ಪಾಲ್ಗೊಂಡಿದ್ದರು ಎಂದು ವರದಿ ವಿವರಿಸಿದೆ. ಇದಕ್ಕೂ ಮುನ್ನ ಮರ್ಡೋಕ್ ನಾಲ್ಕು ಬಾರಿ ವಿವಾಹವಾಗಿದ್ದು, ಇತ್ತೀಚೆಗೆ ರೋಲಿಂಗ್ ಸ್ಟೋನ್ ಮುಖ್ಯಸ್ಥ ಮೈಕ್ ಜಾಗರ್ ಅವರ ಸುದೀರ್ಘ ಕಾಲದ ಗೆಳತಿ ಜೆರ್ರಿ ಹಾಲ್ ಅವರನ್ನು ವಿವಾಹವಾಗಿದ್ದರು.

ಕಳೆದ ವರ್ಷ ದಂತ ನೈರ್ಮಲ್ಯ ತಜ್ಞೆ, ಕನ್ಸರ್ವೇಟಿವ್ ರೇಡಿಯೊ ನಿರೂಪಕಿ ಆಯನ್ ಲೆಸ್ಲಿ ಸ್ಮಿತ್ ಅವರ ಜತೆ ನಿಶ್ಚಿತಾರ್ಥವನ್ನು ಮರ್ಡೋಕ್ ಘೋಷಿಸಿದ್ದರು. ಆದರೆ ಒಂದು ತಿಂಗಳ ಒಳಗಾಗಿ ಉದ್ದೇಶಿತ ವಿವಾಹವನ್ನು ರದ್ದುಪಡಿಸಿರುವುದಾಗಿ ಹೇಳಿಕೆ ನೀಡಿದ್ದರು.

# ಇಸ್ರೇಲ್ ಪ್ರಜೆಗಳಿಗೆ ಮಾಲ್ದೀವ್ಸ್ ಪ್ರವೇಶ ನಿಷೇಧ

**ಇಸ್ರೇಲ್:** ಇಸ್ರೇಲ್‌ನಿಂದ ಫೆಲೆಸ್ತೀನ್, ಗಾಝಾಪಟ್ಟಿಯ ಮೇಲೆ ನಡೆಯುತ್ತಿರುವ ಬಾಂಬ್ ದಾಳಿಗೆ ಪ್ರತಿಕ್ರಿಯೆಯಾಗಿ ಮಾಲ್ದೀವ್ಸ್, ಇಸ್ರೇಲಿ ಪಾಸ್ಪೋರ್ಟ್ ಹೊಂದಿರುವವರು ಮಾಲ್ದೀವ್ಸ್ ಪ್ರವೇಶಿಸುವುದಕ್ಕೆ ನಿಷೇಧ ಹೇರಿದೆ ಎಂದು ವರದಿಯಾಗಿದೆ. ಮಾಲ್ದೀವ್ಸ್ ಅಧ್ಯಕ್ಷ ಮುಹಮ್ಮದ್ ಮುಯಿಝ್ಝು ಅವರು



ಕ್ಯಾಬಿನೆಟ್ ಸಭೆಯಲ್ಲಿ ಈ ನಿಷೇಧವನ್ನು ಜಾರಿಗೊಳಿಸಲು ಅಗತ್ಯವಾದ ಕಾನೂನು ಬದಲಾವಣೆಗಳನ್ನು ಪ್ರಾರಂಭಿಸಲು ನಿರ್ಧರಿಸಿದ್ದಾರೆ ಎಂದು ಹೋಮ್ಲ್ಯಾಂಡ್ ಸೆಕ್ಯುರಿಟಿ ಮತ್ತು ತಂತ್ರಜ್ಞಾನದ ಸಚಿವ ಅಲಿ ಇಹುಸನ್ ಹೇಳಿದ್ದಾರೆ.

ಈ ನಿರ್ಧಾರವನ್ನು ಜಾರಿಗೆ ತರಲು ವಿಶೇಷ ಸಚಿವ ಸಂಪುಟ ಸಮಿತಿಯನ್ನು ರಚಿಸಲಾಗಿದೆ ಎನ್ನಲಾಗುತ್ತಿದೆ. ಈ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುವ, ಮಾಲ್ದೀವ್ಸ್ ಅಧ್ಯಕ್ಷರ ಕಚೇರಿಯು, ಅಧ್ಯಕ್ಷ ಡಾ ಮುಹಮ್ಮದ್ ಮುಯಿಝ್ಝು, ಕ್ಯಾಬಿನೆಟ್ ಶಿಫಾರಸಿನ ನಂತರ, ಇಸ್ರೇಲಿ ಪಾಸ್ಪೋರ್ಟ್ ಗಳ ಮೇಲೆ ನಿಷೇಧವನ್ನು ಹೇರಲು ನಿರ್ಧರಿಸಿದ್ದಾರೆ. ಇಸ್ರೇಲಿ ಪಾಸ್ಪೋರ್ಟ್ ಹೊಂದಿರುವವರು ಮಾಲ್ದೀವ್ಸ್ಗ ಪ್ರವೇಶಿಸುವುದನ್ನು ತಡೆಯಲು ಅಗತ್ಯ ಕಾನೂನುಳಿಗೆ ತಿದ್ದುಪಡಿ ಮಾಡಲಾಗುವುದು. ಇದರ ಮೇಲ್ವಿಚಾರಣೆಗಾಗಿ ಕ್ಯಾಬಿನೆಟ್ ಉಪಸಮಿತಿಯನ್ನು ಸ್ಥಾಪಿಸಲಾಗುವುದು, ಎಂದು ತಿಳಿಸಿದೆ. ಇಸ್ರೇಲ್ ಮತ್ತು ಫೆಲೆಸ್ತೀನ್ ನಡುವೆ ನಡೆಯುತ್ತಿರುವ ಸಂಘರ್ಷದ ನಡುವೆ ಫೆಲೆಸ್ತೀನ್ ಗೆ ಸಹಕಾರ ನೀಡಲು ಮಾಲ್ದೀವ್ಸ್ ವಿಶೇಷ ರಾಯಭಾರಿಯನ್ನು ನೇಮಿಸಲಿದೆ ಎಂದು ತಿಳಿದು ಬಂದಿದೆ.

# ಪಾಕ್ ಮಾಜಿ ಪ್ರಧಾನಿ ಇಮ್ರಾನ್ ಖಾನ್‌ಗೆ ರಿಲೀಫ್

**ಪಾಕಿಸ್ತಾನ:** ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಗೆ ನ್ಯಾಯಾಲಯ ವಿಧ್ವಂಸಕ ಕೃತ್ಯದ ಎರಡು ಆರೋಪಗಳಿಂದ ಖುಲಾಸೆಗೊಳಿಸಿದೆ. ಇಸ್ಲಾಮಾಬಾದ್ನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ಇಮ್ರಾನ್ ಖಾನ್, ಮಾಜಿ ವಿದೇಶಾಂಗ



ಸಚಿವ ಶಾ ಮಹಮೂದ್ ಖುರೇಷಿ, ಸಂವಹನ ಖಾತೆಯ ಮಾಜಿ ಸಚಿವ ಮುರದ್ ಸಯೀದ್ ಮತ್ತು ಇತರ ಪಾಕಿಸ್ತಾನ್ ತೆಹ್ರೀಕ್ ಇನ್ಸಾಫ್ (ಪಿಟಿಐ) ಪಕ್ಷದ ಮುಖಂಡರನ್ನು 'ಹಕೀಕಿ ಆಜಾದಿ' ಜಾಥಾ ವೇಳೆ ನಡೆದಿದ್ದ ವಿಧ್ವಂಸಕ ಕೃತ್ಯಗಳ ಆರೋಪದಿಂದ ಮುಕ್ತಗೊಳಿಸಿದೆ. ಇಮ್ರಾನ್ ಖಾನ್ ಅವರನ್ನು ಅವಿಶ್ವಾಸ ನಿರ್ಣಯ ಮಂಡಿಸುವ ಮೂಲಕ ಪದಚ್ಯುತಗೊಳಿಸಿ, ಶಹಬಾಜ್ ಷರೀಫ್ ಸರ್ಕಾರ ರಚನೆ ಮಾಡಿದ್ದರು. ಈ ವೇಳೆ ಷರೀಫ್ ಅವರ ಮೈತ್ರಿ ಸರ್ಕಾರವನ್ನು ಉರುಳಿಸಲು ಇಮ್ರಾನ್ ಇಸ್ಲಾಮಾಬಾದ್ನಿಂದ ಲಾಹೋರ್ವರೆಗೆ ಜಾಥಾ ಹಮ್ಮಿಕೊಂಡಿದ್ದರು.ಈ ವೇಳೆ ಇಮ್ರಾನ್ ಮತ್ತು ಅವರ ಪಕ್ಷದ ಇತರ 150 ಮಂದಿಯ ವಿರುದ್ಧ ಪೊಲೀಸರು ಪ್ರತ್ಯೇಕ ಪ್ರಕರಣಗಳನ್ನು ದಾಖಲಿಸಿದ್ದರು.

# ಜೈಲು ಶಿಕ್ಷೆಗೆ ಸಿದ್ಧ ಎಂದ ಡೊನಾಲ್ಡ್ ಟ್ರಂಪ್



**ನ್ಯೂಯಾರ್ಕ್:** ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹಶ್ ಮನಿ ಪ್ರಕರಣದಲ್ಲಿ ದೋಷಿ ಎಂದು ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಕೋರ್ಟ್ ಆದೇಶದ ನಂತರ ಮೊದಲ ಬಾರಿಗೆ ಪ್ರಕರಣದ ಕುರಿತು ಪ್ರತಿಕ್ರಿಯಿಸಿರುವ ಟ್ರಂಪ್, ಜೈಲು ಶಿಕ್ಷೆ ಅಥವಾ ಗೃಹ ಬಂಧನ ಶಿಕ್ಷೆ ನಾನು ಸಿದ್ಧನಾಗಿದ್ದೇನೆ ಎಂದು ತಿಳಿಸಿದ್ದಾರೆ. ನಾನು ಸಂವಿಧಾನಕ್ಕಾಗಿ ಹೋರಾಡುತ್ತಿದ್ದೇನೆ. ಶಿಕ್ಷೆಯು ತೀರ್ಪು ಸಾರ್ವಜನಿಕರಿಗೆ ಬ್ರೇಕಿಂಗ್ ಪಾಯಿಂಟ್ ಆಗಿದೆ. ಇದು ನಾಚಿಕೆಗೇಡಿನ ಸಂಗತಿಯಾಗಿದೆ. ವಿಚಾರಣೆಯು ತನಗಿಂತ ತನ್ನ ಕುಟುಂಬದ ಮೇಲೆ ಕಠಿಣವಾಗಿತ್ತು ಎಂದು ಟ್ರಂಪ್ ಹೇಳಿದ್ದಾರೆ. ನಟಿ ಸ್ಟಾರ್ಮಿ ಡೇನಿಯಲ್ ಎಂಬುವರ ಜೊತೆ ಲೈಂಗಿಕ ಸಂಬಂಧ ಹೊಂದಿದ್ದ ಪ್ರಕರಣದಲ್ಲಿ ಟ್ರಂಪ್ ವಿರುದ್ಧ ದಾಖಲಾದ ಎಲ್ಲಾ 34 ಆರೋಪಗಳು ಸಾಬೀತಾಗಿವೆ ಎಂದು ಕೋರ್ಟ್ ತೀರ್ಪು ನೀಡಿತ್ತು. ಜುಲೈ 11 ರಂದು ನ್ಯಾಯಾಲಯ ಶಿಕ್ಷೆಯ ಅವಧಿಯನ್ನು ವಿಧಿಸಲಿದೆ. ಗರಿಷ್ಠ ನಾಲ್ಕು ವರ್ಷಗಳಿಂದ 20 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಬಹುದಾಗಿದೆ.

# ಹಸಿರು ವರ್ಣಕ್ಕೆ ತಿರುಗಿದ ಸಿಹಿನೀರಿನ ಸರೋವರ

**ಕ್ಯಾಲಿಫೋರ್ನಿಯಾ:** ಕ್ಯಾಲಿಫೋರ್ನಿಯಾದ ಅತಿದೊಡ್ಡ ಸಿಹಿನೀರಿನ ಸರೋವರವಾದ ಕ್ಲಿಯರ್ ಲೇಕ್ ಬೃಹತ್ ಪಾಚಿಯ ಹೂಬಿಡುವಿಕೆಯಿಂದಾಗಿ ಸಂಪೂರ್ಣವಾಗಿ ಹಸಿರು ಬಣ್ಣಕ್ಕೆ ತಿರುಗಿದೆ. ಈ ಸರೋವರದ ಬದಲಾದ ರೂಪ ನಾಸಾದ ಉಪಗ್ರಹ ಚಿತ್ರಗಳಲ್ಲಿ ಸೆರೆಯಾಗಿದೆ.ಈ ಸರೋವರ ಸ್ಯಾನ್ ಫ್ರಾನ್ಸಿಸ್ಕೋದಿಂದ ಸುಮಾರು 100 ಮೈಲುಗಳಷ್ಟು ಉತ್ತರ ಕ್ಯಾಲಿಫೋರ್ನಿಯಾದಲ್ಲಿ 68 ಚದರ ಮೈಲುಗಳಷ್ಟು ವ್ಯಾಪಿಸಿದೆ. ಇದು ಮೀನುಗಾರಿಕೆ, ಜಲ ಕ್ರೀಡೆಗಳು ಮತ್ತು ಮನರಂಜನೆಗಾಗಿ ಜನಪ್ರಿಯ ಕೇಂದ್ರವಾಗಿದೆ. ಖ್ಯಾತ ಪ್ರವಾಸೋದ್ಯಮದ ಕೇಂದ್ರವೂ ಆಗಿದೆ. ಆದರೆ, ಸದ್ಯ ಈ ಸರೋವರದಲ್ಲಿ ಹಸಿರು ಪಾಚಿ ಕಟ್ಟಿಕೊಂಡಿದ್ದು, ಅದು ಹೂ ಬಿಟ್ಟು ಇಡೀ ಸರೋವರದ ತುಂಬೆಲ್ಲಾ ಹರಡಿಕೊಂಡಿದೆ. ಈ ರೀತಿ ಹಸಿರು ಪಾಚಿಗೆ ಕಾರಣ ಸೈನೋಬ್ಯಾಕ್ಟೀರಿಯಾ ಆಗಿರಬಹುದು. ಇದನ್ನು ನೀಲಿ–ಹಸಿರು ಪಾಚಿ ಎಂದೂ ಕರೆಯುತ್ತಾರೆ, ಜೊತೆಗೆ ಇತರ ರೀತಿಯ ಫೈಟೊಪ್ಲಾಂಕ್ಟನ್ಗಳು ಕಾರಣ ಇರಬಹುದು ಎಂದು ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ.

ಇನ್ನು ಸರೋವರದಲ್ಲಿ ಯಾರೂ ಇಳಿಯದಂತೆ ಹಾಗೂ ಸಾಕು ಪ್ರಾಣಿಗಳನ್ನು ಸರೋವರದ ನೀರಿನಿಂದ ದೂರ ಇರಿಸುವಂತೆ ಸ್ಥಳೀಯ ಸಾರ್ವಜನಿಕ ಆರೋಗ್ಯ ಅಧಿಕಾರಿಗಳು ಸಂದರ್ಶಕರಿಗೆ ಎಚ್ಚರಿಕೆ ನೀಡಿದ್ದಾರೆ.



# ಮತ್ತೆ ಅಧಿಕಾರದ ಚುಕ್ಕಾಣಿ ಹಿಡಿಯುವ ನಿರೀಕ್ಷೆಯಲ್ಲಿ ಬಿಜೆಪಿ




**ದೆಹಲಿ:** 2024ರ ಲೋಕಸಭಾ ಚುನಾವಣೆ ಮುಗಿದಿದ್ದು, ಈ ಚುನಾವಣೆಯಲ್ಲಿ ಯಾವ ಪಕ್ಷ ಗೆಲುವು ಸಾಧಿಸಬಹುದು, ಯಾರು ಅಧಿಕಾರ ವಹಿಸಿಕೊಳ್ಳಲಿದ್ದಾರೆ ಎಂಬ ಕುತೂಹಲಕ್ಕೂ ಎಕ್ಸಿಟ್ ಪೋಲ್ಗಳು ಉತ್ತರ ನೀಡಿವೆ. ಕೇಂದ್ರದಲ್ಲಿ 3ನೇ ಬಾರಿ ಎನ್ಡಿಎ ಅಧಿಕಾರಕ್ಕೆ ಬರುವುದು ಸ್ಪಷ್ಟವಾಗಿದೆ.

ಇದರೊಂದಿಗೆ ಮತ್ತೊಮ್ಮೆ ಮೋದಿ ಗದ್ದುಗೆ ಏರಲು ಸಿದ್ಧರಾಗುತ್ತಿದ್ದಾರೆ. ಮೋದಿಯೇ ಈ ಬಾರಿಯೂ ಪ್ರಧಾನಿ ಎಂಬ ಮಾತುಗಳು ಕೇಳಿ ಬರುತ್ತಿವೆ. ಕಳೆದ ಎರಡು ಅವಧಿಯಲ್ಲಿ ಹಲವಾರು ಗುರಿಗಳನ್ನು ಇರಿಸಿಕೊಂಡು ಆ ಗುರಿಗಳಂತೆ ಸಾಗಿ ದೇಶವನ್ನು ಅಭಿವೃದ್ಧಿ ಪಥದತ್ತ ಕೊಂಡ್ಯೋಯುತ್ತಿರುವ ಮೋದಿ ಈ ಬಾರಿಯು ಮೊದಲ 100 ದಿನಗಳ ಗುರಿಯನ್ನು ಈಗಾಗಲೇ ಸಿದ್ಧಪಡಿಸಿದ್ದಾರೆ.

ಕಳೆದ ಎರಡು ಬಾರಿ ಅಧಿಕಾರಕ್ಕೆ ಬಂದಾಗಲೂ ಮೋದಿ 100 ದಿನಗಳ ಗುರಿ ಇರಿಸಿಕೊಂಡೇ ಅಧಿಕಾರ ಆರಂಭಿಸಿದ್ದರು. ಈ ಬಾರಿ ವಿಶೇಷವಾಗಿ 125 ದಿನಗಳ ಗುರಿಯನ್ನು ಇರಿಸಿಕೊಂಡಿದ್ದಾರೆ. ಅದರಲ್ಲಿ 25 ದಿನಗಳನ್ನು ವಿಶೇಷವಾಗಿ ಯುವಕರಿಗೆಂದೇ ಮೀಸಲಿಟ್ಟಿದ್ದಾರೆ. ಈ ಬಾರಿ ಅಧಿಕಾರಕ್ಕೆ ಬಂದ ಮುಂದಿನ 100 ದಿನಗಳಿಗೆ ಮೋದಿ ಏನೆಲ್ಲಾ ಯೋಜನೆಗಳನ್ನು ಹಾಕಿಕೊಂಡಿರಬಹುದು ಎನ್ನುವುದರ ಬಗ್ಗೆ ನಿರೀಕ್ಷೆಗಳು ಹೆಚ್ಚಾಗಿವೆ. ಕಳೆದ ಬಾರಿಯಂತೆ ಈ ಬಾರಿಯೂ ಅತ್ಯುತ್ತಮ ಯೋಜನೆಗಳ ಮೂಲಕ ಮೊದಲ 100 ದಿನಗಳಿಗೆ ಯೋಜನೆ ರೂಪಿಸಿದ್ದಾರೆ.

2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಹಿಂದಿನ ಸಮರ್ಥನೆಗಳನ್ನು ಈ ಬಾರಿ ಪುನರುಚ್ಚರಿಸಿದ್ದಾರೆ ನರೇಂದ್ರ ಮೋದಿ. ಆ ಮೈಲಿಗಲ್ಲನ್ನ ಮನಸ್ಸಿನಲ್ಲಿಟ್ಟುಕೊಂಡು ಕೆಲಸ ಮಾಡುತ್ತಿದ್ದೇನೆ ಎಂದು ಹೇಳಿದ್ದಾರೆ.

ಎರಡು ವರ್ಷಗಳಿಂದ ನಾನು 2047 ಅನ್ನು ಗಮನದಲ್ಲಿಟ್ಟುಕೊಂಡು ಕೆಲಸ ಮಾಡುತ್ತಿದ್ದೇನೆ. ಅದಕ್ಕಾಗಿ ನಾನು ದೇಶದಾದ್ಯಂತ ಜನರ ಅಭಿಪ್ರಾಯಗಳನ್ನು ಸಂಗ್ರಹಿಸಿದ್ದೇನೆ, 2047ರ ವೇಳೆಗೆ ಭಾರತವು ಅಭಿವೃದ್ಧಿ ಹೊಂದಿರ ದೇಶಗಳ ಸಾಲಿನಲ್ಲಿ ಇರುತ್ತದೆ ಎಂದು ಮೋದಿ ಮತ್ತೆ ಹೇಳಿದ್ದಾರೆ.

# ಭಾರತದ ವಿರುದ್ಧ ಖಲಿಸ್ತಾನಿ ಉಗ್ರ ಪನ್ನುನ್ ಮತ್ತೆ ಕ್ಯಾತೆ




**ಟೊರೊಂಟೋ:** ಆಪರೇಷನ್ ಬ್ಲೂಸ್ಟಾರ್ಗೆ 40 ವರ್ಷವಾಗುತ್ತಿರುವ ಬೆನ್ನಲ್ಲೇ ಕೆನಡಾದಲ್ಲಿನ ಭಾರತೀಯ ರಾಯಭಾರ ಕಚೇರಿಗಳನ್ನು ''ಲಾಕ್ಡೌನ್' ಮಾಡಲು ಖಲಿಸ್ತಾನಿ ಪರ, ಪ್ರತ್ಯೇಕತಾವಾದಿ ಸಂಘಟನೆ ಸಿಕ್ಸ್‌ಫಾರ್ ಜಸ್ಟೀಸ್(ಎಸ್ಎಫ್ಜೆ) ಕರೆ ನೀಡಿದೆ. ಎಸ್ಎಫ್ಜೆ ಮುಖಂಡ, ಖಲಿಸ್ತಾನಿ ಉಗ್ರ ಪನ್ನುನ್ ಒಟ್ಟಾವದಲ್ಲಿರುವ ಹೈಕಮಿಷನ್, ವ್ಯಾಂಕೋವರ್, ಟೊರೊಂಟೋದಲ್ಲಿನ ದೂತವಾಸ ಗಳನ್ನು ಜೂ.6ರಂದು ಲಾಕ್ಡೌನ್ ಮಾಡುವಂತೆ ಕರೆ ನೀಡಿದ್ದಾನೆ.

ಇದೇ ವೇಳೆ, ಮಾಜಿ ಪ್ರಧಾನಿ ಇಂದಿರಾ ಗಾಂಧಿ ಹತ್ಯೆಯ ಬಳಿಕ ಭಾರತದಲ್ಲಿ 1984ರಲ್ಲಿ ನಡೆದ ಸಿಕ್ಖ್ ವಿರೋಧಿ ದಂಗೆಯನ್ನು ''ನರಮೇಧ' ಎಂದು ಅಧಿಕೃತವಾಗಿ ಘೋಷಿಸುವಂತೆ ಕೆನಡಾದ ನ್ಯೂ ಡೆಮೊಕ್ರಟಿಕ್ ಪಾರ್ಟಿ(ಎನ್ಡಿಪಿ) ಸರಕಾರಕ್ಕೆ ಮನವಿ ಮಾಡುವುದಾಗಿ ಹೇಳಿದೆ.

1984ರ ಜೂ.6ರಂದು ಅಮೃತ್ಸರದ ಸ್ವರ್ಣಮಂದಿರದೊಳಗೆ ಸೇನೆ ನುಗ್ಗಿ ಖಲಿಸ್ತಾನಿಗಳನ್ನು ಹೊರಗಟ್ಟಿತ್ತು. 2023ರ ಜೂ.18 ರಂದು ನಡೆದ ನಿಜ್ಜರ್ ಹತ್ಯೆಯಲ್ಲಿ ಭಾರತದ ಏಜೆಂಟ್ಗಳ ಕೈವಾಡವಿದೆ ಎಂದು ಕೆನಡಾ ಪ್ರಧಾನಿ ಟ್ರಾಡೋ ಹೇಳಿದ ಬಳಿಕ ಕೆನಡಾದಲ್ಲಿ ಪ್ರತಿಭಟನೆಗಳು ಆರಂಭವಾಗಿವೆ.

# ಕ್ಯಾನ್ಸರ್‌ಗೆ ಹೊಸ ಔಷಧ ಕಂಡುಹಿಡಿದ ಬ್ರಿಟನ್

**ಬ್ರಿಟನ್:** ಬ್ರಿಟನ್ ನ ವೈದ್ಯರ ತಂಡವು ಗೆಡ್ಡೆಗಳನ್ನು ಕರಗಿಸುವ, ಕರುಳಿನ ಕ್ಯಾನ್ಸರ್ಗೆ ಚಿಕಿತ್ಸೆ ನೀಡುವ ಸಾಧ್ಯತೆಗಳನ್ನು ಹೆಚ್ಚಿಸುವ ಮತ್ತು ಬಹುಶಃ ಶಸ್ತ್ರಚಿಕಿತ್ಸೆಯ ಮಧ್ಯಸ್ಥಿಕೆಯನ್ನು ಬದಲಾಯಿಸುವ ಚಿಕಿತ್ಸೆಯನ್ನು ಕಂಡುಹಿಡಿದಿದೆ. ವೈದ್ಯರು ಪೆಂಬ್ರೊಲಿಜುಮ್ಯಾಬ್ ಔಷಧವನ್ನು ಬಳಸಿಕೊಂಡು ಕ್ಲಿನಿಕಲ್




ಪ್ರಯೋಗಗಳನ್ನು ನಡೆಸಿದರು, ಇದು ನಿರ್ದಿಷ್ಟ ಪ್ರೋಟೀನ್ ಅನ್ನು ಗುರಿಯಾಗಿಸುತ್ತದೆ ಮತ್ತು ಪ್ರತಿರಕ್ಷಣಾ ಕೋಶಗಳಿಂದ ಅದನ್ನು ನಿರ್ಬಂಧಿಸುತ್ತದೆ, ನಂತರ ಅದು ಕ್ಯಾನ್ಸರ್ ಕೋಶಗಳನ್ನು ಹುಡುಕುತ್ತದೆ ಮತ್ತು ಅವುಗಳನ್ನು ನಾಶಪಡಿಸುತ್ತದೆ. ಕೀಮೋಥೆರಪಿಯ ಬದಲು ಶಸ್ತ್ರಚಿಕಿತ್ಸೆಗೆ ಮೊದಲು ಔಷಧಿಯನ್ನು ನೀಡುವುದರಿಂದ ಕ್ಯಾನ್ಸರ್ನಿಂದ ಗುಣಮುಖರಾದ ರೋಗಿಗಳ ಸಂಖ್ಯೆಯಲ್ಲಿ ಗಮನಾರ್ಹ ಹೆಚ್ಚಳಕ್ಕೆ ಕಾರಣವಾಯಿತು ಎಂದು ಕ್ಲಿನಿಕಲ್ ಪ್ರಯೋಗವು ಕಂಡುಹಿಡಿದಿದೆ ಎಂದು ದಿ ಗಾರ್ಡಿಯನ್ ವರದಿ ಮಾಡಿದೆ. ಯೂನಿವರ್ಸಿಟಿ ಕಾಲೇಜ್ ಲಂಡನ್, ಯೂನಿವರ್ಸಿಟಿ ಕಾಲೇಜ್ ಲಂಡನ್ ಹಾಸ್ಪಿಟಲ್, ಕ್ರಿಸ್ಟಿ ಎನ್‌ಎಚ್‌ಎಸ್ ಫೌಂಡೇಶನ್ ಟ್ರಸ್ಟ್, ಸೇಂಟ್ ಜೇಮ್ಸ್ ಯೂನಿವರ್ಸಿಟಿ ಹಾಸ್ಪಿಟಲ್, ಸೌತಾಂಪ್ಟನ್ ಯೂನಿವರ್ಸಿಟಿ ಹಾಸ್ಪಿಟಲ್ ಮತ್ತು ಗ್ಲ್ಯಾಸ್ಗೋ ವಿಶ್ವವಿದ್ಯಾಲಯ ಈ ಅಧ್ಯಯನದ ಮೇಲ್ವಿಚಾರಣೆ ನಡೆಸಿದವು. ಕ್ರಿಸ್ಟಿ ಫೌಂಡೇಶನ್ನ ಕನ್ಸಲ್ಟೆಂಟ್ ಕ್ಲಿನಿಕಲ್ ಆಂಕೊಲಾಜಿಸ್ಟ್ ಪ್ರೊಫೆಸರ್ ಮಾರ್ಕ್ ಸಾಂಡರ್ಸ್ ಹೀಗೆ ಹೇಳಿದರು: ಪ್ರಯೋಗದ ಫಲಿತಾಂಶಗಳು ತುಂಬಾ ಪ್ರಭಾವಶಾಲಿಯಾಗಿದ್ದವು, ಶಸ್ತ್ರಚಿಕಿತ್ಸೆಗೆ ಮುಂಚಿನ ಇಮ್ಯುನೊಥೆರಪಿ ಈ ರೀತಿಯ ಕ್ಯಾನ್ಸರ್ ರೋಗಿಗಳ ಚಿಕಿತ್ಸೆಯಲ್ಲಿ ಆಮೂಲಾಗ್ರ ಬದಲಾವಣೆಯಾಗಬಹುದು. ಫಲಿತಾಂಶವು ಉತ್ತಮವಾಗಿರುವುದಲ್ಲದೆ, ಇದು ರೋಗಿಗಳನ್ನು ಹೆಚ್ಚು ಸಾಂಪ್ರದಾಯಿಕ ಕೀಮೋಥೆರಪಿಯಿಂದ ಉಳಿಸುತ್ತದೆ, ಇದು ಸಾಮಾನ್ಯವಾಗಿ ಅಡ್ಡಪರಿಣಾಮಗಳನ್ನು ಹೊಂದಿರುತ್ತದೆ.

# ಮೆಕ್ಸಿಕೋದಲ್ಲಿನ್ನು ಮಹಿಳಾ ದರ್ಬಾರ್!



**ಮೆಕ್ಸಿಕೋ:** ಕ್ಲೌಡಿಯಾ ಶೀನ್ಬಾಮ್ ಮೆಕ್ಸಿಕೋದ ಮೊದಲ ಮಹಿಳಾ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಎಕ್ಸಿಟ್ ಪೋಲ್‌ಗಳು ತಿಳಿಸಿವೆ. ಸೋಮವಾರ ಚುನಾವಣಾ ಅಧಿಕಾರಿಗಳು ಬಿಡುಗಡೆ ಮಾಡಿದ ಎಕ್ಸಿಟ್ ಪೋಲ್ ಪ್ರಕಾರ, ಮೆಕ್ಸಿಕೋದ ಮೊದಲ ಮಹಿಳಾ ಪ್ರಧಾನಿಯಾಗಿ ಕ್ಲಾಡಿಯಾ ಆಯ್ಕೆಯಾಗೋದು ಪಕ್ಕಾ ಭವಿಷ್ಯ ನುಡಿದಿದೆ. ಕ್ಲೌಡಿಯಾ ಶೀನ್ಬಾಮ್ ಅವರು ಪ್ರಮುಖ ವಿರೋಧ ಪ್ರತಿಸ್ಪರ್ಧಿಗಿಂತ 29% ಅವರು ಮುನ್ನಡೆ ಸಾಧಿಸಿದ್ದಾರೆ. ಈ ಬಗ್ಗೆ ಮೊರೆನಾ ಪಕ್ಷದ ನಾಯಕರು ಮಾತನಾಡಿ, ನಾನು ಮೆಕ್ಸಿಕೋದ ಮೊದಲ ಮಹಿಳಾ ಅಧ್ಯಕ್ಷನಾಗುತ್ತೇನೆ ಎಂದು ಸಂತಸ ವ್ಯಕ್ತಪಡಿಸಿದರು.

ಆಡಳಿತ ಮೊರೆನಾ ಪಕ್ಷದ ನಾಯಕ, ನಿರ್ಗಮಿತ ಅಧ್ಯಕ್ಷ ಆಂಡ್ರೆಸ್ ಮ್ಯಾನುಯೆಲ್ ಲೋಪೆಜ್ ಒಬ್ರಡಾರ್ ಅವರು ಗೆಲುವಿಗಾಗಿ ಅವರನ್ನು ಅಭಿನಂದಿಸಿದ್ದಾರೆ.

# ರಷ್ಯಾದ ಈ ಬೆಡಗಿಗೆ ಭಾರತೀಯ ವರನೇ ಬೇಕಂತೆ



**ರಷ್ಯಾ:** ಮಾಸ್ಕೋದ ಮಹಿಳೆಯೊಬ್ಬಳು ಭಾರತೀಯ ಪತಿಯನ್ನು ಹುಡುಕುತ್ತಿದ್ದೇನೆ ಎಂದು ಪೋಸ್ಟರ್ ಹಿಡಿದಿರುವ ವಿಡಿಯೊ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಮಾಸ್ಕೋದ ದಿನಾರಾ ಎಂಬ ರಷ್ಯಾದ ಮಹಿಳೆಯೊಬ್ಬಳು ಇತ್ತೀಚೆಗೆ ಮಾಲ್ನ ಎದುರು ಭಾರತೀಯ ವರನನ್ನುಹುಡುಕುತ್ತಿದ್ದೇನೆ ಎಂಬ ಪೋಸ್ಟರ್ ಅನ್ನು ಹಿಡಿದಿದ್ದರು.

ಈ ವೇಳೆ ದಿನಾರಾ ಕೆಂಪು ಸೀರೆಯನ್ನುಟ್ಟು ಪುರುಷಗೊಂಬೆಗಳ ಪಕ್ಕ ನಿಂತಿದ್ದರು. ಈ ವಿಡಿಯೊವನ್ನು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿಕೊಂಡಿದ್ದಾರೆ.

ನನಗೆ ಭಾರತೀಯ ಯುವಕನನ್ನು ಮದುವೆಯಾಗುವ ಆಸಕ್ತಿಯಿದೆ. ಭಾರತೀಯ ವರನನ್ನು ಹುಡುಕಿಕೊಡಿ ಎಂದು ಮನವಿ ಮಾಡಿದ್ದಾಳೆ.

# ಇಸ್ರೇಲ್ ವೈಮಾನಿಕ ದಾಳಿಯಲ್ಲಿ ಇಬ್ಬರು ಬಲಿ



**ಬೈರೂತ್:** ದಕ್ಷಿಣ ಲೆಬನಾನ್ನ ನಗರದ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಇಬ್ಬರು ಮೃತಪಟ್ಟಿರುವುದಾಗಿ ಉನ್ನತ ಮೂಲಗಳನ್ನು ಉಲ್ಲೇಖಿಸಿ ಸರಕಾರಿ ಸ್ವಾಮ್ಯದ 'ನ್ಯಾಷನಲ್ ನ್ಯೂಸ್ ಏಜೆನ್ಸಿ(ಎನ್ಎನ್ಎ) ಸೋಮವಾರ ವರದಿ ಮಾಡಿದೆ. ಇಸ್ರೇಲ್ ಗಡಿಯ ಸಮೀಪದಲ್ಲಿರುವ ನಖುರಾ ನಗರದಲ್ಲಿ ಬೈಕನ್ನು ಗುರಿಯಾಗಿಸಿ ನಡೆದ ದಾಳಿಯಲ್ಲಿ ಓರ್ವ ಮೃತಪಟ್ಟಿದ್ದು ಮತ್ತೊಬ್ಬ ಗಾಯಗೊಂಡಿದ್ದಾನೆ.

ಝುರಿಯೆಹ್ ನಗರದಲ್ಲಿ ನಡೆದ ಮತ್ತೊಂದು ಪ್ರಕರಣದಲ್ಲಿ ಕಾರನ್ನು ಗುರಿಯಾಗಿಸಿ ಡ್ರೋನ್ ದಾಳಿ ನಡೆದಿದ್ದು ಓರ್ವ ಮೃತಪಟ್ಟಿದ್ದಾನೆ ಎಂದು ವರದಿ ಹೇಳಿದೆ. ಈ ಮಧ್ಯೆ, ಇಸ್ರೇಲ್ ಸೇನೆ ನಡೆಸಿದ ದಾಳಿಗೆ ಪ್ರತಿಯಾಗಿ ಉತ್ತರ ಇಸ್ರೇಲ್ನಲ್ಲಿ ಸೇನಾ ನೆಲೆಯನ್ನು ಗುರಿಯಾಗಿಸಿ ಸ್ಫೋಟಕಗಳು ತುಂಬಿದ್ದ ಡ್ರೋನ್ಗಳನ್ನು ಪ್ರಯೋಗಿಸಿರುವುದಾಗಿ ಲೆಬನಾನ್ನಲ್ಲಿ ನೆಲೆ ಹೊಂದಿರುವ ಹಿಜ್ಬುಲ್ಲಾ ಸಶಸ್ತ್ರ ಹೋರಾಟಗಾರರ ಗುಂಪು ಹೇಳಿಕೆ ನೀಡಿದೆ.

## ಏರ್ ಶೋ ವೇಳೆ ಪರಸ್ಪರ ಡಿಕ್ಕಿ ಹೊಡೆದುಕೊಂಡ ವಿಮಾನಗಳು

**ಪೋರ್ಚುಗಲ್:** ದಕ್ಷಿಣ ಪೋರ್ಚುಗಲ್‌ನಲ್ಲಿ ಏರ್ ಶೋ ನಡೆಯುತ್ತಿದ್ದ ವೇಳೆ ಎರಡು ವಿಮಾನಗಳು ಪರಸ್ಪರ ಡಿಕ್ಕಿ ಹೊಡೆದುಕೊಂಡು ನೆಲಕ್ಕಪ್ಪಳಿಸಿದ ಪರಿಣಾಮ ಓರ್ವ ಪೈಲಟ್ ಸಾವನ್ನಪ್ಪಿ ಮತ್ತೊರ್ವ ತೀವ್ರವಾಗಿ ಗಾಯಗೊಂಡಿದ್ದಾನೆ. ಬೆಜಾ ಏರ್ ಶೋ ಸಂದರ್ಭದಲ್ಲಿ ಆರು ವಿಮಾನಗಳು ಹಾರಾಟ ನಡೆಸುತ್ತಿದ್ದು, ಈ ವೇಳೆ ನಿಯಂತ್ರಣ ಕಳೆದುಕೊಂಡ ಒಂದು ವಿಮಾನ ಅಡ್ಡಾದಿಡ್ಡಿ ಹಾರಲಾರಂಭಿಸಿದೆ. ನಂತರ ಹಾರಾಟದಲ್ಲಿದ್ದ ಮತ್ತೊಂದು ವಿಮಾನಕ್ಕೆ ನೇರವಾಗಿ ಡಿಕ್ಕಿ ಹೊಡೆದಿದ್ದು, ಇದರ ಪರಿಣಾಮ ಎರಡು ವಿಮಾನಗಳು ನೆಲಕ್ಕೆ ಉರುಳಿವೆ. ಈ ಅಪಘಾತದಿಂದಾಗಿ ಒಂದು ವಿಮಾನದ ಪೈಲೆಟ್ ಸಾವನ್ನಪ್ಪಿದ್ದು ಗಂಭೀರವಾಗಿ ಗಾಯಗೊಂಡಿರುವ ಮತ್ತೊರ್ವನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಘಟನೆ ನಡೆದ ಬಳಿಕ ಏರ್ ಶೋ ಅನ್ನು ಸ್ಥಗಿತಗೊಳಿಸಲಾಗಿದೆ.



# ಪಾಕಿಸ್ತಾನ: ಗ್ಯಾಸ್ ಸಿಲಿಂಡರ್ ಸ್ಫೋಟ



**ಪಾಕಿಸ್ತಾನ:** ಲಿಕ್ವಿಡ್ ಪೆಟ್ರೋಲಿಯಂ ಗ್ಯಾಸ್ಸಿಲಿಂಡರ್ ತುಂಬುವ ಅಂಗಡಿಯಲ್ಲಿ ಸ್ಫೋಟ ಸಂಭವಿಸಿದ ಪರಿಣಾಮ 12 ಮಂದಿಸಜೀವ ದಹನವಾಗಿರುವ ಘಟನೆ ಪಾಕಿಸ್ತಾನದ ಹೈದರಾಬಾದ್‌ನ ಪ್ರೀತಾಬಾದ್ ಪ್ರದೇಶದಲ್ಲಿ ನಡೆದಿದೆ.

ನೀರನ್ಕೋಟ್‌ನ ಯುಸಿ –8 ರ ಮೀರ್ ನಬಿ ಬಕ್ಸ್ ಟೌನ್ ರಸ್ತೆಯಲ್ಲಿರುವ ಝೂಚಾ ಬಚಾ ಆಸ್ಪತ್ರೆಯ ನೆಲ ಮಹಡಿಯಲ್ಲಿರುವ ಎಲ್ಪಿಜಿ ಸಿಲಿಂಡರ್ ತುಂಬುವ ಅಂಗಡಿಯಲ್ಲಿ ಸ್ಫೋಟ ಸಂಭವಿಸಿದೆ.

ಘಟನೆಯಲ್ಲಿ 12 ಮಂದಿ ಮೃತಪಟ್ಟಿದ್ ಉದ 11 ಮಂದಿ ಗಾಯಗೊಂಡಿದ್ದಾರೆ. ಗಾಯಾಳುಗಳಿಗೆ ಕರಾಚಿ ಸಿವಿಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳಲ್ಲಿ ಏಳು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಲಿಯಾಖತ್ ಯೂನಿವರ್ಸಿಟಿ ಹಾಸ್ಪಿಟಲ್ ನಲ್ಲಿ ತುರ್ತು ಚಿಕಿತ್ಸೆ ಪಡೆದ ನಂತರ ಕನಿಷ್ಠ 60 ಜನರು, ಮುಖ್ಯವಾಗಿ ಯುವಕರು ದೊಡ್ಡ ಸುಟ್ಟ ಗಾಯಗಳಿಂದ ಬಳಲುತ್ತಿದ್ದಾರೆ ಮತ್ತು ಕರಾಚಿಗೆ ಸಾಗಿಸಲಾಗಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಒಂದೇ ಟೇಕ್‌ನಲ್ಲಿ ನಿರ್ಮಾಣ ಆಯ್ತು 'ಯಂಗ್ ಮ್ಯಾನ್'




ಚಿತ್ರರಂಗದಲ್ಲಿ ಒಂದಿಲ್ಲೊಂದು ಪ್ರಯೋಗಗಳು ಆಗುತ್ತಲೇ ಇರುತ್ತವೆ. ಏನಾದರೂ ಡಿಫರೆಂಟ್ ಆಗಿ ಮಾಡಬೇಕು ಎಂಬ ತವಕದಲ್ಲಿ ಸಿನಿಮಾ ಮಂದಿ ಇರುತ್ತಾರೆ. ಈ ಮೊದಲು ಕನ್ನಡ ಚಿತ್ರರಂಗದಲ್ಲಿ ಶಂಕರ್ ನಾಗ್ ಅಭಿನಯದ 'ಇದು ಸಾಧ್ಯ' ಸಿನಿಮಾ ಕೇವಲ 36 ಗಂಟೆಯಲ್ಲಿ ಚಿತ್ರೀಕರಣ ಮುಗಿಸಿ ದಾಖಲೆ ಬರೆದಿತ್ತು. ಎಸ್. ನಾರಾಯಣ್ ಅವರ ನಿರ್ದೇಶನದಲ್ಲಿ ಬಂದ 'ದಕ್ಷ' ಸಿನಿಮಾವನ್ನು ಸಿಂಗಲ್ ಟೇಕ್‌ನಲ್ಲಿ ಚಿತ್ರಿಸಲಾಗಿತ್ತು. ಈಗ ಅದೇ ರೀತಿ ಕನ್ನಡ ಚಿತ್ರರಂಗದಲ್ಲಿ ಇನ್ನೊಂದು ಸಿಂಗಲ್ ಟೇಕ್ ಪ್ರಯತ್ನ ಆಗಿದೆ. ಆ ಬಗ್ಗೆ ಇಲ್ಲಿದೆ ಮಾಹಿತಿ..



ಹೊಸಬರ 'ಯಂಗ್ ಮ್ಯಾನ್' ಸಿನಿಮಾ ಕೂಡ ಸಿಂಗಲ್ ಟೇಕ್‌ನಲ್ಲಿ ಚಿತ್ರಿತವಾಗಿದೆ. ಉತ್ಸಾಹಿ ತಂಡದವರು ಸೇರಿಕೊಂಡು ಈ ಸಿನಿಮಾ ಮಾಡಿದ್ದಾರೆ. ಜೂನ್ 7ರಂದು ಈ ಸಿನಿಮಾ ಬಿಡುಗಡೆ ಆಗಲಿದೆ. ಅಷ್ಟಕ್ಕೂ ಈ ಸಿನಿಮಾ ತಂಡದವರು ಒಂದೇ ಟೇಕ್‌ನಲ್ಲಿ ಶೂಟಿಂಗ್ ಮಾಡಲು ಕಾರಣ ಏನು? ಸಿನಿಮಾದ ಕಹಾನಿ ಏನು ಎಂಬುದನ್ನು ಚಿತ್ರಮಂದಿರದಲ್ಲಿಯೇ ನೋಡಿ ತಿಳಿಯಬೇಕು.

'ಯಂಗ್ ಮ್ಯಾನ್' ಸಿನಿಮಾಗೆ ಮುತ್ತುರಾಜ್ ಅವರು ನಿರ್ದೇಶನ ಮಾಡಿದ್ದಾರೆ. ವಿಜಯಲಕ್ಷ್ಮಿ ರಾಮೇಗೌಡ ಅವರು ಬಂಡವಾಳ ಹೂಡಿದ್ದಾರೆ. ಈ ಸಿನಿಮಾಗೆ ಕ್ರಿಯೇಟಿವ್ ಹೆಡ್ ಆಗಿ ಮುರಳಿ ಎಸ್. ವೈ. ಅವರು ಕೆಲಸ ಮಾಡಿದ್ದಾರೆ. ಲೋಕಿ ಅವರು ಸಂಗೀತ ನಿರ್ದೇಶನ ಮಾಡಿದ್ದಾರೆ. ನಾಗರಾಜ್ ವೀನಸ್ ಮೂರ್ತಿ ಅವರು ಛಾಯಾಗ್ರಹಣದ ಜವಾಬ್ದಾರಿ ನಿಭಾಯಿಸಿದ್ದಾರೆ.

ಡಿಎಸ್‌ಕೆ ಸಿನಿಮಾಸ್ ಸಂಸ್ಥೆಯ ಮುಖ್ಯಸ್ಥರಾದ ಸುನಿಲ್ ಕುಂಬಾರ್ ಅವರು 'ಯಂಗ್ ಮ್ಯಾನ್' ಸಿನಿಮಾವನ್ನು ರಾಜ್ಯಾದ್ಯಂತ ಬಿಡುಗಡೆ ಮಾಡುತ್ತಿದ್ದಾರೆ. ಈ ಚಿತ್ರದಲ್ಲಿ ದೇಶಪ್ರೇಮದ ಕುರಿತಾದ ಕಥಾಹಂದರ ಇರಲಿದೆ. ಸುನೀಲ್ ಗೌಡ, ಹರೀಶ್ ಆಚಾರ್ಯ, ರಾಶಿಕಾ ಕರಾವಳಿ, ಶ್ರುತಿ ಗೌಡ, ಆನಂದ್ ಕುಮಾರ್, ಋಷಿ ಅನಿತಾ, ನಯನಾ ಪುಟ್ಟಸ್ವಾಮಿ, ತನುಜಾ, ಜಯರಾಮ್, ಅನುಕುಮಾರ್ ಮುಂತಾದ ಕಲಾವಿದರು ಈ ಸಿನಿಮಾದಲ್ಲಿ ನಟಿಸಿದ್ದಾರೆ.

# ಮಾರ್ಟಿನ್, ದೇವರ ಅಖಾಡಕ್ಕೆ ತಲೈವ ಎಂಟ್ರಿ

ಈ ವರ್ಷದ ದಸರಾ ಹಬ್ಬಕ್ಕೆ ಸ್ಯಾಂಡಲ್‌ವುಡ್‌ನ ಹೈವೋಲ್ಟೇಜ್ ಸಿನಿಮಾ 'ಮಾರ್ಟಿನ್' ತೆರೆಗಪ್ಪಳಿಸೋಕೆ ಸಜ್ಜಾಗಿ ನಿಂತಿದೆ. ಮತ್ತೊಂದು ಕಡೆ ಟಾಲಿವುಡ್‌ನ ಯಂಗ್ ಟೈಗರ್ ಜ್ಯೂ.ಎನ್‌ಟಿಆರ್ ನಟನೆಯ ಮೋಸ್ಟ್ ಅವೈಟೆಡ್ ಸಿನಿಮಾ 'ದೇವರ' ಚಿತ್ರ ಕೂಡ ಅಕ್ಟೋಬರ್ 10ರಂದು ಐದು ಭಾಷೆಯಲ್ಲಿ ರಿಲೀಸ್ ಆಗುತ್ತಿದೆ. ಇದೀಗ ಕಾಲಿವುಡ್‌ನಿಂದಲೂ ತಲೈವ ತಮ್ಮ ಅಭಿಮಾನಿ ಬಳಗಕ್ಕೆ ಬಿಗ್ ಸರ್ಪ್ರೈಸ್ ಒಂದನ್ನ ನೀಡಿದ್ದಾರೆ.






ಹೌದು, ಒಂದು ಕಡೆ 'ದೇವರ' ಅಕ್ಟೋಬರ್ 10ಕ್ಕೆ ತೆರೆಕಾಣ್ತಿದೆ. ಮತ್ತೊಂದೆಡೆ 'ಮಾರ್ಟಿನ್' ಚಿತ್ರ ಅಕ್ಟೋಬರ್ 11ಕ್ಕೆ ಕೇವಲ ಒಂದು ದಿನದ ಅಂತರದಲ್ಲಿ ಸೌತ್‌ನ ಇಬ್ಬರು ಬಿಗ್ ಸ್ಟಾರ್ಸ್ ಸಿನಿಮಾಗಳು ಚಿತ್ರಮಂದಿರಕ್ಕೆ ಲಗ್ಗೆ ಇಡುತ್ತಿವೆ ಅನ್ನುವ ಸುದ್ದಿ ಭಾರೀ ಸದ್ದು ಮಾಡುತ್ತಿದೆ. ಹೀಗಿರುವಾಗಲೇ ಮತ್ತೊಂದು ಬಿಗ್ ಸರ್ಪ್ರೈಸ್ ತಲೈವಾ ಕಡೆಯಿಂದ ಸಿಕ್ಕಿದೆ. ರಜನಿಕಾಂತ್ ನಟನೆಯ ವೆಟ್ಟೈಯಾನ್ ಸಿನಿಮಾ ಇದೇ ಅಕ್ಟೋಬರ್ 10ಕ್ಕೆ ದಸರಾ ಹಬ್ಬದ ಉಡುಗೊರೆಯಾಗಿ ಬೆಳ್ಳಿ ಪರದೆ ಮೇಲೆ ಆಟವನ್ನ ಶುರು ಮಾಡಲಿದೆಯಂತೆ. ಹೀಗಂತ ಖುದ್ದು ರಜನಿಕಾಂತ್ ಹೇಳಿದ್ದಾರೆ.

ಇತ್ತೀಚೆಗೆ ಸೂಪರ್‌ಸ್ಟಾರ್ ರಜನಿಕಾಂತ್ ಹಿಮಾಲಯಕ್ಕೆ ಭೇಟಿ ನೀಡಿದ್ದರು. ಈ ವೇಳೆ ಯೋಗಿಗಳ ಜೊತೆ ಮಾತನಾಡುವ ಸಂದರ್ಭದಲ್ಲಿ ಸಿನಿಮಾದ ರಿಲೀಸ್ ಡೇಟ್ ರಿವೀಲ್ ಮಾಡಿದ್ದಾರೆ. ಈ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗ್ತಿದೆ. 'ವೆಟ್ಟೈಯಾನ್' ಚಿತ್ರ ಅಕ್ಟೋಬರ್ 10 ದಸರಾಗೆ ತೆರೆಗೆ ಬರುತ್ತೆ. ಜೂನ್ 10ರಿಂದ 'ಕೂಲಿ' ಸಿನಿಮಾ ಶೂಟಿಂಗ್ ಪ್ರಾರಂಭ ಮಾಡ್ತೀನಿ ಅಂತ ತಲೈವಾ ಹೇಳಿದ್ದಾರೆ.

ದಸರಾ ಹಬ್ಬವನ್ನೇ ಟಾರ್ಗೇಟ್ ಮಾಡಿದ ಸೌತ್ ಸಿನಿ ದುನಿಯಾ, ಒಂದಲ್ಲ ಎರಡಲ್ಲ ಭರ್ತಿ ಮೂರು ಸಿನಿಮಾಗಳು ತೆರೆಗೆ ಬರೋಕೆ ಸಜ್ಜಾಗಿವೆ. ಆದರೆ ಈ ಮೂರು ಸಿನಿಮಾಗಳ ರಿಲೀಸ್ ಡೇಟ್‌ನಲ್ಲಿ ಏನಾದರೂ ಬದಲಾವಣೆ ಆಗಬಹುದಾ? ಅನ್ನುವ ಗುಸು-ಗುಸು ಮಾತುಗಳು ಶುರುವಾಗಿವೆ. ಒಟ್ಟಿನಲ್ಲಿ ಈ ಬಾರಿಯ ದಸರಾ ಸಿನಿ ರಸಿಕರ ಪಾಲಿಗೆ ಡಬಲ್ ಅಲ್ಲ ತ್ರಿಬಲ್ ಧಮಾಕಾ ಆಗೋದಂತು ಪಕ್ಕಾ.




## ಜೂನ್ 14ಕ್ಕೆ ರಿಷಬ್ ಶೆಟ್ಟಿ ನಿರ್ಮಾಣದ 'ಶಿವಮ್ಮ' ಬಿಡುಗಡೆ

ರಿಷಬ್ ಶೆಟ್ಟಿ ಅವರು ನಟ, ನಿರ್ದೇಶಕನಾಗಿ ಮಾತ್ರವಲ್ಲದೇ ನಿರ್ಮಾಪಕನಾಗಿಯೂ ಕನ್ನಡ ಚಿತ್ರರಂಗದಲ್ಲಿ ಸಕ್ರಿಯರಾಗಿದ್ದಾರೆ. 'ರಿಷಬ್ ಶೆಟ್ಟಿ ಫಿಲ್ಮ್ಸ್' ಮೂಲಕ ಅವರು 'ಶಿವಮ್ಮ' ಸಿನಿಮಾ ನಿರ್ಮಾಣ ಮಾಡಿದ್ದಾರೆ. ಈ ಸಿನಿಮಾದಲ್ಲಿ ಗ್ರಾಮೀಣ ಸೊಗಡಿನ ಕಹಾನಿ ಇದೆ. ಈ ಸಿನಿಮಾ ಈಗಾಗಲೇ ಬೆಂಗಳೂರು ಅಂತಾರಾಷ್ಟ್ರೀಯ ಚಿತ್ರೋತ್ಸವ ಸೇರಿದಂತೆ ಪ್ರಪಂಚದ 17ಕ್ಕೂ ಅಧಿಕ ಫಿಲ್ಮ್ ಫೆಸ್ಟ್‌ಗಳಲ್ಲಿ ಪ್ರದರ್ಶನ ಕಂಡಿದೆ. ಅಲ್ಲದೇ ಅನೇಕ ಪ್ರಶಸ್ತಿಗಳನ್ನೂ ಬಾಚಿಕೊಂಡಿದೆ. ಇಂಥ ಹೆಗ್ಗಳಿಕೆ ಇರುವ 'ಶಿವಮ್ಮ' ಸಿನಿಮಾ ಈಗ ಚಿತ್ರಮಂದಿರಗಳಲ್ಲಿ ಬಿಡುಗಡೆಗೆ ಸಜ್ಜಾಗಿದೆ. ಜೂನ್ 14ಕ್ಕೆ ರಾಜ್ಯಾದ್ಯಂತ ಈ ಸಿನಿಮಾ ರಿಲೀಸ್ ಮಾಡಲು ನಿರ್ಮಾಪಕ ರಿಷಬ್ ಶೆಟ್ಟಿ ನಿರ್ಧರಿಸಿದ್ದಾರೆ.

'ಶಿವಮ್ಮ' ಸಿನಿಮಾದ ಟ್ರೇಲರ್ ಇತ್ತೀಚಿಗೆ ಬಿಡುಗಡೆ ಆಯಿತು. ಈ ವೇಳೆ ಚಿತ್ರದ ರಿಲೀಸ್ ದಿನಾಂಕವನ್ನು ತಿಳಿಸಲಾಯಿತು. 'ನಮ್ಮ ಕಥಾ ಸಂಗಮ ಸಿನಿಮಾ ನಿರ್ದೇಶಕರಲ್ಲಿ ಜೈಶಂಕರ್ ಕೂಡ ಒಬ್ಬರು. ಆ ಬಳಿಕ ಜೈಶಂಕರ್ ಅವರು 'ಶಿವಮ್ಮ' ಚಿತ್ರದ ಕಥೆ ಬಗ್ಗೆ ಹೇಳಿದರು. ಅದು ನನಗೆ ಇಷ್ಟವಾಯ್ತು. ನಿರ್ಮಾಣ ಶುರು ಮಾಡಿದೆವು. ಕೊವಿಡ್ ಬರುವುದಕ್ಕೂ ಮುನ್ನ ಆರಂಭವಾದ ಸಿನಿಮಾ ಇದು. ಈ ಸಿನಿಮಾದಲ್ಲಿ ಅಭಿನಯಿಸಿರುವ ಶಿವಮ್ಮ ಪಾತ್ರಧಾರಿ ಶರಣಮ್ಮ ಚಟ್ಟಿ ಅವರು ಉತ್ತರ ಕರ್ನಾಟಕದ ಯರೇಹಂಚಿನಾಳ ಊರಿನವರು. ಜನರಿಗೆ ಈ ಸಿನಿಮಾ ಇಷ್ಟ ಆಗಲಿದೆ' ಎಂದರು ರಿಷಬ್ ಶೆಟ್ಟಿ.



'ನಾನು ಈ ಸಿನಿಮಾ ನೋಡಿದ್ದೇನೆ. ಬೆಂಗಳೂರು ಅಂತಾರಾಷ್ಟ್ರೀಯ ಸಿನಿಮೋತ್ಸವದಲ್ಲಿ ಈ ಚಿತ್ರಕ್ಕೆ ಸಿಕ್ಕ ಪ್ರಶಂಸೆ ನೋಡಿ ಖುಷಿಯಾಯಿತು. ಈಗ ಇದನ್ನು ಜನರ ಮುಂದೆ ತರುತ್ತಿದ್ದೇವೆ. ಜೂನ್ 14ರಂದು ಕರ್ನಾಟಕದಾದ್ಯಂತ ಸಿನಿಮಾ ಬಿಡುಗಡೆ ಆಗುತ್ತಿದೆ. ಬೆಂಗಳೂರಿನಲ್ಲಿ ಮಲ್ಟಿಪ್ಲೆಕ್ಸ್‌ಗಳಲ್ಲಿ ಬಿಡುಗಡೆಯಾದರೆ, ಉತ್ತರ ಕರ್ನಾಟಕದಲ್ಲಿ ಹೆಚ್ಚಿನ ಚಿತ್ರಮಂದಿರಗಳಲ್ಲಿ ತೆರೆ ಕಾಣಲಿದೆ. ಶಿವಮ್ಮ ಎಂಬ ಹೊಸ ನಾಯಕಿಯನ್ನು ಈ ಚಿತ್ರದ ಮೂಲಕ ಪರಿಚಯ ಮಾಡುತ್ತಿದ್ದೇವೆ' ಎಂದು ರಿಷಬ್ ಶೆಟ್ಟಿ ಹೇಳಿದರು.

**'ಶಿವಮ್ಮ' ಸಿನಿಮಾ ಟ್ರೇಲರ್:** ಜೈಶಂಕರ್ ಆರ್ಯರ್ ಮಾತನಾಡಿ ಸಿನಿಮಾ ಬಗ್ಗೆ ವಿವರಿಸಿದರು. 'ನಾನು ಮೂಲತಃ ಐಟಿ ಕ್ಷೇತ್ರದ ಉದ್ಯೋಗಿ. ಬೆಂಗಳೂರಿನಲ್ಲೇ ಬೆಳೆದಿದ್ದು. ಆದರೆ ನನ್ನ ತಂದೆಯ ಊರು ಯರೇಹಂಚಿನಾಳ. ಒಂದಷ್ಟು ಕಿರುಚಿತ್ರಗಳನ್ನು ನಿರ್ದೇಶಿಸುತ್ತಿದ್ದ ನನಗೆ ನನ್ನ ಊರಿನ ಬಗ್ಗೆ ಸಿನಿಮಾ ಮಾಡುವ ಆಸೆ ಉಂಟಾಯಿತು. ಆದ್ದರಿಂದ ನಮ್ಮ ಊರಿಗೆ ಹೋದೆ. ಕೊವಿಡ್ ಕಾರಣದಿಂದ 1 ವರ್ಷ ಅಲ್ಲೇ ಇರಬೇಕಾಯ್ತು. ಅದರಿಂದ ನನಗೆ ಅನುಕೂಲ ಆಯಿತು. ಅಲ್ಲಿನ ಜನರ ಬಗ್ಗೆ ಮತ್ತು ಸಂಸ್ಕೃತಿ ಬಗ್ಗೆ ತಿಳಿದುಕೊಳ್ಳಲು ಸಮಯ ಸಿಕ್ಕಿತ್ತು. ರಿಷಬ್ ಶೆಟ್ಟಿ ಅವರು ನಿರ್ಮಾಣಕ್ಕೆ ಮುಂದೆ ಬಂದರು. ನಮ್ಮೂರಿನ ಶರಣಮ್ಮ ಚಟ್ಟಿ ಅವರು ಶಿವಮ್ಮನ ಪಾತ್ರಕ್ಕೆ ಆಯ್ಕೆಯಾದರು. ಆ ಊರಿನ ಹೆಚ್ಚಿನ ಜನರು ಈ ಸಿನಿಮಾದಲ್ಲಿ ನಟಿಸಿದ್ದಾರೆ' ಎಂದು ನಿರ್ದೇಶಕರು ಹೇಳಿದ್ದಾರೆ.

### ಅಫ್ಘಾನಿಸ್ತಾನ್ ತಂಡಕ್ಕೆ ಅಮೋಘ ಜಯ

# ಕೇವಲ 58 ರನ್‌ಗೆ ಆಲೌಟ್

ಗಯಾನಾದ ಪ್ರಾವಿಡೆನ್ಸ್ ಸ್ಟೇಡಿಯಂನಲ್ಲಿ ನಡೆದ ಟಿ20 ವಿಶ್ವಕಪ್‌ನ 5ನೇ ಪಂದ್ಯದಲ್ಲಿ ಅಫ್ಘಾನಿಸ್ತಾನ್ ತಂಡ ಅಮೋಘ ಗೆಲುವು ದಾಖಲಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಉಗಾಂಡ ತಂಡವು ಮೊದಲು ಬೌಲಿಂಗ್ ಆಯ್ದುಕೊಂಡಿತು. ಅದರಂತೆ ಮೊದಲ ಬ್ಯಾಟ್ ಮಾಡಿದ ಅಫ್ಘಾನಿಸ್ತಾನ್ ತಂಡಕ್ಕೆ ಆರಂಭಿಕರಾದ ರಹಮಾನುಲ್ಲಾ ಗುರ್ಬಾಝ್ ಹಾಗೂ ಇಬ್ರಾಹಿಂ ಝದ್ರಾನ್ ಉತ್ತಮ ಆರಂಭ ಒದಗಿಸಿದ್ದರು.

ಮೊದಲ ವಿಕೆಟ್‌ಗೆ 154 ರನ್ ಗಳ ಜೊತೆಯಾಟವಾಡಿದ ಬಳಿಕ ಇಬ್ರಾಹಿಂ ಝದ್ರಾನ್ (74) ಮಸಾಬ ಎಸೆತದಲ್ಲಿ ಬೌಲ್ಡ್ ಆದರು. ಮತ್ತೊಂದೆಡೆ ಬಿರುಸಿನ ಬ್ಯಾಟಿಂಗ್ ಮುಂದುವರೆಸಿದ ಗುರ್ಬಾಝ್ 45 ಎಸೆತಗಳಲ್ಲಿ 4 ಭರ್ಜರಿ ಸಿಕ್ಸ್ ಹಾಗೂ 4 ಫೋರ್ ಗಳೊಂದಿಗೆ 76 ರನ್ ಸಿಡಿಸಿದರು. ಇನ್ನು ಮಧ್ಯಮ ಕ್ರಮಾಂಕದಲ್ಲಿ ಮೊಹಮ್ಮದ್ ನಬಿ 14 ರನ್ ಬಾರಿಸಿದರು. ಈ ಮೂಲಕ ಅಫ್ಘಾನಿಸ್ತಾನ್ ತಂಡವು ನಿಗದಿತ 20 ಓವರ್ ಗಳಲ್ಲಿ 5 ವಿಕೆಟ್ ಕಳೆದುಕೊಂಡು 183 ರನ್ ಕಲೆಹಾಕಿತು.

184 ರನ್ ಗಳ ಗುರಿಯನ್ನು ಬೆನ್ನತ್ತಿದ ಉಗಾಂಡ ತಂಡಕ್ಕೆ ಆರಂಭಿಕ ಆಘಾತನ ನೀಡುವಲ್ಲಿ ಅಫ್ಘಾನ್ ಬೌಲರ್ ಗಳು ಯಶಸ್ವಿಯಾಗಿದ್ದರು. ಕೇವಲ 18 ರನ್ ಗಳಿಸುವಷ್ಟರಲ್ಲಿ 5 ವಿಕೆಟ್ ಉರುಳಿಸಿದ ಅಫ್ಘಾನ್ ಬೌಲರ್ ಗಳು ಪಂದ್ಯದ ಮೇಲೆ ಹಿಡಿತ ಸಾಧಿಸಿದರು. ಈ ಆಘಾತದಿಂದ ಪಾರಾಗುವ ಮುನ್ನವೇ ಉಗಾಂಡ ತಂಡಕ್ಕೆ ಎಡಗೈ ವೇಗಿ ಫಝುಲ್ ಹಕ್ ಫಾರೂಖಿ ಬ್ಯಾಕ್ ಟು ಬ್ಯಾಕ್ ಆಘಾತ ನೀಡಿದ್ದರು. ಪರಿಣಾಮ ಉಗಾಂಡ ತಂಡವು 16 ಓವರ್ ಗಳಲ್ಲಿ 58 ರನ್ ಗಳಿಸಿ ಸರ್ವಪತನ ಕಂಡಿತು.




ಅಫ್ಘಾನಿಸ್ತಾನ್ ಪರ ಕರಾರುವಾಕ್ ದಾಳಿ ಸಂಘಟಿಸಿದ ಫಝುಲ್ಲಕ್ ಫಾರೂಖಿ 4 ಓವರ್ ಗಳಲ್ಲಿ ಕೇವಲ 9 ರನ್ ನೀಡಿ 5 ವಿಕೆಟ್ ಕಬಳಿಸಿ ಮಿಂಚಿದ್ದಾರೆ. ಹಾಗೆಯೇ ನವೀನ್ ಉಲ್ ಹಕ್ ಹಾಗೂ ರಶೀದ್ ಖಾನ್ ತಲಾ 2 ವಿಕೆಟ್ ಪಡೆದಿದ್ದಾರೆ.

ಈ ಅಮೋಘ ಗೆಲುವಿನೊಂದಿಗೆ ಅಫ್ಘಾನಿಸ್ತಾನ್ ಶುಭಾರಂಭ ಮಾಡಿದೆ. ಅಲ್ಲದೆ ಜೂನ್ 8 ರಂದು ನಡೆಯಲಿರುವ ತನ್ನ 2ನೆ ಪಂದ್ಯದಲ್ಲಿ ನ್ಯೂಝಿಲೆಂಡ್ ವಿರುದ್ಧ ಕಣಕ್ಕಿಳಿಯಲಿದೆ.

# ಟಿ20 ವಿಶ್ವಕಪ್‌ನೊಂದಿಗೆ ಗುಡ್ ಬೈ

ಈ ಬಾರಿಯ ಟಿ20 ವಿಶ್ವಕಪ್ ಮುಕ್ತಾಯದೊಂದಿಗೆ ಟೀಮ್ ಇಂಡಿಯಾ ಕೋಚ್ ಸ್ಥಾನದಿಂದ ಕೆಳಗಿಳಿಯುವುದಾಗಿ ರಾಹುಲ್ ದ್ರಾವಿಡ್ ತಿಳಿಸಿದ್ದಾರೆ. ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ದ್ರಾವಿಡ್, ಈ ವಿಶ್ವಕಪ್ ನೊಂದಿಗೆ ನನ್ನ ಕಾರ್ಯಾವಧಿ ಮುಗಿಯಲಿದ್ದು, ಇದಾಗ್ಯೂ ಮತ್ತೊಮ್ಮೆ ಮುಖ್ಯ ಕೋಚ್ ಸ್ಥಾನಕ್ಕೆ ಅರ್ಜಿ ಸಲ್ಲಿಸುವುದಿಲ್ಲ ಎಂದು ದೃಢಪಡಿಸಿದ್ದಾರೆ.

ದರೊಂದಿಗೆ ಟೀಮ್ ಇಂಡಿಯಾ ಜೊತೆಗಿನ ರಾಹುಲ್ ದ್ರಾವಿಡ್ ಅವರ ನಂಟು ಈ ಬಾರಿಯ ಟಿ20 ವಿಶ್ವಕಪ್ ನೊಂದಿಗೆ ಮುಗಿಯಲಿದೆ. ನವೆಂಬರ್ 2021 ರಲ್ಲಿ ದ್ರಾವಿಡ್ ಭಾರತ ತಂಡದ ಮುಖ್ಯ ಕೋಚ್ ಆಗಿ ನೇಮಕಗೊಂಡಿದ್ದರು. ಇದಾದ ಬಳಿಕ ಟೀಮ್ ಇಂಡಿಯಾ ಹಲವು ಸರಣಿಗಳಲ್ಲಿ ಜಯ ಸಾಧಿಸಿತ್ತು.

ಇದಾಗ್ಯೂ ಐಸಿಸಿ ಟೂರ್ನಿ ಗೆಲ್ಲಲಾಗಲಿಲ್ಲ. ಇದರ ನಡುವೆ ಭಾರತ ತಂಡವು 2022 ರಲ್ಲಿ ಟಿ20 ವಿಶ್ವಕಪ್, ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ಆಡಿದೆ. ಹಾಗೆಯೇ 2023 ರಲ್ಲಿ ಏಕದಿನ ವಿಶ್ವಕಪ್ ನಲ್ಲಿ ಫೈನಲ್ ಕಣಕ್ಕಿಳಿದಿದೆ. ಆದರೆ ರಾಹುಲ್ ದ್ರಾವಿಡ್ ಕೋಚಿಂಗ್ ನಲ್ಲಿ ಟೀಮ್ ಇಂಡಿಯಾಗೆ ಐಸಿಸಿ ಟ್ರೋಫಿ ಎತ್ತಿ ಹಿಡಿಯಲು ಸಾಧ್ಯವಾಗಿಲ್ಲ.

ಈ ಬಾರಿಯ ಟಿ20 ವಿಶ್ವಕಪ್ ನೊಂದಿಗೆ ರಾಹುಲ್ ದ್ರಾವಿಡ್ ಅವರ ಕೋಚಿಂಗ್ ಕೆರಿಯರ್ ಮುಗಿಯಲಿದೆ. ಹೀಗಾಗಿ ಐಸಿಸಿ ಟ್ರೋಫಿ ಗೆಲ್ಲಲು ಇದುವೇ ಕೊನೆಯ ಅವಕಾಶ. ಅದರಂತೆ ಟಿ20 ವಿಶ್ವಕಪ್ ನೊಂದಿಗೆ ಟೀಮ್ ಇಂಡಿಯಾ ಆಟಗಾರರು ರಾಹುಲ್ ದ್ರಾವಿಡ್ ಗೆ ಬೀಳ್ಕೊಡಲಿದ್ದಾರಾ ಕಾದು ನೋಡಬೇಕಿದೆ.



### ರಾಜರಾಜೇಶ್ವರ ದೇವಾಲಯಕ್ಕೆ ಹೋಗಿದ್ದೇನೆ

# ಆ ದೇವರೇ ಶಿಕ್ಷೆ ಕೊಡಲಿ

**ಬೆಂಗಳೂರು:** ಡಿಕೆ ಶಿವಕುಮಾರ್ ಅವರಿಗೆ ರಕ್ಷಣೆ ಮಾಡೋದಕ್ಕೆ ದೇವರು ಇರುವಂತೆ ನಮಗೂ ದೇವರಿದ್ದಾನೆ. ನಾನು ರಾಜರಾಜೇಶ್ವರ ದೇವಾಲಯಕ್ಕೆ ಹೋಗಿದ್ದೇನೆ. ರಾಜರಾಜೇಶ್ವರ ದೇವರಿಗೇ ಇದನ್ನ ಬಿಡ್ತೀನಿ, ರಾಜರಾಜೇಶ್ವರ ದೇವರೆ ಅವರಿಗೆ ಶಿಕ್ಷೆ ಕೊಡಲಿ ಎಂದು ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಹೇಳಿದ್ದಾರೆ.

ನಗರದ ಜೆಡಿಎಸ್ ಶಾಸಕಾಂಗ ಪಕ್ಷದ ಕಚೇರಿಯಲ್ಲಿಂದು ಸಭೆ ನಡೆಸಿ ಮಾತನಾಡಿದ ಅವರು, 'ನಮ್ಮ ಸರ್ಕಾರದ ನಾಶಕ್ಕಾಗಿ ನನ್ನ ಹಾಗೂ ಸಿಎಂ ವಿರುದ್ಧ ಶತ್ರು ಭೈರವಿ ಯಾಗ ಮಾಡಿಸುತ್ತಿದ್ದಾರೆ' ಎಂಬ ಡಿಕೆ ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ್ದಾರೆ. ''ಆಚಾರವಿಲ್ಲದ ನಾಲಿಗೆ, ನಿನ್ನ ನೀಚ ಬುದ್ಧಿ ಬಿಡು ನಾಲಿಗೆ'' ಎಂಬ ಪುರಂದರ ದಾಸರ ಕೀರ್ತನೆಯ ಮೂಲಕ ಡಿಕೆಶಿಗೆ ತಿರುಗೇಟು ನೀಡಿದ್ದಾರೆ.

**ಯಾಗ ಮಾಡಿಸೋದು ಡಿಕೆಶಿ ಸಂಸ್ಕೃತಿ:** ಡಿಸಿಎಂ ಆಗಿದ್ದರೂ ಆ ಸ್ಥಾನದ ಗೌರವ, ಮೌಲ್ಯ ಏನು ಅಂತ ಅವರಿಗೆ ಅರ್ಥ ಆಗಿಲ್ಲ. ಒಟ್ಟಿನಲ್ಲಿ ನಮ್ಮ ಕುಟುಂಬ ಮುಗಿಸಲೇಬೇಕು ಅಂತ ಶ್ರಮಪಡ್ತಿದ್ದಾರೆ. ಅದರ ಮುಂದುವರಿದ ಭಾಗವಾಗಿ ಯಾಗದ ಮಾತು ಹೇಳ್ತಿದ್ದಾರೆ. ನಮ್ಮ ಕುಟುಂಬದಲ್ಲಿ ನನಗೆ ತಿಳಿವಳಿಕೆ ಬಂದಾಗಿನಿಂದ ಕುರಿ, ಕೋಣ, ಮೇಕೆ ಕಡಿಯೋದು ಯಾವತ್ತೂ ಮಾಡಿಲ್ಲ. ನಾವು ದೇವರ ಪೂಜೆ ಮಾಡ್ತೀವಿ. ಹಿಂದೂ ಸಂಸ್ಕೃತಿಯಲ್ಲಿ ಇರೋ ಧಾರ್ಮಿಕವಾಗಿ ನಾವು ಪೂಜೆ ಮಾಡ್ತೀವಿ. ನಮಗೆ ಇರೋ ದೋಷ ಪರಿಹಾರಕ್ಕೆ ದೇವಾಲಯಕ್ಕೆ ಹೋಗ್ತೀವಿ ಹೊರತು ಯಾಗ ಮಾಡುವುದಿಲ್ಲ. ಯಾಗ ಮಾಡೋದು ಡಿಕೆಶಿ ಸಂಸ್ಕೃತಿ ಎಂದು ವಾಗ್ದಾಳಿ ನಡೆಸಿದ್ದಾರೆ.



**ಕಳ್ಳನಿಗೆ ಮಳ್ಳ ಸಾಕ್ಷಿ:** ಕಳ್ಳನಿಗೆ ಮಳ್ಳನ ಸಾಕ್ಷಿ ಎಂಬಂತೆ ಅವರೆ ತಮ್ಮ ನಮ್ಮ ಹೆಸರು ಹೇಳ್ತಾರೆ. ನಾನು ಎರಡು ಬಾರಿ ಸಿಎಂ ಆಗಿದ್ದೆ ಕೋಣ, ಕುರಿ ಕಡಿದು ಆಗಿಲ್ಲ. ದೇವರು ಕೊಟ್ಟು, ಆಗಿದ್ದೇನೆ. ದೇವೇಗೌಡರು ಅಧಿಕಾರ ಅನುಭವಿಸಿದ್ದೇ ಕಡಿಮೆ ಅವಧಿ. ಅದೇನು ಕೋಳಿ, ಕುರಿ ಕಡಿದು ಮಾಡಿ ಆಗಿದ್ದಾ? ಡಿಕೆ ಶಿವಕುಮಾರ್ ದೇವರು, ಶರಣರ ಜೊತೆ ಚೆಲ್ಲಾಟ ಆಡಬಾರದು. ಡಿಸಿಎಂ ನನಗೆ ಸ್ಪಷ್ಟ ಮಾಹಿತಿ ಇದೆ ಅಂತ ಹೇಳಿದ್ದಾರೆ. ಈಗ ಎಲ್ಲದ್ದಕ್ಕೂ ಎಸ್‌ಐಟಿ ಮಾಡ್ತಾರೆ, ಇದಕ್ಕೂ ಒಂದು ಎಸ್‌ಐಟಿ ತನಿಖೆ ಮಾಡಸಲಿ ಎಂದು ವ್ಯಂಗ್ಯವಾಡಿದ್ದಾರೆ.

**ಗೌಡರ ಕುಟುಂಬ ಮುಗಿಸುವ ಸಂಚು:** ನಾನು ಇತ್ತೀಚೆಗೆ ವಿಶ್ರಾಂತಿಗೆಂದು ಕಬಿನಿ ಹಿನ್ನಿರಿಗೆ ಹೋಗಿದ್ದೆ. ಅದಕ್ಕೂ ಕೇರಳಕ್ಕೆ ಮಾತ ಮಾಡಿಸೋಕೆ ಅಂತ ಹೇಳಿದ್ರು. ನನ್ನ ಮೊಮ್ಮಗನ ಜೊತೆ ವಿಶ್ರಾಂತಿಗೆ ಹೋಗಿದ್ದೆ. ನಾನು ಹೋಗಿ ಯಾಗ ಮಾಡಿಸಬೇಕಾ? ಕಾನೂನಿನ ಪ್ರಕಾರ ಕೋಣ, ಕುರಿ ಬಲಿ ಕೊಟ್ಟು ನಾಶ ಮಾಡೋದು ಅಪರಾಧ. ಆಗ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು ತಾನೆ. ಜನರಲ್ಲಿ ನಮ್ಮ ಕುಟುಂಬ ನೆಲ ಕಚ್ಚಿಸಬೇಕು ಅಂತ ಇಂತಹ ಸುದ್ದಿ ಹರಡಿಸುತ್ತಿದ್ದಾರೆ. ಇಡೀ ದೇವೇಗೌಡ ಕುಟುಂಬ ನಾಶ ಮಾಡೋಕೆ ಮುಂದಾಗಿದ್ದಾರೆ. ಇದು ಅದರ ಮುಂದುವರಿದ ಭಾಗ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಯಾವಾಗ ಬಿಜೆಪಿ ಜೊತೆಗೆ ಹೊಂದಾಣಿಕೆ ಆಯ್ತು ಅವತ್ತಿಂದ ಇವರಿಗೆ ಉಳಿಗಾಲ ಇಲ್ಲ ಅಂತ ಹೀಗೆಲ್ಲ ಮಾಡ್ತಿದ್ದಾರೆ. 25 ಸ್ಥಾನ ಗೆಲ್ಲುತ್ತೇವೆ ಅಂತ ಓಡಾಡುತ್ತಿದ್ದರು. ನಾವು ಮೈತ್ರಿ ಆದಾಗ ಅವರಿಗೆ ಗೆಲುವು ಸಾಧ್ಯವಿಲ್ಲ ಅಂತಾ ಗೊತ್ತಾಯ್ತು, ಅದಕ್ಕೆ ನಮ್ಮ ಕುಟುಂಬವನ್ನ ಟಾರ್ಗೆಟ್ ಮಾಡ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

# ಪ್ರಸ್ತುತ ಕಾಣುತ್ತಿರುವುದು ಅಡ್ಜಸ್ಟ್‌ಮೆಂಟ್ ಪಾಲಿಟಿಕ್ಸ್

**ಮಂಡ್ಯ:** ಪ್ರಸ್ತುತ ದಿನಗಳಲ್ಲಿ ನಾವು ಕಾಣುತ್ತಿರುವುದು ಅಡ್ಜಸ್ಟ್ ಮೆಂಟ್ ಪಾಲಿಟಿಕ್ಸ್. ಯಾರು, ಯಾವಾಗ, ಯಾರ ಜೊತೆ ಹೋಗುತ್ತಾರೆ ಎನ್ನುವುದೇ ಅರ್ಥವಾಗುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಸೂಚ್ಯವಾಗಿ ಹೇಳಿದರು.

ನಗರದ ಪಿಇಎಸ್ ಕಾಲೇಜಿನ ಸ್ವಾಮಿ ವಿವೇಕಾನಂದ ರಂಗಮಂದಿರದಲ್ಲಿ ಕರ್ನಾಟಕ ಸಂಘ, ಇಂಡುವಾಳು ಎಚ್. ಹೊನ್ನಯ್ಯ ಕುಟುಂಬ ವರ್ಗದ ಸಹಯೋಗದಲ್ಲಿ ಆಯೋಜಿಸಿದ್ದ ಇಂಡುವಾಳು ಎಚ್.ಹೊನ್ನಪ್ಪ ಅವರನ್ನು ಕುರಿತ 'ನೆಲದ ಕಣ್ಣು' ಕೃತಿ ಬಿಡುಗಡೆ ಹಾಗೂ ಎಚ್.ಹೊನ್ನಪ್ಪ ಕ್ರೀಡಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು.



ಹೊಂದಾಣಿಕೆ ರಾಜಕಾರಣ ಒಮ್ಮೊಮ್ಮೆ ಸಾಕಷ್ಟು ಇಕ್ಕಟ್ಟಿಗೆ ಸಿಲುಕಿಸುವುದು ಸಹಜ. ಕೆಲವೊಮ್ಮೆ ಅನಿವಾರ್ಯವೂ ಆಗುತ್ತದೆ. ಅದರೊಂದಿಗೆ ಹೊಂದಿಕೊಂಡು ರಾಜಕಾರಣ ಮುನ್ನಡೆಸುವುದು ಸುಲಭವೂ ಅಲ್ಲ ಎಂದು ಹೇಳಿದರು. ರಾಜಕಾರಣಿಗಳಿಗೆ ಪ್ರಶಂಸೆಯನ್ನು ಜೀರ್ಣಿಸಿಕೊಳ್ಳುವ ಶಕ್ತಿ ಇರಬೇಕು. ಪ್ರಶಂಸೆಯನ್ನು ಜೀರ್ಣಿಸಿಕೊಳ್ಳಲು ಸಾಧ್ಯವಾಗದಿದ್ದರೆ ಅಹಂಕಾರ ಹೆಚ್ಚಾಗುತ್ತದೆ. ಇದರಿಂದ ಮುಂದೆ ಯಾವ ಕೆಲಸವನ್ನು ಮಾಡಲು ಸಾಧ್ಯವಾಗುವುದಿಲ್ಲ. ಪ್ರಶಂಸೆ, ಟೀಕೆಗಳನ್ನು ಜೀರ್ಣಿಸಿಕೊಂಡಾಗ ಆ ವ್ಯಕ್ತಿ ಸಮಾಜಕ್ಕೆ ಶಕ್ತಿಯಾಗುತ್ತಾನೆ, ಜನರ ಗೌರವಕ್ಕೆ ಪಾತ್ರರಾಗಿ ಆದರ್ಶ ವ್ಯಕ್ತಿಯಾಗಿಯೂ ರೂಪುಗೊಳ್ಳುತ್ತಾನೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಅವಕಾಶವಾದಿ ರಾಜಕಾರಣಿಗಳ ಸಂಖ್ಯೆ ಹೆಚ್ಚಾಗಿರುವುದನ್ನು ನಾನು ನೋಡಿದ್ದೇನೆ. ಹಲವಾರು ನಿಗಮ ಮಂಡಳಿ, ವಿಧಾನ ಪರಿಷತ್ ಸ್ಥಾನ, ಹೌಸಿಂಗ್ ಬೋರ್ಡ್ ನಂತಹ ಹುದ್ದೆಗಳನ್ನು ಕೊಟ್ಟರೂ ತೃಪ್ತರಾಗದೆ ಪುಷ್ಪಕ ವಿಮಾನವನ್ನೇರಿ ಹೊರಟು ಹೋಗುತ್ತಾರೆ. ಹಾಗಾಗಿ ನಿಷ್ಠಾವಂತ, ಬದ್ಧತೆಯುಳ್ಳ ರಾಜಕಾರಣಿಗಳ ಅವಶ್ಯಕತೆ ಇಂದು ಹೆಚ್ಚಾಗಿದೆ ಎಂದು ಅಭಿಪ್ರಾಯಪಟ್ಟರು.

ಎಚ್.ಹೊನ್ನಪ್ಪ ಅವರಿಗೆ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸ್ಥಾನವನ್ನು ನೀಡಿದ್ದು, ನಂತರದಲ್ಲಿ ಮೈಶುಗರ್ ಅಧ್ಯಕ್ಷರ ಸ್ಥಾನದ ಆಫರ್ ನೀಡಲಾಗಿತ್ತು. ಆದರೆ, ಅದನ್ನು ನಯವಾಗಿಯೇ ತಿರಸ್ಕರಿಸಿದ್ದ ಅವರು, ಆ ಹುದ್ದೆಯನ್ನು ನಾನು ಈಗಾಗಲೇ ನಿರ್ವಹಿಸಿದ್ದೇನೆ. ಅದನ್ನು ಬೇರೆಯವರಿಗೆ ನೀಡುವಂತೆ ತಿಳಿಸಿದ್ದರು. ಇಂತಹ ಉದಾರ ಮನಸ್ಸಿನ ರಾಜಕಾರಣಿಗಳನ್ನು ಇಂದು ಕಾಣುವುದು ಕಷ್ಟ ಎಂದು ಹೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com